

ಸುದ್ದಿಗಳ ಹೊನಲು

# ಸಂಜೆ ಮುಗಿಲು

ವೇಣು ಸಾರಥ್ಯದಲ್ಲಿ...

ಸಂಪುಟ: 21, ಸಂಚಿಕೆ: 295, ಪುಟಗಳು: 8, ಶುಕ್ರವಾರ, 2 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3



ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

### ಸುಭಾಷಿತ

ಕಾಲದೊಂದಿಗೆ ಮಾಡಿಕೊಂಡ ಒಪ್ಪಂದವೇ ಬದುಕು.

। ಬಸವಣ್ಣ

### ಪಂಚಾಂಗ

(ಶುಕ್ರವಾರ 2, ಆಗಸ್ಟ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ಗ್ರೀಷ್ಮ ಋತು,
- ಆಷಾಡ ಮಾಸ, ಕೃಷ್ಣಪಕ್ಷ,
- ತ್ರಯೋದಶಿ, ಶುಕ್ರವಾರ,
- ಆರಿದ್ರ ನಕ್ಷತ್ರ / ಪುನರ್ವಸು ನಕ್ಷತ್ರ.
- ರಾಹುಕಾಲ : 10:54 ರಿಂದ 12:29
- ಗುಳಿಕಕಾಲ : 07:44 ರಿಂದ 09:19
- ಯಮಗಂಡಕಾಲ : 03:39 ರಿಂದ 05:14

## ಸಂಕ್ಷಿಪ್ತ ಸುದ್ದಿ

### ಪ್ರಜ್ವಲ್ ರೇವಣ್ಣ ಪೆನ್ ಡ್ರೈವ್ ಕೇಸ್ ವಿಡಿಯೋಗಳು ಅಸಲಿ

**ಬೆಂಗಳೂರು:** ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣಕ್ಕೆ ಸ್ಫೋಟಕ ತಿರುವು ಸಿಕ್ಕಿದೆ. ಪೆನ್‌ಡ್ರೈವ್‌ನಲ್ಲಿ ಇರುವ ಮತ್ತು ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದ ಅಶ್ಲೀಲ ವಿಡಿಯೋಗಳು ಅಸಲಿ ಎನ್ನುವುದು ವಿಧಿ ವಿಜ್ಞಾನ ಪ್ರಯೋಗಾಲಯದ ವರದಿಯಲ್ಲಿ ದೃಢಪಟ್ಟಿದೆ.



ಮಹಿಳೆಯರ ಮೇಲೆ ಅತ್ಯಾಚಾರ ನಡೆಸಿದ ಆರೋಪದಡಿ ಪ್ರಜ್ವಲ್ ರೇವಣ್ಣ ಅವರ ವಿರುದ್ಧ ಪ್ರಕರಣ ದಾಖಲಾಗಿತ್ತು. ಅಶ್ಲೀಲ ವಿಡಿಯೋಗಳು ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆದ ಬೆನ್ನಲ್ಲೇ ಎಸ್‌ಐಟಿ ಎಲ್ಲಾ ವಿಡಿಯೋಗಳನ್ನು ಸಂಗ್ರಹಿಸಿ ಎಫ್‌ಎಸ್‌ಎಲ್‌ಗೆ ಕಳುಹಿಸಿತ್ತು. ಈಗ ಪೊಲೀಸರ ಕೈಗೆ ಎಫ್‌ಎಸ್‌ಎಲ್ ವರದಿ ಸೇರಿದೆ. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ್ದ ಅಶ್ಲೀಲ ವಿಡಿಯೋಗಳು ಅಸಲಿಯಾಗಿದೆ. ಈ ವಿಡಿಯೋಗಳನ್ನು ಎಡಿಟಿಂಗ್ ಅಥವಾ ಮಾರ್ಫಿಂಗ್ ಮಾಡಿಲ್ಲ ಎಂದು ವರದಿಯಲ್ಲಿ ಉಲ್ಲೇಖಿಸಿದೆ ಎಂದು ಮೂಲಗಳು ತಿಳಿಸಿವೆ. ಪುಟ 2

### ಬೆಂಗಳೂರಿನಲ್ಲಿ ಅಟ್ಟಾಡಿಸಿ ಯುವಕನ ಕೊಲೆ

**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಹಾಡಹಗಲೇ ಯುವಕನ್ನ ಅಟ್ಟಾಡಿಸಿ ಮಾರಕಾಸ್ತ್ರಗಳಿಂದ ಹೊಡೆದು ರಸ್ತೆ ಮಧ್ಯೆ ಕೊಚ್ಚಿ ಕೊಲೆ ಮಾಡಿರುವ ಘಟನೆ ನಡೆದಿದೆ.



ಶೇಷಾದ್ರಿಪುರಂ ಪೊಲೀಸ್ ಠಾಣೆಯ ಕೂಗಳತೆ ದೂರದಲ್ಲಿರುವ ರಸೆಲ್ದಾರ್ ಸ್ಟ್ರೀಟ್‌ನಲ್ಲಿ ಸಂಜೆ ನಾಲ್ಕು ಗಂಟೆ ಸುಮಾರಿಗೆ ಬೈಕ್‌ನಲ್ಲಿ ಬಂದ ಗ್ಯಾಂಗ್ ಮನಬಂದಂತೆ ಲಾಂಗು ಮಚ್ಚುಗಳಿಂದ ದಾಳಿ ಮಾಡಿ ಕೊಲೆ ಮಾಡಿ ಪರಾರಿಯಾಗಿದೆ.ಅಜಿತ್ ಕುಮಾರ್ (27) ಕೊಲೆಯಾದ ಯುವಕ. ಅಜಿತ್ ಕುಮಾರ್ 2022 ರಲ್ಲಿ ಶೇಷಾದ್ರಿಪುರಂ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಕೊಲೆ ಕೇಸ್‌ನಲ್ಲಿ ಜೈಲಿಗೆ ಹೋಗಿದ್ದ. ಪುಟ 2

### 'ಮೈಸೂರು ಚಲೋ' ಗೊಂದಲಕ್ಕೆ ತೆರೆ

## ನಾಳೆ ಹೆಚ್‌ಡಿಕೆ, ಬಿಎಸ್‌ವೈರಿಂದ ಚಾಲನೆ

**ಬೆಂಗಳೂರು:** ನಾಳೆಯಿಂದ ಆರಂಭವಾಗಬೇಕಿರುವ ಪಾದಯಾತ್ರೆ ವಿಚಾರದಲ್ಲಿ ಉಂಟಾಗಿದ್ದ ಗೊಂದಲಕ್ಕೆ ಕೊನೆಗೂ ತೆರೆ ಬಿದ್ದಿದೆ. ಕೆಲವೊಂದು ಕಾರಣದಿಂದ ಬಹಿರಂಗವಾಗಿ ಅಸಮಾಧಾನ ಹೊರಹಾಕಿದ್ದ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಜೊತೆ ಪ್ರಹ್ಲಾದ್ ಜೋಶಿ ಸಂಧಾನ ಸಭೆ ನಡೆಸಿ, ಗೊಂದಲ ಇಲ್ಲವಾಗಿಸಿದ್ದಾರೆ.



ಸಂಸತ್ ಭವನದ ಕುಮಾರಸ್ವಾಮಿ ಕಚೇರಿಯಲ್ಲಿ ನಡೆದ ಈ ಸಂಧಾನ ಸಭೆಯಲ್ಲಿ ರಾಜ್ಯ ಬಿಜೆಪಿ ಉಸ್ತುವಾರಿ ರಾಧಾಮೋಹನ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಪಾಲ್ಗೊಂಡಿದ್ದರು. ಪ್ರೀತಂ ಗೌಡಗೆ ದೊಡ್ಡ ಜವಾಬ್ದಾರಿಗಳನ್ನು ನೀಡಿಲ್ಲ. ನೀವು ಪಾದಯಾತ್ರೆಯಲ್ಲಿ ಪಾಲ್ಗೊಳ್ಳಿ ಎಂದು ಬಿಜೆಪಿಗರು ಮನವೊಲಿಸಿದರು. ಇದಕ್ಕೆ ಕುಮಾರಸ್ವಾಮಿ ಕೂಡ ಒಪ್ಪಿಗೆ ಸೂಚಿಸಿದ್ದಾರೆ ಎನ್ನಲಾಗಿದೆ.

ಪಾದಯಾತ್ರೆಯನ್ನು ಕೇಂದ್ರ ಮಂತ್ರಿ ಕುಮಾರಸ್ವಾಮಿ ಮತ್ತು ಯಡಿಯೂರಪ್ಪ ಉದ್ಘಾಟಿಸಲಿದ್ದಾರೆ. ಸಭೆ ಬಳಿಕ ಪ್ರತ್ಯೇಕವಾಗಿ ಮಾತಾಡಿದ ಕುಮಾರಸ್ವಾಮಿ, ನಮಗೆ ಪ್ರೀತಂ ಗೌಡ ಸಮಸ್ಯೆಯಲ್ಲ. ಪಾದಯಾತ್ರೆಯನ್ನ ಬಿಜೆಪಿಯ ಕಾರ್ಯಕ್ರಮದ ರೀತಿಯಲ್ಲಿ ಬಿಂಬಿಸುವುದಕ್ಕೆ ಹೋಗಿದ್ದರು. ಇದನ್ನೆಲ್ಲ ಕುಳಿತು ಸರಿಪಡಿಸೋ ಕೆಲಸವಾಗಿದೆ ಎಂದು ಹೇಳಿದ್ದಾರೆ. ಪುಟ 2

### ಬಿಜೆಪಿ-ಜೆಡಿಎಸ್ ಪಾದಯಾತ್ರೆ

## ಬೆಂಗಳೂರಿನಲ್ಲಿ ಇಲ್ಲ ಅವಕಾಶ

**ಬೆಂಗಳೂರು:** ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಹಾಗೂ ಜೆಡಿಎಸ್ ಶನಿವಾರದಿಂದ ಮೈಸೂರು ಚಲೋ ಪಾದಯಾತ್ರೆ ಹಮ್ಮಿಕೊಂಡಿವೆ. ಆದರೆ, ತಮಗೆ ಈ ಬಗ್ಗೆ ಮಾಹಿತಿ ಇಲ್ಲ. ಯಾರೂ ವಿನಂತಿ ಮಾಡಿಲ್ಲ. ನಗರದಲ್ಲಿ ಪ್ರತಿಭಟನೆಗೆ ಅವಕಾಶ ಇಲ್ಲ ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ. ದಯಾನಂದ್ ಸ್ಪಷ್ಟಪಡಿಸಿದರು.



ಪಾದಯಾತ್ರೆ ಎಲ್ಲಿಂದ, ಯಾವ ರೀತಿ ಶುರು ಮಾಡುತ್ತಾರೆ ಎಂಬುದು ಇನ್ನೂ ಗೊತ್ತಿಲ್ಲ. ನಗರದಲ್ಲಿ ಪ್ರತಿಭಟನೆಗೆ, ರ್‍ಯಾಲಿಗೆ, ಪಾದಯಾತ್ರೆಗೆ ಅನುಮತಿ ಇಲ್ಲ. ಹೈಕೋರ್ಟ್ ಆದೇಶದ ಅನ್ವಯ ಅನುಮತಿ ಇಲ್ಲ. ಆದರೂ ಪೂರಕವಾಗಿ ಎಲ್ಲಾ ವ್ಯವಸ್ಥೆ ಮಾಡಿಕೊಳ್ಳುತ್ತೇವೆ. ನನ್ನ ಮಟ್ಟದಲ್ಲಿ ಯಾರೂ ಬಂದು ಇದುವರೆಗೆ ಅನುಮತಿ ಕೇಳಿಲ್ಲ ಎಂದು ಅವರು ಹೇಳಿದರು.

ಬಿಜೆಪಿ ಜೆಡಿಎಸ್ ಪಾದಯಾತ್ರೆಗೆ ನಾವು ಅನುಮತಿ ನೀಡುವುದಿಲ್ಲ. ಅವರು ಮಾಡುವುದಿದ್ದರೆ ಮಾಡಿಕೊಳ್ಳಲಿ, ಅದರ ಬಗ್ಗೆ ನಮ್ಮ ತಕರಾರಿಲ್ಲ. ಆದರೆ, ಅಧಿಕೃತವಾಗಿ ಪೊಲೀಸ್ ಇಲಾಖೆಯಿಂದ ನಾವು ಅನುಮತಿ ನೀಡುವುದಿಲ್ಲ ಎಂದು ಗೃಹ ಸಚಿವ ಜಿ ಪರಮೇಶ್ವರ ಕೆಲವೇ ದಿನಗಳ ಹಿಂದೆ ಕಡ್ಡಿಮುರಿದಂತೆ ಹೇಳಿದ್ದರು. ಇದೀಗ ನಗರ ಪೊಲೀಸ್ ಆಯುಕ್ತರೂ ಅದೇ ರೀತಿ ಹೇಳಿಕೆ ನೀಡಿದ್ದಾರೆ.

ಪಾದಯಾತ್ರೆ ವಿಚಾರವಾಗಿ ಬಿಜೆಪಿ ಮತ್ತು ಮಿತ್ರಪಕ್ಷ ಜೆಡಿಎಸ್ ಮಧ್ಯೆ ಗೊಂದಲ ಏರ್ಪಟ್ಟಿತ್ತು. ಜೆಡಿಎಸ್ ಅನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲಾಗುತ್ತಿಲ್ಲ ಎಂದು ಕೇಂದ್ರ ಸಚಿವ ಕುಮಾರಸ್ವಾಮಿ ಪುಟ 2

### ಭೂಕುಸಿತದ ಭೀಕರತೆ ಬಿಚ್ಚಿಟ್ಟ ಕನ್ನಡಿಗ | ಅಣ್ಣನ ತಿಥಿ ಮಾಡಲು ಹೋಗಿದ್ವಿ

# ಬದುಕಿ ಬಂದಿದ್ದೇ ನಮ್ಮ ಪುಣ್ಯ

**ಚಾಮರಾಜನಗರ:** ನಮ್ಮ ಅಣ್ಣನ ತಿಥಿಗಾಗಿ ಚೂರಲ್ಮಲಗೆ ಹೋಗಿದ್ದೆವು. ಎಲ್ಲಾ ವ್ಯವಸ್ಥೆ ಮಾಡಬೇಕು ಎಂದು ಐದು ದಿನ ಮೊದಲೇ ಹೋಗಿದ್ದೆ. ಅಲ್ಲಿಂದ ಬದುಕಿ ಬಂದಿರುವುದೇ ನಮ್ಮ ಪುಣ್ಯ ಎಂದು ಚೂರಲ್ಮಲದಲ್ಲಿ ನಡೆದ ಭೂಕುಸಿತದ ಭೀಕರ ಘಟನೆಯನ್ನು ಕನ್ನಡಿಗ ಸ್ವಾಮಿ ಶೆಟ್ಟಿ ಬಿಚ್ಚಿಟ್ಟಿದ್ದಾರೆ.

ಸ್ವಾಮಿ ಶೆಟ್ಟಿ ಗುಂಡ್ಲುಪೇಟೆ ತಾಲೂಕಿನ ತ್ರಯಂಭಕಪುರ ಗ್ರಾಮದ ನಿವಾಸಿ. ಇವರು ಅಣ್ಣನ ತಿಥಿ ಕಾರ್ಯಕ್ಕೆಂದು ಚೂರಲ್ಮಲಗೆ ತೆರಳಿದ್ದರು. ಈ ವೇಳೆ ಭೀಕರ ಭೂಕುಸಿತ ಉಂಟಾಗಿದ್ದು, ತಾನೂ ಬದುಕಿದ್ದಲ್ಲದೇ ಮೊಮ್ಮಗ ಹಾಗೂ ಮಗಳ ಪ್ರಾಣವನ್ನೂ ಸ್ವಾಮಿ ಶೆಟ್ಟಿ ಉಳಿಸಿದ್ದಾರೆ.



ನಾವು ಹೋಗಿದ್ದೇ ಒಂದು ಕಾರ್ಯ ಆದರೆ ಅಲ್ಲಿ ನಡೆದದ್ದೇ ಬೇರೆ. ನೀರು ಜೋರಾಗಿ ಬಾಗಿಲು ತಟ್ಟಿತ್ತು. ಈ ವೇಳೆ 8 ಮಂದಿ ಮನೆಯಲ್ಲಿ ಇದ್ದೆವು. ಈಗ ಎಲ್ಲರೂ ಕೂಡ ಸೇಫ್ ಆಗಿದ್ದೇವೆ. ನಾವಿದ್ದ ಸ್ಥಳದಲ್ಲಿ 10 ರಿಂದ 12 ಜನರಷ್ಟೇ ಉಳಿದಿದ್ದಾರೆ. ತುಂಬಾ ಜನರು ಕೊಚ್ಚಿ ಹೋಗಿದ್ದಾರೆ. ತಾರಸಿಯಂತಹ ಮನೆಗಳೇ ಕುಸಿದು ಬಿದ್ದಿವೆ. ನಮ್ಮ ಕಥೆ ಮುಗಿದೇ ಹೋಯಿತು ಅಂದುಕೊಂಡಿದ್ದೆವು. ತಂತಿಗಳನ್ನು ಕಟ್ಟಿದ್ದೆವು. ಅದರ ಸಹಾಯದಿಂದ ಮೇಲೆ ಬಂದು ಬಚಾವ್ ಆಗಿದ್ದೇವೆ. ಬೆಳಗ್ಗೆ ಹೋಗಿ ನೋಡಿದ ವೇಳೆ ಅಲ್ಲಿ ಒಂದು ಕಡ್ಡಿಯೂ ಇರಲಿಲ್ಲ. ಅಲ್ಲಿಂದ ತಪ್ಪಿಸಿಕೊಂಡು ಬರುವಾಗ ನನಗೆ ಹಾಗೂ ನನ್ನ ಮಗಳ ಕಾಲಿಗೆ ಗಾಯವಾಗಿದೆ. ಆ ಸ್ಥಳದಿಂದ ಮೇಲೆ ಹತ್ತುವ ವೇಳೆ ಹೆಬ್ಬೆರಳಿಗೆ ಗಾಯವಾಗಿದೆ ಎಂದು ಸ್ವಾಮಿ ಶೆಟ್ಟಿ ಹೇಳಿದ್ದಾರೆ.

ಮುಂದುವರಿದು ಮಾತನಾಡಿ, ಕೂಲಿ ಮಾಡಿ ಹಸುಗಳನ್ನು ಕೊಂಡು ಸಾಕಿದ್ದರು. ಆರು ಹಸುಗಳ ಹಗ್ಗಗಳನ್ನು ಕೂಡ ಬಿಚ್ಚಿದ್ದೆವು. ಆದರೂ ಕೂಡ ಹಸುಗಳು ಕೊಚ್ಚಿ ಹೋಗಿವೆ. ಊರೇ ಇಲ್ಲ ಅಂದಮೇಲೆ ದನಕರು ಎಲ್ಲಿ ಇರುತ್ತೆ ಹೇಳಿ. ಸೇತುವೆ ಒಡೆದು ಹೋದ ಮೇಲೆ ನೀರು ನುಗ್ಗಿತ್ತು. ಅದು ತುಂಬಾ ಹಳೇ ಸೇತುವೆ. ನಮ್ಮ ಮನೆ ಪಕ್ಕದಲ್ಲಿ 9 ತಿಂಗಳ ಗರ್ಭಿಣಿ ಹಾಗೂ ಗಂಡ ವಾಸವಿದ್ದರು. ಘಟನೆಯಲ್ಲಿ ಒಬ್ಬರಿಗೊಬ್ಬರು ಕೈ ಹಿಡಿದುಕೊಂಡು ಕೊಚ್ಚಿ ಹೋದರು. ಯಾರನ್ನು ಕೂಡ ರಕ್ಷಣೆ ಮಾಡಲೂ ಹೋಗಿಲ್ಲ. ಸೇತುವೆ ಒಡೆದು ನೀರು ಕೊಚ್ಚಿ ಹೋಯಿತು ಎಂದು ಘಟನೆ ಬಗ್ಗೆ ವಿವರಿಸಿದರು.

ಇನ್ನು ಸ್ವಾಮಿ ಶೆಟ್ಟಿ ಸೊಸೆ ನಂದಿನಿ ಈ ಬಗ್ಗೆ ಮಾತನಾಡಿ, ಅವರಿಗೆ ಏನಾಗಿದೆ ಅಂದ ತಕ್ಷಣ ನಮಗೆ ಊಟ ಕೂಡ ಸೇರಿರಲಿಲ್ಲ. ಸಿದ್ದಪ್ಪಾಜಿ ಬಳಿ ಮನೆಗೆ ನಮ್ಮ ಮಾವ ಮರಳಿ ಬಂದರೆ ಸಾಕು ಎಂದು ಹರಕೆ ಹೊತ್ತಿದ್ದೆವು. ತಂದೆಯಂತೆ ಪ್ರೀತಿ ಕೊಟ್ಟು ನಮ್ಮನ್ನು ನೋಡಿಕೊಂಡಿದ್ದಾರೆ. ಅವರೇ ನಮಗೆ ಮುಖ್ಯ. ವಾಪಸ್ ಬಂದರೆ ಸಾಕು ಎಂದು ದೇವರಲ್ಲಿ ಕೇಳಿಕೊಂಡಿದ್ದೆವು. ನಾವು ಹರಕೆ ಮಾಡಿಕೊಂಡ ಮೇಲೆ ದೇವರು ಕನಸಿನಲ್ಲಿ ಬಂದಿತ್ತು. ನಿಮ್ಮ ಮಾವನನ್ನು ಮನೆಗೆ ಕರೆದುಕೊಂಡು ಬಂದು ಸೇರಿಸುತ್ತೇನೆ ಎಂದು ಹೇಳಿತ್ತು. ಆ ನಂತರ ನನ್ನ ಮನಸ್ಸಿಗೂ ಕೂಡ ಸಮಾಧಾನವಾಯಿತು. ಕೇರಳದಲ್ಲಿ ನೀರು ತುಂಬಿದೆ. ಎಲ್ಲರೂ ಕೊಚ್ಚಿಕೊಂಡು ಹೋಗಿದ್ದಾರೆಂದು ಕೇಳಿದಾಗ ಗಾಬರಿಯಾಗಿತ್ತು. ಬೇರೆಯವರ ಕೈಯಲ್ಲಿ ಕರೆ ಮಾಡಿಸಿದ್ದರು. ಧೈರ್ಯ ತೆಗೆದುಕೊಳ್ಳಿ ನಮಗೆ ಏನೂ ಆಗಿಲ್ಲ ಎಂದು ಹೇಳಿದ್ದರು. ಅಳಬೇಡಿ, ಸುಮ್ನಿರಿ ನಾನು ಬರ್ತೀನಿ ಅಂದಿದ್ದರು. ಅವರು ಮರಳಿ ಬಂದಿದ್ದು ನಂಗೆ ತುಂಬಾ ಸಂತಸವಾಗಿದೆ ಎಂದು ಹರ್ಷ ವ್ಯಕ್ತಪಡಿಸಿದರು.

### ಇಂದಿನಿಂದ 3 ಸಾವಿರ ಮಂದಿಯಿಂದ ಮೃತದೇಹ ಶೋಧ ಕಾರ್ಯ

# 206 ಮಂದಿ ನಾಪತ್ತೆ

**ವಯನಾಡು:** ಇಂದಿನಿಂದ 3 ಸಾವಿರ ಮಂದಿಯಿಂದ ಮೃತದೇಹ ಪತ್ತೆ ಮಾಡುವ ಕಾರ್ಯ ನಡೆಯಲಿದೆ ಎಂದು ವಯನಾಡು ಜಿಲ್ಲಾಧಿಕಾರಿ ಮೇಘಾಶ್ರೀ ತಿಳಿಸಿದ್ದಾರೆ. ಕರ್ನಾಟಕ ಚಿತ್ರದುರ್ಗ ಮೂಲದ ಮೇಘಾಶ್ರೀ ಈ ವೇಳೆ ಅವರು, ಸಾವಿನ ಅಧಿಕೃತ ಪಟ್ಟಿ ಇನ್ನೂ ಅಂತಿಮವಾಗಿಲ್ಲ. ಕ್ಷಣ ಕ್ಷಣಕ್ಕೂ ಪಟ್ಟಿ ಬೆಳೆಯುತ್ತಿದೆ. ಮೃತಪಟ್ಟವರಲ್ಲಿ ಪ್ರವಾಸಿಗರು ಇದ್ದಾರೆ. ಇದುವರೆಗೂ 3 ಸಾವಿರ ಜನರ ರಕ್ಷಣೆ ಮಾಡಲಾಗಿದೆ ಎಂದು ಹೇಳಿದರು.



ಭೂಕುಸಿತಗೊಂಡ ಜಾಗದಲ್ಲಿ ಎಷ್ಟು ಮನೆಗಳು ಇದ್ದವು ಎನ್ನುವುದರ ಬಗ್ಗೆ ರೇಷನ್ ಕಾರ್ಡ್, ವೋಟರ್ ಐಡಿ ಡೇಟಾದ ಮೂಲಕ ಮಾಹಿತಿಗಳನ್ನು ನಾವು ಈಗ ಸಂಗ್ರಹ ಮಾಡುತ್ತಿದ್ದೇವೆ. ಇದಕ್ಕೆ ಸ್ಥಳೀಯ ಜನರು ಸಹಕಾರ ನೀಡುತ್ತಿದ್ದಾರೆ. ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಜನರಿಂದ ಅವರ ಮನೆಯಲ್ಲಿದ್ದವರ ಬಗ್ಗೆ ಪುಟ 2

### ಕೇವಲ 16 ಗಂಟೆಯಲ್ಲಿ 24 ಟನ್ ಸಾಮರ್ಥ್ಯದ 190 ಅಡಿ ಉದ್ದ

# ಸೇತುವೆ ರೆಡಿ!



**ವಯನಾಡು:** ಭೂಕುಸಿತ ಸಂಭವಿಸಿದ್ದ ಚೂರಲ್ಮಲ ಮತ್ತು ಮುಂಡಕ್ಕೈಗೆ ಸಂಪರ್ಕ ಕಲ್ಪಿಸುವ ಚಾರಲ್‌ಮಲ್ಲೆ ನದಿಗೆ ಅಡ್ಡಲಾಗಿ ಕಟ್ಟಲಾದ 190 ಅಡಿ ಉದ್ದದ ಸೇತುವೆಯನ್ನು ಭಾರತೀಯ ಸೇನೆ ದಾಖಲೆಯ ಕೇವಲ 16 ಗಂಟೆಯಲ್ಲಿ ಪೂರ್ಣಗೊಳಿಸಿದೆ.

ಜುಲೈ 31 ರ ರಾತ್ರಿ 9 ಗಂಟೆಗೆ ನಿರ್ಮಾಣಕ್ಕೆ ಕೈ ಹಾಕಿದ ಸೇನೆಯ ಎಂಜಿನಿಯರ್‌ಗಳು ಆಗಸ್ಟ್ 01 ರ ಸಂಜೆ 5:30ಕ್ಕೆ ಪೂರ್ಣಗೊಳಿಸಿದರು. ಈ ಸೇತುವೆ 24 ಟನ್ ತೂಕದ ಸಾಮರ್ಥ್ಯವನ್ನು ಹೊಂದಿದೆ. ಎಲ್ಲಾ ರೀತಿಯ ಸವಾಲುಗಳನ್ನು ಮೀರಿ 1 ಮದ್ರಾಸ್ ಎಂಜಿನಿಯರ್ಸ್ ಗ್ರೂಪ್‌ನ ಮೇಜ್ ಸೀತಾ ಶೆಲ್ಕೆ ಮತ್ತು ಅವರ ತಂಡ ಈ ಸೇತುವೆಯನ್ನು ಯಶಸ್ವಿಯಾಗಿ ನಿರ್ಮಿಸಿದೆ.

ಈ ಸೇತುವೆ ನಿರ್ಮಾಣವನ್ನು ಮಧ್ಯಾಹ್ನ 12 ಗಂಟೆಯ ಒಳಗಡೆ ಪೂರ್ಣಗೊಳಿಸಲು ಸೇನೆ ಟಾರ್ಗೆಟ್ ಹಾಕಿಕೊಂಡಿತ್ತು.ಆದರೆ ಭಾರೀ ಮಳೆಯಿಂದ ಕೆಲಸಕ್ಕೆ ಅಡ್ಡಿಯಾಗಿದ್ದರೂ ಸೇನೆಯ ಎಂಜಿನಿಯರ್‌ಗಳು ದಾಖಲೆಯ ಅವಧಿಯಲ್ಲಿ ಸೇತುವೆ ನಿರ್ಮಿಸಿ ಕಾರ್ಯಾಚರಣೆಗೆ ಅನುವು ಮಾಡಿಕೊಟ್ಟಿದ್ದಾರೆ. ಬೈಲಿ ಸೇತುವೆಯು ತಾತ್ಕಾಲಿಕ ಸೇತುವೆಯಾಗಿದ್ದು ಉಕ್ಕಿನ ತುಂಡುಗಳನ್ನು ಜೋಡಿಸಿ ನಿರ್ಮಾಣ ಮಾಡಲಾಗಿದೆ.

ಸೇತುವೆ ನಿರ್ಮಾಣಗೊಂಡ ಬಳಿಕ ರಕ್ಷಣಾ ಕಾರ್ಯಾಚರಣೆ ಬಿರುಸು ಪಡೆದಿದೆ. ಜೆಸಿಬಿಗಳು, ಅಂಬುಲೆನ್ಸ್‌ಗಳು, ರಕ್ಷಣಾ ಪಡೆ ಎಲ್ಲರೂ ಈ ಸೇತುವೆಯ ಮೂಲಕವೇ ಸಾಗುತ್ತಿದ್ದಾರೆ.

### ಚಾಲಕ, ನಿರ್ವಾಹಕರ ಯೂನಿಫಾರಂಗೆ ಪುಡಿಗಾಸು

# ಕೈತೊಳೆದುಕೊಂಡ ಬಿಎಂಟಿಸಿ

**ಬೆಂಗಳೂರು:** ಬಸ್ ಚಾಲಕ, ನಿರ್ವಾಹಕ ಹಾಗೂ ಮೆಕ್ಯಾನಿಕ್‌ಗಳಿಗೆ ಈ ಹಿಂದೆ ಬಿಎಂಟಿಸಿ ಯೂನಿಫಾರಂ ಕೊಡುತ್ತಿತ್ತು. ಅದನ್ನು ನೌಕರರು ಹೊಲಿಸಿಕೊಳ್ಳುತ್ತಿದ್ದರು. ಆದರೆ ಈಗ ಯೂನಿಫಾರಂ ಕೊಡುವ ಬದಲು ಬಿಎಂಟಿಸಿ ಕಡಿಮೆ ಹಣ ನೀಡಲು ಮುಂದಾಗಿದೆ. ಕಡಿಮೆ ಹಣ ನೀಡಲು ಮುಂದಾಗಿರುವ ಬಿಎಂಟಿಸಿ ವಿರುದ್ಧ ಸಾರಿಗೆ ಮುಖಂಡರ ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಕಂಡಕ್ಟರ್, ಡ್ರೈವರ್‌ಗಳಿಗೆ ಯೂನಿಫಾರಂ ನೀಡಲು ಬಿಎಂಟಿಸಿಯಲ್ಲಿ ಹಣವಿಲ್ಲವೇ ಎಂದು ಸಾರಿಗೆ ನೌಕರರ ಮುಖಂಡರು ಪ್ರಶ್ನೆ ಮಾಡುತ್ತಿದ್ದಾರೆ.



ಪುಡಿಗಾಸು ನೀಡಿ ಎರಡು ಜೊತೆ ಯೂನಿಫಾರಂ ಹೊಲಿಸಿಕೊಳ್ಳಲು ಹೇಳಿದರೆ ಹೇಗೆ ಎಂದು ನೌಕರರು ಪ್ರಶ್ನೆ ಮಾಡುತ್ತಿದ್ದಾರೆ. ಬಿಎಂಟಿಸಿಯ ಪುರುಷ ಕಂಡಕ್ಟರ್, ಡ್ರೈವರ್ ಗಳಿಗೆ ಹಾಗೂ ಮೆಕ್ಯಾನಿಕ್ ಗಳಿಗೆ ಎರಡು ಜೊತೆ ಯೂನಿಫಾರಂಗೆ ಕೇವಲ 750 ರುಪಾಯಿ, ಸ್ಟೀಚ್ ಮಾಡಲು ಕೇವಲ 350 ರುಪಾಯಿ ನೀಡಿದ್ದಾರೆ. ಅಂಗಡಿಯಲ್ಲಿ ಪುರುಷರ ಒಂದು ಜೊತೆ ಯೂನಿಫಾರಂ ಗಂಜಿ ಬಟ್ಟೆ ಹೊಲಿಸಲು ನಾರ್ಮಲ್- 1350 ರುಪಾಯಿ ಇದೆ (ಮೂರು ಮೀಟರ್). ರೇಮಂಡ್ ಬಟ್ಟೆಗಾದ್ರೆ- 1950 ರುಪಾಯಿ (ಮೂರು ಮೀಟರ್) ಒಂದು ಪ್ಯಾಂಟ್ ಒಂದು ಶರ್ಟ್‌ಗೆ ಇದೆ. ಒಂದು ಜೊತೆ ಪ್ಯಾಂಟ್ ಶರ್ಟ್ ಹೊಲಿಯಲು ಸಾಮಾನ್ಯವಾಗಿ 1400 ಯಿಂದ 1500 ರುಪಾಯಿ ಆಗುತ್ತದೆ. ಇದಕ್ಕೆ ಸಾರಿಗೆ ನೌಕರರ ಮುಖಂಡ ಚಂದ್ರಶೇಖರ್ ಬಿಎಂಟಿಸಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪುಟ 2

# ಕರ್ನಾಟಕಕ್ಕೆ ಸದ್ಯಕ್ಕಿಲ್ಲ ಮಳೆಯಿಂದ ಬಿಡುವು

**ಬೆಂಗಳೂರು:** ರಾಜ್ಯದಲ್ಲಿ ನಿರಂತರ ಮಳೆಯಿಂದ ಜನಜೀವನ ಅಸ್ತವ್ಯಸ್ತವಾಗಿದೆ. ಸದ್ಯ ಕರ್ನಾಟಕದ ಕರಾವಳಿ ಜಿಲ್ಲೆಗಳಿಗೆ ಮಳೆಯಿಂದ ಬಿಡುವಿಲ್ಲದಂತಾಗಿದ್ದು, ಕರಾವಳಿ ಜಿಲ್ಲೆಗಳಿಗೆ ಇಂದು ರೆಡ್ ಅಲರ್ಟ್ ಘೋಷಿಸಲಾಗಿದೆ.

» **ಕರಾವಳಿ ಜಿಲ್ಲೆಗಳಿಗೆ ಇಂದು ರೆಡ್ ಅಲರ್ಟ್**

ಈ ಮೊದಲು ಕರಾವಳಿಗೆ ಆರೆಂಜ್ ಅಲರ್ಟ್ ಘೋಷಿಸಿದ್ದು, ಇದೀಗ ಮತ್ತೆ ರೆಡ್ ಅಲರ್ಟ್ ಘೋಷಿಸಲಾಗಿದೆ. ಉಡುಪಿ, ಉತ್ತರ ಕನ್ನಡ ಜಿಲ್ಲೆಗಳಿಗೆ ಭಾರೀ ಮಳೆಯ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಪುಟ 2



# ನಮಗೆ ಸ್ವಲ್ಪ ವಿಷ ಕೊಡಿ

### ದಿನೇಶ್ ಗುಂಡೂರಾವ್ ಬಳಿ ಮಂಗಳೂರಿನ ಅದ್ಯಪಾಡಿ ಗ್ರಾಮಸ್ಥರ ಆಕ್ರೋಶ



**ಮಂಗಳೂರು:** ಫಲ್ಗುಣಿ ನದಿಯಲ್ಲಿ ನೆರೆ ಬಂದು ಗ್ರಾಮಕ್ಕೆ ನೀರು ನುಗ್ಗಿದ ಪರಿಣಾಮ ಮಂಗಳೂರಿನ ಅದ್ಯಪಾಡಿ ಗ್ರಾಮ ದ್ವೀಪದಂತಾಗಿದೆ. ಮಳೆಗಾಲ ಬಂದಾಗ ಸಂಪೂರ್ಣ ಮುಳುಗಡೆಯಾಗುವ ಅದ್ಯಪಾಡಿಯ ಮೋಗೆರ್ ಕುದ್ರುವಿಗೆ ಶುಕ್ರವಾರ ಬೆಳಗ್ಗೆ ದಕ್ಷಿಣ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಭೇಟಿ ನೀಡಿದರು. ಇದೇ ವೇಳೆ, ಉಸ್ತುವಾರಿ ಸಚಿವರ ಮುಂದೆ ಮೊಗೇರ್ ಕುದ್ರುವಿನ ಜನ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿ ಮಳೆಗಾಲದ ಸಂದರ್ಭ ಇದೇ ರೀತಿ ಸಮಸ್ಯೆ ಆಗುತ್ತದೆ. ನಮಗೆ ಇದಕ್ಕಿಂತ ಸ್ವಲ್ಪ ವಿಷ ಆದರೂ ಕೊಡಿ ಎಂದು ಸಚಿವರ ಬಳಿ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದರು. ಪುಟ 2

## ಕರ್ನಾಟಕದಲಿ ವಿರೋಧ ಪಕ್ಷಗಳ ಸ್ಟಾರ್ ಚೆನ್ನಾಗಿಲ್ಲ

**ಬೆಂಗಳೂರು:** ಕರ್ನಾಟಕದಲ್ಲಿ ವಿರೋಧ ಪಕ್ಷಗಳ ಸ್ಟಾರ್ ಚೆನ್ನಾಗಿಲ್ಲ. ಒಳ್ಳೆಯ ಜ್ಯೋತಿಷಿಯನ್ನು ನೋಡಿ ಎಲ್ಲವನ್ನು ಸರಿ ಮಾಡಿಕೊಳ್ಳಬೇಕು ಎಂದು ಮಾಜಿ ಕೇಂದ್ರ ಮಂತ್ರಿ ಡಿವಿ ಸದಾನಂದ ಗೌಡ ಹೇಳಿದ್ದಾರೆ. ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಎನ್‌ಡಿಎ ತಂಡಕ್ಕೆ ಇಂದು ಅದ್ಭುತ ಅವಕಾಶ ಇದೆ. ಸರ್ಕಾರ ಜಾಗ ನುಂಗಿಕೊಂಡು, ಹೆಂಡತಿ ಹೆಸರಿಗೆ ಮಾಡೋ ನಿಕೃಷ್ಟ ರಾಜಕೀಯವನ್ನು ಕಾಂಗ್ರೆಸ್ ಮಾಡುತ್ತಿದೆ. ಇದನ್ನ ನಾವು ಬಳಕೆ ಮಾಡಿಕೊಳ್ಳಬೇಕು ಎಂದರು. ಬಿಜೆಪಿ-ಜೆಡಿಎಸ್ ಒಡೆದ ಮನೆ ಆಗಿದೆ. ಕಾಂಗ್ರೆಸ್ ಒಡೆದ ಮನೆಯಾಗಿದೆ ಎನ್ನುವ ಬದಲು ನಮ್ಮದಾಗಿದೆ. ಯತ್ನಾಳ್, ಜಾರಕಿಹೋಳಿ ಒಂದು ಕಡೆ, ಜಿಟಿ ದೇವೇಗೌಡ ಮತ್ತೊಂದು. ಇದನ್ನ ನೋಡಿದ್ರೆ, ವಿಪಕ್ಷ ಸ್ಟಾರ್ ಚೆನ್ನಾಗಿಲ್ಲ ಎಂದು ಅನಿಸುತ್ತದೆ. ನಮ್ಮಲ್ಲಿ ಸಾಮರಸ್ಯವಿಲ್ಲ ಪ್ಲ್ಯಾನ್ ಆಫ್ ಆಕ್ಷನ್ ಇಲ್ಲದ್ದಕ್ಕೆ ನೋವಿದೆ. ಇದು ನನ್ನ ವೈಯಕ್ತಿಕ ಅಭಿಪ್ರಾಯ. ಇದು ನಮ್ಮ ಬಿಜೆಪಿ ಕಾರ್ಯಕರ್ತರ ಅಭಿಪ್ರಾಯವೂ ಆಗಿದ್ದು ಫೋನ್ ಮಾಡಿ ತಿಳಿಸುತ್ತಿದ್ದಾರೆ. ಒಂದು ಕಡೆ ರಾಜಕೀಯ ಹೋರಾಟ ಆಗಬೇಕು. ಮತ್ತೊಂದು ಕಡೆ ಕಾನೂನು ಹೋರಾಟ ಮಾಡಬೇಕು ಎಂದರು.



## ಸಿದರಾಮಯ್ಯ ರಕಣೆ ಮಾಡಲು ರಾಜ್ಯಪಾಲರ ವಿರುದ ಕ್ಯಾಬಿನೆಟ್ ನಿರ್ಣಯ

**ಬೆಂಗಳೂರು:** ಸಿಎಂ ಸಿದ್ದರಾಮಯ್ಯರನ್ನು ರಕ್ಷಣೆ ಮಾಡಲು ಇಂದಿನ ಕ್ಯಾಬಿನೆಟ್‌ನಲ್ಲಿ ರಾಜ್ಯಪಾಲರ ವಿರುದ್ಧ ನಿರ್ಣಯ ಅಂಗೀಕಾರ ಮಾಡಿದ್ದಾರೆ ಎಂದು ವಿಪಕ್ಷ ನಾಯಕ ಅಶೋಕ್ ಕಿಡಿಕಾರಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು,ಕ್ಯಾಬಿನೆಟ್ ಮಂತ್ರಿಗಳು ಸಿದ್ದರಾಮಯ್ಯ ರಕ್ಷಣೆ ನಿಂತಿದ್ದಾರೆ. ದೂರು ಕೊಟ್ಟಾಗ ಅದಕ್ಕೆ ವಿವರಣೆ ಕೇಳುವುದು ರಾಜ್ಯಪಾಲರ ಕರ್ತವ್ಯ. ರಾಜ್ಯಪಾಲರು ಹೀಗೆ ಕೇಳಬೇಕು ಅಂದರೆ ಆಗುತ್ತಾ ರಾಜ್ಯಪಾಲರು ನೋಟಿಸ್ ಕೊಡುವಾಗ ಕಾನೂನು ನೋಡಿ ಕೊಟ್ಟಿರುತ್ತಾರೆ. ಅದನ್ನ ಪ್ರಶ್ನೆ ಮಾಡಿದ್ರೆ, ಕಾನೂನುಗಿಂತ ನೀವು ದೊಡ್ಡವರಾ ಕ್ಯಾಬಿನೆಟ್ ಕರೆದು ರಾಜ್ಯಪಾಲರ ಮೇಲೆ ಒತ್ತಡ ಹಾಕುವುದು ಸರಿಯಲ್ಲ ಅಂತ ಕಿಡಿಕಾರಿದರು. ಸಂವಿಧಾನದ ಪ್ರಕಾರ ರಾಜ್ಯಕ್ಕೆ ಸುಪ್ರೀಂ ರಾಜ್ಯಪಾಲರು. ಅವರಿಗೆ ಕಾನೂನು ಹೇಳಿಕೊಡಲು ಹೋಗ್ತೀರಾ ಇದರಿಂದ ನೀವು ತಪ್ಪು ಮಾಡಿದ್ದೀರಾ ಅಂತ ಅಗುತ್ತದೆ. ಏನು ತಪ್ಪು ಮಾಡಿಲ್ಲ ಅಂದರೆ ಯಾಕೆ ಅಧಿವೇಶನದಲ್ಲಿ ಚರ್ಚೆ ಮಾಡಲಿಲ್ಲ. ಸಿಎಂ ಅವರು ದಾಖಲೆ ಸಮೇತ ಅಲ್ಲೇ ಎಲ್ಲವನ್ನು ಹೇಳಬಹುದಿತ್ತು. ಆದರೆ ಸಿದ್ದರಾಮಯ್ಯ ಅಂದು ಹೇಡಿ ತರಹ ಓಡಿ ಹೋಗಿದ್ದಾರೆ. ಇವರು ತಪ್ಪು ಮಾಡಿಲ್ಲ ಅಂದರೆ ಸರ್ಕಾರ ಅಸ್ಥಿರ ಆಗುತ್ತೆ ಅಂತ ಯಾಕೆ ಭಯ ಬೀಳ್ತಾರೆ ಅಂತ ವಾಗ್ದಾಳಿ ನಡೆಸಿದರು. ಯಡಿಯೂರಪ್ಪ, ಜನಾರ್ದನ ರೆಡ್ಡಿ ಅವರ ಮೇಲು ದೂರು ದಾಖಲಾಗಿತ್ತು. ಅಂದು ಅವರು ಹೋರಾಟ ಮಾಡಿದ್ದರು. ಯಡಿಯೂರಪ್ಪ ವಿರುದ್ದ ಅಂದು ಅನುಮತಿ ಕೊಟ್ಟಿದ್ದು ಯಾರು ಅವತ್ತು ಕೇಂದ್ರದಲ್ಲಿ ಯಾವ ಸರ್ಕಾರ ಇತ್ತು. ಅವತ್ತು ರಾಜ್ಯಪಾಲರು ಯಾರು ನಾವು ಅವತ್ತು ಕ್ಯಾಬಿನೆಟ್‌ನಲ್ಲಿ ಹೀಗೆ ಏನಾದ್ರು ನಿರ್ಣಯ ಮಾಡಿದ್ದೀವಾ ಇಷ್ಟೆಲ್ಲ ಇವರು ಮಾಡುತ್ತಿರುವುದು ನೋಡಿದರೆ ಇವರು ತಪ್ಪು ಮಾಡಿರುವುದು ನಿಜ ಅಂತ ಅನ್ನಿಸುತ್ತಿದೆ ಎಂದು ಆರೋಪಿಸಿದರು. ಯಡಿಯೂರಪ್ಪ ಮೇಲೂ ಅಂದು ಯಾರೋ ಒಬ್ಬರು ಖಾಸಗಿ ದೂರು ನೀಡಿದ್ದರು. ಯಡಿಯೂರಪ್ಪ ಅಂದು ಕಾನೂನು ಹೋರಾಟ ಮಾಡಿದ್ದರು. ಈಗ ನೀವು ತಪ್ಪಿಲ್ಲ ಅಂದರೆ ಕಾನೂನು ಹೋರಾಟ ಮಾಡಿ ಅಂತ ಸಿಎಂ ಸಿದ್ದರಾಮಯ್ಯಗೆ ಸವಾಲ್ ಹಾಕಿದರು.



# ರೇವಣ್ಣ ಸೂಚನೆ ಮೇರೆಗೆ ಸಂತ್ರಸ್ತೆ ಕಿಡ್ನ್ಯಾಪ್ ರೇವಣ್ಣ, ಭವಾನಿ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆ

**ಬೆಂಗಳೂರು:** ಕೆ.ಆರ್ ನಗರದ ಮಹಿಳೆಯ ಅಪಹರಣ ಪ್ರಕರಣದಲ್ಲಿ ವಿಶೇಷ ತನಿಖಾ ತಂಡದ ಅಧಿಕಾರಿಗಳು ದೋಷಾರೋಪ ಪಟ್ಟಿ ಸಲ್ಲಿಸಿದ್ದಾರೆ. ಮಾಜಿ ಸಚಿವ ಹೆಚ್.ಡಿ ರೇವಣ್ಣ ಅವರೊಂದಿಗೆ ಪತ್ನಿ ಭವಾನಿ ರೇವಣ್ಣ ಅವರನ್ನೂ ಆರೋಪಿ ಎಂದು ಆರೋಪ ಪಟ್ಟಿಯಲ್ಲಿ ಹೆಸರಿಸಲಾಗಿದೆ. ಮಾಜಿ ಸಚಿವ ಹೆಚ್.ಡಿ ರೇವಣ್ಣ ಸೇರಿ 7 ಆರೋಪಿಗಳ ವಿರುದ್ಧ 42ನೇ ಎಸಿಎಂಎಂ ನ್ಯಾಯಾಲಯಕ್ಕೆ ಎಸ್‌ಐಟಿ ದೋಷಾರೋಪ ಪಟ್ಟಿ ಸಲ್ಲಿಕೆ ಮಾಡಿದೆ. ಅಲ್ಲದೇ ಭವಾನಿ ರೇವಣ್ಣರನ್ನ 8ನೇ ಆರೋಪಿಯಾಗಿ ಹೆಸರಿಸಲಾಗಿದೆ. ರೇವಣ್ಣ ವಿರುದ್ಧ ಎಫ್‌ಐಆರ್ ರದ್ದು ಕೋರಿರುವ ಹಾಗೂ ರೇವಣ್ಣ ಜಾಮೀನು ರದ್ದಿಗೆ ಕೋರಿದ್ದ ಎರಡೂ ಅರ್ಜಿಗಳನ್ನು ಏಕಕಾಲಕ್ಕೆ ಹೈಕೋರ್ಟ್‌ನ ಏಕಸದಸ್ಯ ಪೀಠ ವಿಚಾರಣೆ ನಡೆಸಿತು. ಎಸ್‌ಐಟಿ ಪರ ಪ್ರೊ.ರವಿವರ್ಮಕುಮಾರ್ ವಾದ ಮಂಡಿಸಿದರು. ಸದ್ಯ ಜಾಮೀನು ರದ್ದು ಕೋರಿರುವ ಸಂಬಂಧ ವಾದ-ಪ್ರತಿವಾದ ಮುಕ್ತಾಯಗೊಂಡಿದ್ದು, ತೀರ್ಪನ್ನು ಕಾಯ್ದಿರಿಸಿದೆ. ಎಫ್‌ಐಆರ್ ರದ್ದು ಕೋರಿರುವ ಅರ್ಜಿ ವಿಚಾರಣೆಯನ್ನು ಆಗಸ್ಟ್ 8ಕ್ಕೆ ಕೋರ್ಟ್ ಮುಂದೂಡಿದೆ.

**ದೋಷಾರೋಪ ಪಟ್ಟಿಯಲ್ಲಿರುವ ಅಂಶಗಳೇನು:** ಎಸ್‌ಐಟಿ ಅಧಿಕಾರಿಗಳ ತಂಡ ನ್ಯಾಯಾಲಯಕ್ಕೆ ಸಲ್ಲಿಸಿರುವ ದೋಷಾರೋಪ ಪಟ್ಟಿಯಲ್ಲಿ ಹಲವು ಅಂಶಗಳನ್ನು ಉಲ್ಲೇಖಿಸಿದೆ. ಪ್ರಕರಣದ ಆರೋಪಿಗಳಾದ ರೇವಣ್ಣ ಮತ್ತು ಭವಾನಿ ಅಣತಿಯ ಮೇರೆಗೆ ಸಂತ್ರಸ್ತೆಯ ಅಪಹರಣ ನಡೆದಿದೆ. ರೇವಣ್ಣ ಏಪ್ರಿಲ್ 23ರಂದು ಸಂತ್ರಸ್ತೆಯನ್ನು ಹೊಳೆನರಸೀಪುರಕ್ಕೆ ಕರೆದು ಬೆದರಿಕೆ ಹಾಕಿದ್ದಾರೆ. ಯಾವುದೇ ಕಾರಣಕ್ಕೂ ಪೊಲೀಸರ ಕೈಗೆ ಸಿಗಬಾರದು ಅಂತ ಬೆದರಿಕೆ ಹಾಕಿದ್ದಾರೆ. ಅದಾದ



ಬಳಿಕ ಏ.26ರಂದೇ ಸತೀಶ್ ಬಾಬು ಅವರ ಮೂಲಕ ಸಂತ್ರಸ್ತೆಯನ್ನ ಅಪಹರಣ ಮಾಡಿಸಿದ್ದಾರೆ ಎಸ್‌ಐಟಿ ಚಾರ್ಜ್‌ಶೀಟ್‌ನಲ್ಲಿ ಉಲ್ಲೇಖಿಸಿದೆ.

ಮಹಿಳೆಯನ್ನ ಅಪಹರಿಸಿ 7ನೇ ಆರೋಪಿ ಮನೆಯಲ್ಲಿ ಇರಿಸಲಾಗಿತ್ತು. ಆಕೆಗೂ ಆರೋಪಿಗೂ ಯಾವುದೇ ಸಂಬಂಧ ಇರಲಿಲ್ಲ. ಪೊಲೀಸರು ಆ ಸ್ಥಳದಲ್ಲಿ ಮಹಜರ್ ನಡೆಸಿದಾಗ, ಆಕೆಯ ಕೂದಲು ದೊರೆತಿದೆ. 7ನೇ ಆರೋಪಿ ಈ ಹಿಂದೆ ರೇವಣ್ಣ ಅವರ ವಿಶೇಷ ಕರ್ತವ್ಯ ಅಧಿಕಾರಿಯಾಗಿ ಕೆಲಸ ಮಾಡುತ್ತಿದ್ದರು. ಭವಾನಿ ಅವರು ಕೀರ್ತಿ ಮತ್ತು ಮನು ಜೊತೆಯಲ್ಲಿ ಮಾತನಾಡಿದ್ದರು. ಆರೋಪಿಗಳ ಜೊತೆ ಭವಾನಿ ಮಾತನಾಡಿರೋದಕ್ಕೆ 22 ಆಡಿಯೋ ಕ್ಲಿಪ್ಪಿಂಗ್‌ಗಳು ಸಿಕ್ಕಿದೆ. ಫೋನ್‌ನಲ್ಲಿಯೇ ಭವಾನಿ ಅವರು ನಿರಂತರವಾಗಿ ಬೆದರಿಕೆ ಹಾಕಿದ್ದಾರೆ ಎಂದು ದೋಷಾರೋಪ ಪಟ್ಟಿಯಲ್ಲಿ ಅಧಿಕಾರಿಗಳು ಉಲ್ಲೇಖಿಸಿದ್ದಾರೆ.

# ಆ.14ರವರೆಗೆ ದರ್ಶನ್‌ಗೆ ನ್ಯಾಯಾಂಗ ಬಂಧನ ವಿಸ್ತರಣೆ

**ಬೆಂಗಳೂರು:** ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಗಳಾದ ದರ್ಶನ್ ಅಂಡ್ ಗ್ಯಾಂಗ್‌ನ ನ್ಯಾಯಾಂಗ ಬಂಧ ಅವಧಿಯನ್ನು ಕೋರ್ಟ್ ಆಗಸ್ಟ್ 14 ರವರೆಗೆ ವಿಸ್ತರಿಸಿದೆ. ಪ್ರಕರಣದ ಎಲ್ಲಾ ಆರೋಪಿಗಳನ್ನು ವಿಡಿಯೋ ಕಾನ್ಫರೆನ್ಸ್ ಮೂಲಕ 24ನೇ ಎಸಿಎಂಎಂ ಕೋರ್ಟ್‌ಗೆ ಹಾಜರುಪಡಿಸಲಾಯಿತು. ಪರಪ್ಪನ ಅಗ್ರಹಾರ ಜೈಲಿನಿಂದ 13 ಮಂದಿ ಆರೋಪಿಗಳು, ತುಮಕೂರು ಜೈಲಿನಿಂದ 4 ಆರೋಪಿಗಳನ್ನ ಹಾಜರು ಪಡಿಸಲಾಗಿತ್ತು.ದರ್ಶನ್, ಪವಿತ್ರಾಗೌಡ, ಪವನ್, ಪ್ರದೂ ್, ವಿನಯ್, ದೀಪಕ್ ಸೇರಿ 17 ಮಂದಿ ಅರೆಸ್ಟ್ ಆಗಿದ್ದು ಪುನಃ ನ್ಯಾಯಾಂಗ ಬಂಧನ ವಿಸ್ತರಣೆ ಮಾಡುವಂತೆ ಎಸ್‌ಐಟಿ ನ್ಯಾಯಾಧೀಶರ ಮುಂದೆ ರಿಮ್ಯಾಂಡ್ ಕಾಪಿಯನ್ನು ಸಲ್ಲಿಸಿ ಮನವಿ ಮಾಡಿತ್ತು.



# ಮುಡಾ ಪ್ರಾಸಿಕ್ಯೂಷನ್ ನೋಟೀಸ್ ವಾಪಸಿಗೆ ಸಚಿವ ಸಂಪುಟ ನಿರ್ಣಯ

**ಬೆಂಗಳೂರು:** ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಎರಡು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಮುಡಾ ಹಗರಣ ಆರೋಪಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರ ನೋಟಿಸ್ ಹಿಂಪಡೆಯುವಂತೆ ಒತ್ತಾಯಿಸಿ ಸಚಿವ ಸಂಪುಟದಲ್ಲಿ ನಿರ್ಣಯ ಕೈಗೊಳ್ಳಲಾಗಿದೆ. ಹಾಗೇ ಇನ್ನೊಂದು ಈ ಬಗ್ಗೆ ಕಾನೂನು ಹೋರಾಟ ನಡೆಸಲು ಸಹ ಸಂಪುಟ ಸಭೆಯಲ್ಲಿ ನಿರ್ಣಯವಾಗಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ (ಮುಡಾ) ನಡೆದ ನಿವೇಶನ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪಾತ್ರವಿದೆ ಎಂದು ದೂರು ನೀಡಿದ ಬೆನ್ನಲ್ಲಿಯೇ ರಾಜ್ಯಪಾಲರು ನೋಟೀಸ್ ಜಾರಿ ಮಾಡಿದ್ದರು. ಆದರೆ, ಸಿಎಂ ಸಿದ್ದರಾಮಯ್ಯ ಪ್ರಾಸಿಕ್ಯೂಷನ್ ಎದುರಿಸಬೇಕಿದ್ದ ಹಿನ್ನೆಲೆಯಲ್ಲಿ ಅವರನ್ನು ಹೊರಗಿಟ್ಟು ಸಚಿವ ಸಂಪುಟ ಸಭೆ ನಡೆಸಿದ್ದು, ಈ ಎರಡು ಮಹತ್ವದ ನಿರ್ಣಯಗಳನ್ನು ಕೈಗೊಳ್ಳಲಾಗಿದೆ. ಈ ಮೂಲಕ ರಾಜ್ಯಪಾಲ ಹಾಗೂ ಸರ್ಕಾರದ ನಡುವಿನ ಕಾನೂನು ಸಂಘರ್ಷ ಶುರುವಾಗುವ ಲಕ್ಷಣಗಳು ಕಾಣಿಸುತ್ತಿವೆ.

**ಸಚಿವ ಸಂಪುಟದಲ್ಲಿ ಏನೆಲ್ಲಾ ಚರ್ಚೆ ಆಯ್ತು:** ಮುಡಾ ಹಗರಣದ ಆರೋಪ ಹಿನ್ನೆಲೆಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಸಿಎಂ ಸಿದ್ದರಾಮ್ಯಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಚಿಂತನೆ ನಡೆಸಿದ್ದಾರೆ. ಇದಕ್ಕೂ ಮೊದಲು ನೋಟಿಸ್ ನೀಡಿದ್ದಾರೆ. ಡಿಸಿಎಂ ಡಿಕೆ ಶಿವಕುಮಾರ್ ನೇತೃತ್ವದಲ್ಲಿ ಸಚಿವ ಸಂಪುಟ ಸಭೆ ನಡೆದಿದ್ದು, ರಾಜ್ಯಪಾಲರ ನೋಟಿಸ್‌ಗೆ ಸಚಿವ ಸಂಪುಟ ವಿರೋಧಿಸಿದ್ದು, ನೋಟಿಸ್‌ನಲ್ಲಿ ಬಳಸಿದ ಪದ ಮತ್ತು ಒಕ್ಕಣಿಕೆಗೆ ಆಕ್ಷೇಪಿಸಿದೆ. ಅಲ್ಲದೇ ನೋಟಿಸ್ ಹಿಂಪಡೆಯುವಂತೆ ನಿರ್ಣಯ ಕೈಗೊಂಡಿದೆ. ಇನ್ನು ಈ ಬಗ್ಗೆ ಹೋರಾಟ ನಡೆಸಲು ಸಹ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ.

ರಾಜ್ಯಪಾಲ ನೋಟಿಸ್ ನೀಡಿರುವ ವಿಚಾರವಾಗಿ ಸಚಿವ ಸಂಪುಟ ಸಭೆಯಲ್ಲಿ ಚರ್ಚೆಯಾಗಿದ್ದು, ಈ ಹಿಂದೆ ಬಿಜೆಪಿ ನಾಯಕರ ವಿರುದ್ಧ ದೂರು ದಾಖಲು ಆಗಿವೆ. ಆ ದೂರುಗಳ ಬಗ್ಗೆ ರಾಜ್ಯಪಾಲರು ಯಾವುದೆ ಕ್ರಮ ಕೈಗೊಂಡಿಲ್ಲ. ಮುಡಾ ಪ್ರಕರಣದಲ್ಲಿ ದೂರು ದಾಖಲು ಆಗಿರುವ ದಿನವೇ ನೋಟೀಸ್ ನೀಡಲಾಗಿದೆ. ಮುಖ್ಯ ಕಾರ್ಯದರ್ಶಿಗೆ ನೋಟಿಸ್ ನೀಡಲಾಗಿದೆ. ಯಾಕಿಷ್ಟು ಆತುರದ ನೋಟಿಸ್ ಇದೊಂದು ರಾಜಕೀಯ ಪ್ರೇರಿತ ಎಂದು ಸಚಿವ ಸಂಪುಟ ನಿರ್ಧಾರ ಮಾಡಿದೆ.

ಮೊಟ್ಟೆ ಹಗರಣಕ್ಕೆ ಸಂಬಂಧಿಸಿ ಇದೇ ರಾಜ್ಯಪಾಲರ ಮುಂದೆ ದೂರು ದಾಖಲಾಗಿತ್ತು. ಮೊಟ್ಟೆ ಪ್ರಕರಣ ದಲ್ಲಿ ದೂರು ನೀಡಿ ಮೂರು ತಿಂಗಳಾದರೂ ರಾಜ್ಯಪಾಲರು ಕ್ರಮ ಕೈಗೊಂಡಿರಲಿಲ್ಲ. ಹಿಂದೆ ಬಿಜೆಪಿಯವರ ವಿರುದ್ಧ ಖಾಸಗಿ ದೂರು ದಾಖಲಾದಾಗ ಪ್ರಾಸಿಕ್ಯುಷನ್ ಗೂ ಅನುಮತಿ ನೀಡಿಲ್ಲ, ಶೋಕಾಸ್ ನೋಟೀಸ್



ಕೂಡ ನೀಡಿರಲಿಲ್ಲ. ಆದ್ರೆ, ಈಗ ಮುಡಾ ಪ್ರಕರಣದಲ್ಲಿ ರಾಜ್ಯಪಾಲರು ಒತ್ತಡ ಹೇರುತ್ತಿರುವುದು ಸರಿಯಲ್ಲ ಎಂದು ಸಚಿವ ಸಂಪುಟದಲ್ಲಿ ಚರ್ಚೆ ಮಾಡಲಾಗಿದೆ.

**ಸಭೆ ಬಳಿಕ ಸಚಿವರುಗಳು ಹೇಳಿದ್ದೇನು:** ಇನ್ನು ಸಚಿವ ಸಂಪುಟ ಬಳಿಕ ಮಾಧ್ಯಗಳಿಗೆ ಪ್ರತಿಕ್ರಿಯಿಸಿದ ಸಚಿವ ರಾಜಣ್ಣ, ಕೋಣನಿಗೆ ಕಾಯಿಲೆ ಬಂದರೆ ಎಮ್ಮೆಗೆ ಬರೆ ಹಾಕಿದ್ರಂತೆ. ಎಮ್ಮೆಗೆ ಕಾಯಿಲೆ ಬಂದ್ರೆ ಕೋಣನಿಗೆ ಬರೆ ಹಾಕಿದ್ರಂತೆ ಹಾಗಾಯ್ತು. 20 ವರ್ಷಗಳ ಹಿಂದೆಯೇ ಸಿಎಂ ಪತ್ನಿ ಸೈಟ್ ಪಡೆದುಕೊಂಡಿದ್ದಾರೆ. ಕಾನೂನು ಪ್ರಕಾರವಾಗಿಯೇ ಮುಡಾ ಸೈಟ್ ಪಡೆದುಕೊಂಡಿದ್ದಾರೆ. ಈಗ ಗವರ್ನರ್ ಗೆಹ್ಲೋಟ್ ಮುಂದೆ ಎಷ್ಟು ಅರ್ಜಿಗಳು ಇವೆ . ಇದು ರಾಜಕೀಯ ಮಿಶ್ರಣ, ಇದು ಪೂರ್ಣ ರಾಜಕಾರಣ ಎಂದರು.

ರಾಜ್ಯಪಾಲರಿಂದ ಸಿಎಂ ಸಿದ್ದರಾಮಯ್ಯಗೆ ನೋಟಿಸ್ ವಿಚಾರವಾಗಿ ಸಂಪುಟ ಸಭೆ ಬಳಿಕ ಟಿವಿ9 ಜೊತೆ ಮಾತನಾಡಿದ ಸಚಿವ ಈಶ್ವರ್ ಖಂಡ್ರೆ, ಈಗ ನೀಡಿದ ನೋಟಿಸ್ ಸಂಪೂರ್ಣ ರಾಜಕೀಯ ಪ್ರೇರಿತವಾಗಿದೆ. ಶೋಕಾಸ್ ನೋಟಿಸ್ ತಿರಸ್ಕರಿಸಲು ನಿರ್ಣಯ ಮಾಡಿದ್ದೇವೆ. ಗವರ್ನರ್ ಬಳಸಿಕೊಂಡು ಕೇಂದ್ರ ಸರ್ಕಾರ ಅಧಿಕಾರದ ದುರುಪಯೋಗ ಮಾಡಿಕೊಳ್ಳುತ್ತಿದೆ. ಮುಡಾ ವಿಚಾರಕ್ಕೆ ಸಂಬಂಧಪಟ್ಟಂತೆ ಈಗಾಗಲೇ ತನಿಖೆ ನಡೆಯುತ್ತಿದೆ. ರಾಜ್ಯ ಸರ್ಕಾರವನ್ನ ಅಸ್ಥಿರಗೊಳಿಸಲು ಕೇಂದ್ರ ಹುನ್ನಾರ ನಡೆಸುತ್ತಿದೆ ಎಂದು ಆರೋಪಿಸಿದರು.

ಒಟ್ಟಿನಲ್ಲಿ ಮುಡಾ ಹಗರಣ ಆರೋಪ ಕ್ಷಣ ಕ್ಷಣಕ್ಕೂ ಸಿಎಂ ಕೊರಳಿಗೆ ಬಿಗಿಯಾಗಿ ಸುತ್ತಿಕೊಳ್ಳುತ್ತಿದ್ದು, ರಾಜ್ಯಪಾಲರು ವಿಚಾರಣೆಗೆ ಅನುಮತಿ ನೀಡುತ್ತಾರಾ ಇದಕ್ಕೆ ಸರ್ಕಾರ ಹೇಗೆ ಮೆಟ್ಟಿ ನಿಲ್ಲುತ್ತೆ ಎನ್ನುವುದನ್ನು ಕಾದುನೋಡಬೇಕಿದೆ.

# ಬೆಂಗಳೂರಿನಲ್ಲಿ ಎಳನೀರಿನ ಬೆಲೆ ಏರಿಕೆ

**ಬೆಂಗಳೂರು:** ಪ್ರತಿ ವರ್ಷ ಮಳೆಗಾಲ ಬಂದ್ರೆ ಸಾಕು ಎಳನೀರಿನ ಬೆಲೆ ತುಂಬ ಕಡಿಮೆ ಆಗುತ್ತಿತ್ತು. ಆದರೆ ಈ ವರ್ಷ ಮಳೆಗಾಲದಲ್ಲಿಯೂ ಎಳನೀರಿನ ಬೆಲೆಯಲ್ಲಿ ಯಾವುದೇ ವ್ಯತ್ಯಾಸ ಕಂಡು ಬಂದಿಲ್ಲ. ಎಳನೀರು ಬೆಲೆ ಬೇಸಿಗೆಯಲ್ಲಿ 60 ರಿಂದ 70 ರೂಪಾಯಿ ದಾಟಿತ್ತು. ಆದಾದ ನಂತರ ಮಳೆಗಾಲ ಆರಂಭವಾದ ಮೇಲೆ 45 ರೂಪಾಯಿಗೆ ಇಳಿದಿತ್ತು. ಆದರೆ ಈಗ ಮಳೆಗಾಲವಿದ್ದರೂ 50 ರಿಂದ 60 ರೂಗೆ ಎಳನೀರು ಮಾರಾಟವಾಗುತ್ತಿದೆ. ಅಲ್ಲದೆ ಮುಂದಿನ ದಿನಗಳಲ್ಲಿ ಮತ್ತಷ್ಟು ಬೆಲೆ ಏರಿಕೆಯಾಗುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.



ಈ ವರ್ಷದ ಬಿಸಿಲು ಕೊಟ್ಟಂತಹ ಎಫೆಕ್ಟ್ ಒಂದಲ್ಲ ಎರಡಲ್ಲ. ಒಂದು ಕಡೆ ನೀರಿನಿಂದಾಗಿ ಜರನು ಓದ್ದಾಡಿದ್ರೆ, ಮತ್ತೊಂದೆಡೆ ಬೇಸಿಗೆಯಲ್ಲಿ ಬೆಳೆದ ಬೆಳೆಗಳು ನೀರಿಲ್ಲದೇ ಸೊರಗಿ ಹೋದ್ವು. ಬಿಸಿಲಿನ ಬೇಗೆಗೆ ಜನ ಹೈರಾಣಾಗಿದ್ರು. ಇನ್ನು ಬೇಸಿಗೆಯಲ್ಲಿ ನೀರಿಲ್ಲದೆ ಈ ವರ್ಷದ ತೆಂಗಿನ ಫಸಲು ಸರಿಯಾಗಿ ಬಂದಿಲ್ಲ. ಹೀಗಾಗಿ ಸೋನೆ ಮಳೆ ಬಿದ್ರು, ಎಳ ನೀರಿಗೆ ಮಾತ್ರ ಡಿಮ್ಯಾಂಡ್ ಮಾತ್ರ ಕಡಿಮೆಯಾಗಿಲ್ಲ. ಹೀಗಾಗಿ 50, 60 ರೂಪಾಯಿಗೆ ಎಳನೀರು ಮಾರಾಟವಾಗುತ್ತಿದೆ. ಮಳೆಗಾಲದಲ್ಲಿಯೂ ಇಷ್ಟು ಬೆಲೆ ಇರುವುದನ್ನ ಕೇಳಿ ಗ್ರಾಹಕರು ಶಾಕ್ ಆಗ್ತಾ ಇದ್ದಾರೆ. ಪ್ರತಿವರ್ಷ ಮಳೆಗಾಲದಲ್ಲಿ 30 ರಿಂದ 40 ರೂಪಾಯಿ ಇರ್ತಿತ್ತು. ಆದರೆ ಈ ಬೇಸಿಗೆಯಿಂದ ಮಳೆಗಾಲದವರೆಗೂ ಒಂದೇ ಬೆಲೆ ಇದೆ. ಆರೋಗ್ಯದ ದೃಷ್ಟಿಯಿಂದ ಪ್ರತಿದಿನ ಎಳ ನೀರನ್ನ ಕುಡಿಯಲೇಬೇಕು. ಆದರೆ ಇಷ್ಟೊಂದು ಬೆಲೆ ಇದ್ದರೆ ಹೇಗೆ ಎಂದು ಗ್ರಾಹಕ ಗೀತಾರಾಮಚಂದ್ರ ಅವರು ಪ್ರಶ್ನಿಸಿದರು.

ಇನ್ನು, ಮಳೆಗಾಲ ಆರಂಭವಾಗಿರುವ ಹಿನ್ನೆಲೆ ಎಳ ನೀರು ಸರಿಯಾಗಿ ಬರ್ತಿಲ್ಲ. ಸಧ್ಯ ಮಳವಳ್ಳಿ, ಪಾಂಡವಪುರದಿಂದ ಮಾತ್ರ ಎಳ ನೀರು ಪೂರೈಕೆಯಾಗುತ್ತಿದೆ. ರಾಮನಗರ, ಮಂಡ್ಯ, ಮದ್ದೂರಿನಿಂದ ಬರುತ್ತಿದ್ದ ಎಳ ನೀರು ಸ್ಟಾಪ್ ಆಗಿದೆ. ಈ ವರ್ಷದ ಬಿಸಿಲಿನ ಎಫೆಕ್ಟ್ ನಿಂದಾಗಿ ಫಸಲು ಸರಿಯಾಗಿ ಬರ್ಲಿಲ್ಲ. ಹೀಗಾಗಿ ಫಸಲು ಕಡಿಮೆ ಬರುತ್ತಿದ್ದು, ಸಿಟಿಗೆ 30% ರಷ್ಟು ಎಳ ನೀರು ಮಾತ್ರ ಪೂರೈಕೆಯಾಗುತ್ತಿದೆ. ಎಳ ನೀರಿಗೆ ಬೆಲೆ ಏರಿಕೆಯಾಗಿದ್ದು, ಮುಂದಿನ ದಿನಗಳಲ್ಲಿ ಮತ್ತಷ್ಟು ಬೆಲೆ ದುಬಾರಿಯಾಗುವ ಸಾಧ್ಯತೆ ಇದೆ ಅಂತ ವ್ಯಾಪಾರಸ್ಥರು ಹೇಳ್ತಿದ್ದಾರೆ.

## ಮೊದಲನೇ ಪುಟದಿಂದ...

### ಬಿಎಸ್‌ವೈರಿಂದ ಚಾಲನೆ

ಇನ್ನೊಂದೆಡೆ, ವಿಜಯೇಂದ್ರ ನೇತೃತ್ವದಲ್ಲಿ ಪಾದಯಾತ್ರೆಗೆ ಒಪ್ಪದ ರೆಬೆಲ್ ನಾಯಕರು ಸಭೆ ಸೇರಿದ್ದಾರೆ. ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ಪ್ರತಾಪ್‌ಸಿಂಹ, ಕುಮಾರ ಬಂಗಾರಪ್ಪ ಸಭೆ ನಡೆಸಿದ್ದಾರೆ. ಪಾದಯಾತ್ರೆಯಲ್ಲಿ ಪಾಲ್ಗೊಳ್ಳದಿರಲು ತೀರ್ಮಾನಿಸಿದ್ದಾರೆ.

### ಬೆಂಗಳೂರಿನಲ್ಲಿ ಇಲ್ಲ ಅವಕಾಶ

ಹೇಳಿದ್ದರು. ಅಲ್ಲದೆ, ಪಾದಯಾತ್ರೆಗೆ ಬೆಂಬಲ ನೀಡುವುದಿಲ್ಲ ಎಂದೂ ಹೇಳಿದ್ದರು. ನಂತರ ಬಿಜೆಪಿ ಹೈಕಮಾಂಡ್ ಅವರ ಮನವೊಲಿಸುವಲ್ಲಿ ಯಶಸ್ವಿಯಾಗಿತ್ತು.

ಶನಿವಾರ ಮೈಸೂರಿಗೆ ಪಾದಯಾತ್ರೆ ಆರಂಭವಾಗಲಿದೆ. ಸಣ್ಣಪುಟ್ಟ ಗೊಂದಲ ಇದ್ದರೂ ಪಾದಯಾತ್ರೆ ನಡೆಯಲಿದೆ. ಶನಿವಾರ ಬೆಳಗ್ಗೆ 8.30ಕ್ಕೆ ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಆರಂಭಗೊಳ್ಳಲಿದೆ. ಕುಮಾರಸ್ವಾಮಿಯೇ ಪಾದಯಾತ್ರೆಗೆ ಚಾಲನೆ ನೀಡುತ್ತಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಗುರುವಾರ ತಿಳಿಸಿದ್ದರು.

### 206 ಮಂದಿ ನಾಪತ್ತೆ

ಮಾಹಿತಿ ಸಂಗ್ರಹಿಸಿದ್ದೇವೆ. ಈಗ ಲಭ್ಯವಾಗಿರುವ ಮಾಹಿತಿ ಪ್ರಕಾರ 206 ಜನ ನಾಪತ್ತೆಯಾಗಿದ್ದಾರೆ. ಆದರೆ ಇದೇ ಅಧಿಕೃತವಲ್ಲ ಎಂದು ಮಾಹಿತಿ ನೀಡಿದರು.

ಭೂಕುಸಿತ ನಡೆದ ಜಾಗ ಬಹಳ ದೊಡ್ಡದಿದೆ. ಸೇನೆ, ಎನ್‌ಡಿಆರ್‌ಎಫ್, ಎಸ್‌ಡಿಆರ್‌ಎಫ್, ಅಗ್ನಿಶಾಮಮಕ ದಳ ಸೇರಿದಂತೆ ಎಲ್ಲಾ ತಂಡಗಳನ್ನು ಸೇರಿಸಿದ್ದರೆ ಅಂದಾಜು 3 ಸಾವಿರ ಮಂದಿ ಈಗ ರಕ್ಷಣಾ ಕಾರ್ಯದಲ್ಲಿ ತೊಡಗಿದ್ದಾರೆ. ಈ ಕೆಲಸಕ್ಕೆ ಸ್ಥಳೀಯರ ಅಗತ್ಯ ನೆರವು ಬೇಕು. ಸ್ಥಳೀಯರ ನೆರವು ಇಲ್ಲದೇ ಪತ್ತೆ ಮಾಡಲು ಸಾಧ್ಯವಿಲ್ಲ. ಹೀಗಾಗಿ ಎಲ್ಲರ ಸಹಕಾರ ಪಡೆದು ಪತ್ತೆ ಕಾರ್ಯ ಮಾಡುತ್ತಿದ್ದೇವೆ ಎಂದು ಹೇಳಿದರು.

ಈ ವೇಳೆ ನಾಪತ್ತೆಯಾಗಿರುವ ಪ್ರವಾಸಿಗರ ಬಗ್ಗೆ ಕೇಳಿದ ಪ್ರಶ್ನೆಗೆ, ಪ್ರವಾಸಿಗರು ಬಂದಿದ್ದಾರೆ ಎಂಬ ಮಾಹಿತಿ ಸಿಕ್ಕಿದೆ. ಆದರೆ ಎಷ್ಟು ಮಂದಿ ಬಂದಿದ್ದಾರೆ ಎಲ್ಲಿ ಅವರು ತಂಗಿದ್ದರು ಎಂಬ ಮಾಹಿತಿಯನ್ನು ನಾವು ಈಗ ಇಲ್ಲಿರುವ ಹೋಮ್‌ಸ್ಟೇಗಳಿಂದ ಸಂಗ್ರಹಿಸುವ ಕೆಲಸ ಮಾಡುತ್ತಿದ್ದೇವೆ ಎಂದು ವಿವರಿಸಿದರು.

ಮೊದಲ ಭೂಕುಸಿತ ಸಂಭವಿಸಿದ ಒಂದು ಗಂಟೆಯ ಒಳಗಡೆ ನಮ್ಮ ರಕ್ಷಣಾ ತಂಡ ಈ ಸ್ಥಳವನ್ನು ತಲುಪಿತ್ತು. ಸೇತುವೆ ಕೊಚ್ಚಿ ಹೋಗಿದ್ದರಿಂದ ಕೂಡಲೇ ಇನ್ನೊಂದು ಬದಿಯನ್ನು ತಲುಪಲು ಸಾಧ್ಯವಾಗಿರಲಿಲ್ಲ ಎಂದು ತಿಳಿಸಿದರು.

### ವಿಷ ಕೊಡಿ

ಮರವೂರು ಕಿಂಡಿ ಅಣೆಕಟ್ಟಿಗೆ ಎಮರ್ಜೆನ್ಸಿ ಗೇಟ್ ಮಾಡಿದರೆ ಸಮಸ್ಯೆ ಪರಿಹಾರವಾಗುತ್ತದೆ. 11 ವರ್ಷಗಳಿಂದ ಈ ಬಗ್ಗೆ ಮನವಿ ಮಾಡಿದರೂ ಯಾವುದೇ ಕ್ರಮ ಆಗಿಲ್ಲ. ಈ ಮಳೆಗಾಲದಲ್ಲಿ ಮೂರು ಬಾರಿ ನಮ್ಮ ಮನೆಗಳು ಮುಳುಗಡೆ ಆದವು. ಪ್ರತಿ ಸಾರಿ ನೀವು ಬಂದು ಹೋಗುವುದು ಮಾತ್ರ ನಡೆಯುತ್ತಿದೆ. ನಮಗೆ ನೀವು ನೀಡುವ ಪರಿಹಾರದ ಹಣ ಬೇಡ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕೊಡಿ ಎಂದು ಗ್ರಾಮಸ್ಥರು ಅಳಲು ತೋಡಿಕೊಂಡರು.

ನಮ್ಮ ಕೃಷಿ ಭೂಮಿಗೆ ಹಾನಿ ಆಗಿದೆ. ಮನೆಯೆಲ್ಲಾ ಮುಳುಗಡೆ ಆಗಿದೆ. ನೀವೆಲ್ಲಾ ಒಂದೆರಡು ದಿನ ಇಲ್ಲಿ ಬಂದು ನಿಲ್ಲಿ. ಆಗ ನಿಮಗೆ ಸಮಸ್ಯೆ ಅರ್ಥ ಆಗುತ್ತದೆ ಎಂದು ಜನ ಎಂದು ಆಕ್ರೋಶ ವ್ಯಕ್ತಪಡಿಸಿದರು.

**ಮುಲ್ಲೈ ಮುಗಿಲನ್ ಗೆ ಶಹಬ್ಬಾಸ್ ಎಂದ ಜನ:** ಉಸ್ತುವಾರಿ ಸಚಿವರ ಮುಂದೆ ದಕ್ಷಿಣಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ಗೆ ಮೊಗೇರ್ ಕುದ್ರು ಜನರು ಶಹಬ್ಬಾಸ್ ಗಿರಿ ವ್ಯಕ್ತಪಡಿಸಿದರು. ಯಾವುದೇ ಕಾರಣಕ್ಕೂ ಜಿಲ್ಲಾಧಿಕಾರಿಯವರನ್ನು ಇಲ್ಲಿಂದ ವರ್ಗಾವಣೆ ಮಾಡಬೇಡಿ. ಅವರು ಬಹಳ ಒಳ್ಳೆಯ ಅಧಿಕಾರಿ. ಜಿಲ್ಲಾಧಿಕಾರಿಗೆ ನಮ್ಮ ನೋವು ಕೇಳಿಸಿಕೊಳ್ಳುವ ತಾಳ್ಮೆ ಇದೆ ಎಂದು ಜನ ಮೆಚ್ಚುಗೆಯ ಮಾತುಗಳನ್ನಾಡಿದರು.

ಇದಕ್ಕೆ ಪ್ರತಿಕ್ರಿಯಿಸಿದ ಗುಂಡೂರಾವ್, ಜಿಲ್ಲಾಧಿಕಾರಿಯವರು ಮುಂದೆ ಬಡ್ತಿ ಪಡೆಯುತ್ತಾರೆ. ಅವರು ಬಹಳ ಒಳ್ಳೆಯ ಅಧಿಕಾರಿ, ಉತ್ತಮವಾಗಿ ಕೆಲಸ ಮಾಡುತ್ತಾರೆ ಎಂದರು.

### ಮಳೆಯಿಂದ ಬಿಡುವು

ಈ ಜಿಲ್ಲೆಗಳಿಗೆ ಗುರುವಾರ ಆರೆಂಜ್ ಅಲರ್ಟ್ ಘೋಷಿಸಲಾಗಿತ್ತು. ಇಂದು ಮತ್ತೆ ರೆಡ್ ಅಲರ್ಟ್ ಘೋಷಣೆ ಮಾಡಲಾಗಿದೆ. ಈಗಾಗಲೇ ಕೇರಳ ಭಾಗದಲ್ಲಿ ವರುಣ ಅಬ್ಬರಿಸುತ್ತಿದ್ದು, ದಕ್ಷಿಣ ಕನ್ನಡ ಜಿಲ್ಲೆಗೆ ಇಂದು ಆರೆಂಜ್ ಅಲರ್ಟ್ ನೀಡಲಾಗಿದೆ.

ಉಳಿದಂತೆ ಮಲೆನಾಡು ಜಿಲ್ಲೆಗಳಾದ ಹಾಸನ, ಚಿಕ್ಕಮಗಳೂರು, ಕೊಡಗು ಜಿಲ್ಲೆಗಳಲ್ಲಿ ಮಳೆ ಪ್ರಮಾಣ ಇಳಿಕೆಯಾಗುವ ಸಾಧ್ಯತೆ ಇದೆ. ಸದ್ಯ ಮಲೆನಾಡು ಜಿಲ್ಲೆಗಳು ರೆಡ್ ಅಲರ್ಟ್‌ನಿಂದ ಯೆಲ್ಲೋ ಅಲರ್ಟ್‌ಗೆ ಮರಳಿದೆ. ಇಂದಿನಿಂದ ಮುಂದಿನ ಮೂರ್ನಾಲ್ಕು ದಿನ ಈ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಿಸಿದೆ. ಶಿವಮೊಗ್ಗ ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಿಸಿದೆ. ಬೆಂಗಳೂರಿನಲ್ಲೂ ಮೋಡ ಕವಿದ ವಾತವರಣ ಮುಂದುವರಿಯಲಿದ್ದು, ಕೆಲವೊಮ್ಮೆ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

### ಕೈತೊಳೆದುಕೊಂಡ ಬಿಎಂಟಿಸಿ

ಇತ್ತ ಮಹಿಳಾ ಕಂಡಕ್ಟರ್, ಮೈಕಾನಿಕ್ ಮಹಿಳೆಯರಿಗೆ 1707 ರುಪಾಯಿ (ಎರಡು ಸೀರೆಗೆ) ಸೀರೆ ಹೊಲಿಗೆ ಹಾಕಲು 100 ರುಪಾಯಿ ನೀಡಿದ್ದಾರೆ. 1800 ರುಪಾಯಿಗೆ ಎರಡು ಸೀರೆ ಎರಡು ಜಾಕೆಟ್ ಹಾಕಿಸಿಕೊಳ್ಳಲು ಹಣ ನೀಡಿದ್ದಾರೆ. ಆದರೆ ಅಂಗಡಿಯಲ್ಲಿ ಒಂದು ಖಾಕಿ ಸೀರೆಗೆ 1500 ರೂ.ನಿಂದ 2000 ರುಪಾಯಿ ಆಗುತ್ತದೆ. ನಾರ್ಮಲ್ ಬೌಸ್ಸ್ ಹೊಲಿಯಲು 300 ರೂ. ತೆಗೆದುಕೊಳ್ಳುತ್ತಾರೆ ದರ್ಜಿಗಳು. ಆದರೆ ಬಿಎಂಟಿಸಿ ಎರಡು ಸೀರೆ ಎರಡು ಬ್ಲೌಸ್‌ಗೆ ಕೇವಲ 1800 ರುಪಾಯಿ ನೀಡಿದೆ. ಇನ್ನು ಸೀರೆ ಉಟ್ಟುಕೊಂಡು ಬಸ್‌ನಲ್ಲಿ ಮಹಿಳಾ ಕಂಡಕ್ಟರ್‌ಗಳು ಕೆಲಸ ಮಾಡಲು ಆಗುವುದಿಲ್ಲ. ಪ್ರತಿದಿನ ಬಸ್‌ನಲ್ಲಿ ಸಾವಿರಾರು ಜನ ಪ್ರಯಾಣಿಕರ ನಡುವೆ ಓಡಾಡಿ ಟಿಕೆಟ್ ನೀಡಬೇಕಾಗುತ್ತದೆ. ಡಿಪೋಗಳಲ್ಲಿ ಮೆಕ್ಯಾನಿಕ್ ಮಹಿಳೆಯರು ಕೂಡ ಸೀರೆಯುಟ್ಟು ಕೆಲಸ ಮಾಡಲು ಆಗುವುದಿಲ್ಲ.

ಬಿಎಂಟಿಸಿಯಲ್ಲಿ ಒಟ್ಟು 13 ಸಾವಿರ ನಿರ್ವಾಹಕ ಮತ್ತು ಚಾಲಕರಿದ್ದಾರೆ. ಆರು ಸಾವಿರ ಮಹಿಳಾ ಕಂಡಕ್ಟರ್ ಮತ್ತು ಮಹಿಳಾ ಮೆಕ್ಯಾನಿಕ್ ಗಳಿದ್ದಾರೆ.

ಬೇಡವಾದುದಕ್ಕೆಲ್ಲ ಕೋಟ್ಯಂತರ ರುಪಾಯಿ ಖರ್ಚು ಮಾಡಲು ಬಿಎಂಟಿಸಿ ಬಳಿ ಹಣವಿರುತ್ತದೆ. ಆದರೆ ಸಂಸ್ಥೆಗಾಗಿ ಪ್ರಾಣವನ್ನೇ ಪಣಕ್ಕಿಟ್ಟು ಕೆಲಸ ಮಾಡುವ ನೌಕರರ ಮಾನ ಮುಚ್ಚಿಕೊಳ್ಳಲು ಸರಿಯಾಗಿ ಬಟ್ಟೆ ನೀಡಲು ಹಣವಿಲ್ಲ ಎಂದರೆ ಹೇಗೆ ಎಂದು ನೌಕರರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಅಸಲಿ

ವಿಡಿಯೋಗಳು ಅಸಲಿಯಾಗಿದ್ದರೂ ವಿಡಿಯೋದಲ್ಲಿರುವ ವ್ಯಕ್ತಿ ಯಾರು ಎನ್ನುವುದು ಸಾಬೀತಾಗಿಲ್ಲ. ಅಶ್ಲೀಲ ವಿಡಿಯೋದಲ್ಲಿರುವ ಪುರುಷನ ಮುಖ ಪ್ರದರ್ಶನವಾಗಿಲ್ಲ. ಹೀಗಾಗಿ ವಿಡಿಯೋದಲ್ಲಿರುವ ವ್ಯಕ್ತಿಗೂ, ಬಂಧನಕ್ಕೆ ಒಳಗಾಗಿರುವ ವ್ಯಕ್ತಿಗೂ ಹೋಲಿಕೆ ಮಾಡಿ ತನಿಖೆ ನಡೆಸಲು ಪೊಲೀಸರು ಮುಂದಾಗಿದ್ದಾರೆ.

ಎಫ್‌ಎಸ್‌ಎಲ್ ವಿಡಿಯೋಗಳು ಅಸಲಿ ಎಂದು ವರದಿ ನೀಡಿದ್ದರೂ ಕೆಲ ವಿಡಿಯೋಗಳ ಬಗ್ಗೆ ಎಸ್‌ಐಟಿ ಸ್ಪಷ್ಟನೆ ಕೇಳಿದೆ. ಎಸ್‌ಐಟಿಯ ಸ್ಪಷ್ಟನೆಗೆ ಎಫ್ ಎಸ್‌ಎಲ್ ಉತ್ತರ ನೀಡಿದ ಬಳಿಕ ಪ್ರಜ್ವಲ್ ರೇವಣ್ಣ ವಿರುದ್ಧ ಚಾರ್ಜ್‌ಶೀಟ್ ಸಲ್ಲಿಕೆ ಮಾಡಲು ಪೊಲೀಸರು ಮುಂದಾಗಿದ್ದಾರೆ.

### ಕೊಲೆ

ಇತ್ತೀಚೆಗಷ್ಟೇ ಪರಪ್ಪನ ಅಗ್ರಹಾರ ಜೈಲಿನಿಂದ ಹೊರಗಡೆ ಬಂದಿದ್ದ. ಬಳಿಕ ಬ್ಲಡ್ ಬ್ಯಾಂಕ್‌ನಲ್ಲಿ ಕೆಲಸ ಮಾಡಿಕೊಂಡಿದ್ದ. ಸಂಜೆ ನಾಲ್ಕು ಗಂಟೆ ಸುಮಾರಿಗೆ ಅಜಿತ್ ಕುಮಾರ್ ಊಟ ಮುಗಿಸಿಕೊಂಡು ರಸೆಲ್ದಾರ್ ಸ್ಟ್ರೀಟ್ ನಲ್ಲಿ ನಡೆದುಕೊಂಡು ಹೋಗುತ್ತಿರುವಾಗ, ಹಂತಕರು ಬಂದು ಕೊಲೆ ಮಾಡಿದ್ದಾರೆ. ನೂರು ಮೀಟರ್ ಅಷ್ಟು ದೂರ ಅಟ್ಟಾಡಿಸಿ ತಲೆ ಭಾಗ ಸೇರಿ ಹಲವು ಕಡೆ ದಾಳಿ ಮಾಡಿ ಹತ್ಯೆಗೈದು ಹಂತಕರು ತಲೆಮರೆಸಿಕೊಂಡಿದ್ದಾರೆ. ಘಟನೆ ಸಂಬಂಧ ಶೇಷಾದ್ರಿಪುರಂ ಪೊಲೀಸ್ ಠಾಣೆಯಲ್ಲಿ ಕೊಲೆ ಕೇಸ್ ದಾಖಲಾಗಿದೆ.

ಕೊಲೆಯಾಗಿರುವ ವ್ಯಕ್ತಿ ಹತ್ಯೆ ಪ್ರಕರಣವೊಂದರಲ್ಲಿ ಜೈಲಿಗೆ ಹೋಗಿ ಬಂದಿದ್ದ. ಹಾಗಾಗಿ ಹಳೆ ದ್ವೇಷ ಇಟ್ಟುಕೊಂಡವರೇ ಅಜಿತ್ ಕೊಲೆ ಮಾಡಿರುವ ಸಾಧ್ಯತೆ ಇದೆ ಎಂದು ಪೊಲೀಸರು ಶಂಕಿಸಿದ್ದಾರೆ. ವಿಶೇಷ ತಂಡಗಳನ್ನು ರಚಿಸಿದ್ದು, ಹಂತಕರಿಗಾಗಿ ಪೊಲೀಸರು ಬಲೆ ಬೀಸಿದ್ದಾರೆ.

ಪುತ್ತೂರಿನಲ್ಲಿ ಗುಡ್ಡ ಕುಸಿತ

# ಮಾಣಿ-ಮೈಸೂರು ರಾಷ್ಟ್ರೀಯ ಹೆದ್ದಾರಿ ಬಂದ್

**ಮಂಗಳೂರು:** ದಕ್ಷಿಣಕನ್ನಡ ಜಿಲ್ಲೆಯ ಪುತ್ತೂರಿನಲ್ಲಿ ಗುಡ್ಡ ಕುಸಿದ ಪರಿಣಾಮ ಮಾಣಿ ಮೈಸೂರು ರಾಷ್ಟ್ರೀಯ ಹೆದ್ದಾರಿ ಬಂದ್ ಆಗಿದೆ. ಸದ್ಯ ಮಣ್ಣು ತೆರವು ಕಾರ್ಯಾಚರಣೆ ಪ್ರಗತಿಯಲ್ಲಿದೆ. ಪುತ್ತೂರಿನ ಬೈಪಾಸ್ ರಸ್ತೆಯ ತೆಂಕಿಲ ಎಂಬಲ್ಲಿ ಹೆದ್ದಾರಿ ಮೇಲೆ ಶುಕ್ರವಾರ ಮುಂಜಾನೆ ಗುಡ್ಡ ಕುಸಿದು ಬಿದ್ದಿದೆ. ಪರಿಣಾಮವಾಗಿ ರಸ್ತೆ ಸಂಪರ್ಕ ಕಡಿತಗೊಂಡಿದೆ. ಸದ್ಯ ಮಡಿಕೇರಿ ಹಾಗೂ ಮೈಸೂರು ಕಡೆಗೆ ಪ್ರಯಾಣಿಸುವವರಿಗೆ ಬದಲಿ ರಸ್ತೆಯಾಗಿ ಪುತ್ತೂರು ಸಿಟಿ ಮೂಲಕ ಸಂಚಾರಕ್ಕೆ ವ್ಯವಸ್ಥೆ ಕಲ್ಪಿಸಲಾಗಿದೆ.

ನಸುಕಿನ ಜಾವ ಯಾವುದೇ ವಾಹನ ಸಂಚಾರ ಇಲ್ಲದ ಸಮಯ ಗುಡ್ಡ ಕುಸಿತವಾಗಿದ್ದರಿಂದ ಭಾರಿ ಅನಾಹುತ ತಪ್ಪಿದೆ. ಸದ್ಯ ಹೆದ್ದಾರಿ ಮೇಲೆ ಬಿದ್ದಿರುವ ಮಣ್ಣು ತೆರವು ಮಾಡುವ ಕಾರ್ಯಾಚರಣೆ ನಡೆಯುತ್ತಿದೆ.

**ಮಂಗಳೂರಿಗೆ ಇಂದು ಉಸ್ತುವಾರಿ ಸಚಿವರು:** ದಕ್ಷಿಣಕನ್ನಡ ಜಿಲ್ಲೆಯಲ್ಲಿ ಸುರಿದ ಭಾರಿ ಮಳೆಯಿಂದ ಸಾಕಷ್ಟು ಹಾನಿ ಸಂಭವಿಸಿದೆ. ಹೀಗಾಗಿ ನೆರೆ, ಮಳೆ ಹಾನಿ ಪ್ರದೇಶಗಳಿಗೆ ಇಂದು ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಭೇಟಿ ನೀಡಿ ಪರಿಶೀಲನೆ ನಡೆಸಲಿದ್ದಾರೆ. ದಿನೇಶ್ ಗುಂಡೂರಾವ್ ಮಂಗಳೂರಿನ ಅದ್ಯಪಾಡಿ, ಕೆತ್ತಿಕಲ್, ಪಂಜಿಮೊಗರು, ಬಿ.ಸಿ ರೋಡ್ ಗೆ ಭೇಟಿ ನೀಡಲಿದ್ದಾರೆ.



ಮಳೆ ಹಾನಿ ಪ್ರದೇಶಗಳ ಭೇಟಿ ಬಳಿಕ ಅಧಿಕಾರಿಗಳ ಸಭೆ ನಡೆಸಲಿದ್ದಾರೆ. ಮಳೆಹಾನಿ ಪ್ರದೇಶಗಳಲ್ಲಿ ರಕ್ಷಣಾ ಕಾರ್ಯ, ಮುಂಜಾಗ್ರತಾ ಕ್ರಮ ಕೈಗೊಳ್ಳುವ ಬಗ್ಗೆ ಸಭೆ ನಡೆಸಲಿದ್ದಾರೆ. ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಸಭೆ ನಡೆಯಲಿದೆ.

ಕಳೆದ ಕೆಲವು ದಿನಗಳಿಂದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುತ್ತಿದೆ. ಈ ಹಿನ್ನೆಲೆಯಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರ ಕೆಲವು ಮುನ್ನೆಚ್ಚರಿಕೆಗಳನ್ನು ವಹಿಸಿದೆ. ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಶಾಲಾ ಕಾಲೇಜುಗಳಿಗೆ ಇಂದು ಕೂಡ ರಜೆ ಘೋಷಿಸಲಾಗಿದೆ.



# ಫುವಾದ್ ಸಾವಿನಿಂದ ಕುಪಿತಗೊಂಡ ಹಿಜ್ಬುಲ್ಲಾದಿಂದ ಇಸ್ರೇಲ್ ಮೇಲೆ ರಾಕೆಟ್ ದಾಳಿ

**ಇಸ್ರೇಲ್:** ಉನ್ನತ ಕಮಾಂಡ್ ಫುವಾದ್ ಶುಕರ್ ಹತ್ಯೆಯಿಂದ ಹಿಜ್ಬುಲ್ಲಾ ಕೋಪಗೊಂಡಿದ್ದು, ಇಸ್ರೇಲ್ ಮೇಲೆ ಡಜನ್ ಗಟ್ಟಲೆ ರಾಕೆಟ್ ದಾಳಿ ನಡೆಸಿದೆ. ಕೇವಲ ಐದು ರಾಕೆಟ್‌ಗಳು ಮಾತ್ರ ಇಸ್ರೇಲ್‌ಗೆ ಪ್ರವೇಶಿಸಲು ಸಾಧ್ಯವಾಯಿತು. ಇಸ್ರೇಲ್ ರಕ್ಷಣಾ ಪಡೆಗಳ ಪ್ರಕಾರ, ರಾಕೆಟ್ ದಾಳಿಯಲ್ಲಿ ಯಾವುದೇ ನಾಗರಿಕರಿಗೆ ಯಾವುದೇ ಹಾನಿ ಅಥವಾ ಗಾಯಗಳ ವರದಿಯಾಗಿಲ್ಲ. ಅದೇ ಸಮಯದಲ್ಲಿ, ಪ್ರತೀಕಾರವಾಗಿ, ಇಸ್ರೇಲ್ ದಕ್ಷಿಣ ಲೆಬನಾನ್‌ನ ಯತಾರ್‌ನಲ್ಲಿ ಹಿಜ್ಬುಲ್ಲಾದ ರಾಕೆಟ್ ಲಾಂಚರ್‌ನ ಮೇಲೆ ದಾಳಿ ಮಾಡಿತು.

ಇಸ್ರೇಲ್‌ನ ಗೋಲನ್ ಹೈಟ್ಸ್‌ನಲ್ಲಿರುವ ಫುಟ್‌ಬಾಲ್ ಮೈದಾನದಲ್ಲಿ ಹಿಜ್ಬುಲ್ಲಾ ನಡೆಸಿದ ದಾಳಿಯಲ್ಲಿ 12 ಮಕ್ಕಳು ಸಾವನ್ನಪ್ಪಿದ್ದಾರೆ . ಅದರ ನಂತರ ಇಸ್ರೇಲ್ ಬೈರುತ್‌ನಲ್ಲಿ ಹಿಜ್ಬುಲ್ಲಾದ ಉನ್ನತ ಕಮಾಂಡರ್ ಫುಡ್ ನನ್ನು ಕೊಂದಿತು. ಫುವಾದ್ ಹತ್ಯೆಯ ನಂತರ, ಹಿಜ್ಬುಲ್ಲಾ ಮತ್ತು ಇಸ್ರೇಲ್ ನಡುವೆ ಉದ್ವಿಗ್ನತೆ ಹೆಚ್ಚಾಯಿತು. ಫುವಾಡ್‌ನ ಮರಣದ 48 ಗಂಟೆಗಳ ನಂತರ, ಹಿಜ್ಬುಲ್ಲಾ ಇಸ್ರೇಲ್‌ನ ಪಶ್ಚಿಮ ಗೆಲಿಲಿಯ ಮೇಲೆ ರಾಕೆಟ್ ದಾಳಿಯನ್ನು ಪ್ರಾರಂಭಿಸಿತು.



ಲೆಬನಾನ್‌ನಿಂದ ಬರುತ್ತಿರುವ ಹಲವಾರು ರಾಕೆಟ್ ಗಳನ್ನು ಪತ್ತೆಹಚ್ಚಲಾಯಿತು, ಅವುಗಳಲ್ಲಿ ಕೆಲವು ಗಾಳಿಯಲ್ಲಿ ನಾಶವಾದವು ಎಂದು ಖಆಈ ಎಕ್ಸ್ ಪೋಸ್ಟ್‌ನಲ್ಲಿ ತಿಳಿಸಿದೆ. ಅದೇ ಸಮಯದಲ್ಲಿ, ಯಾವುದೇ ಸಾವುನೋವುಗಳು ಸಂಭವಿಸದಿದ್ದರೂ ಕೆಲವು ತೆರೆದ ಪ್ರದೇಶಗಳಲ್ಲಿ ಬಿದ್ದವು.

ಜುಲೈ 13 ರಂದು ದಕ್ಷಿಣ ಗಾಜಾ ಪಟ್ಟಿಯಲ್ಲಿ ನಡೆದ ವೈಮಾನಿಕ ದಾಳಿಯು ಹಮಾಸ್ ಮಿಲಿಟರಿ ವಿಂಗ್ ಕಮಾಂಡರ್ ಮೊಹಮ್ಮದ್ ಡೀಫ್ ಅನ್ನು ಕೊಂದಿರುವುದಾಗಿ ಘೋಷಿಸಿತು. ಟೆಹ್ರಾನ್‌ನಲ್ಲಿ ಹಮಾಸ್ ನಾಯಕ ಇಸ್ಮಾಯಿಲ್ ಹನಿಯಾ ಹತ್ಯೆಯಾದ ಒಂದು ದಿನದ ನಂತರ ಇಸ್ರೇಲ್ ಡೀಫ್ ನ ಸಾವನ್ನು ದೃಢಪಡಿಸಿದೆ.

ಹಮಾಸ್ ನಾಯಕ ಇಸ್ಮಾಯಿಲ್ ಹನಿಯಾ ಮತ್ತು ಹಿರಿಯ ಹಿಜ್ಬುಲ್ಲಾ ಕಮಾಂಡರ್ ಫುವಾಡ್ ಶುಕರ್ ಅವರ ಹತ್ಯೆಯ ಗಂಟೆಗಳ ನಂತರ ಇಸ್ರೇಲ್ ಪಿಎಂ ಬೆಂಜಮಿನ್ ನೆತನ್ಯಾಹು ಪ್ರತಿಕ್ರಿಯಿಸಿದ್ದಾರೆ. ಕಳೆದ ಕೆಲವು ದಿನಗಳಲ್ಲಿ ಇಸ್ರೇಲ್ ಶತ್ರುಗಳ ಮೇಲೆ ಉಗ್ರ, ದಾಳಿ ನಡೆಸಿದೆ ಎಂದು ಅವರು ಹೇಳಿದರು.



ನವದೆಹಲಿಯಲ್ಲಿ ನಿರ್ಮಾಣ ಹಂತದಲ್ಲಿರುವ ಕರ್ನಾಟಕ ಭವನದ ನೂತನ ಕಟ್ಟಡಕ್ಕೆ ಭೇಟಿ ನೀಡಿದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಭವನದ ಅಂತಿಮ ಕಾಮಗಾರಿ ಪರಿಶೀಲನೆ ನಡೆಸಿ, ನಿಗದಿತ ಸಮಯದೊಳಗೆ ಕಾಮಗಾರಿಯನ್ನು ಪೂರ್ಣಗೊಳಿಸುವಂತೆ ಸಂಬಂಧಿತ ಅಧಿಕಾರಿಗಳಿಗೆ ನಿರ್ದೇಶಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಸರ್ಕಾರದ ನವದೆಹಲಿಯ ವಿಶೇಷ ಪ್ರತಿನಿಧಿ ಟಿ.ಬಿ. ಜಯಚಂದ್ರ ಸೇರಿದಂತೆ ಅಧಿಕಾರಿಗಳು ಉಪಸ್ಥಿತರಿದ್ದರು.

# ದುಶ್ಚಟ ಮುಕ್ತ ಸಮಾಜ ನಿರ್ಮಾಣಕ್ಕೆ ಕರೆ

**ರಾಮನಗರ:** ಜೋಳಿಗೆ ಹಿಡಿದು ಸಹಸ್ರಾರು ಜನರನ್ನು ದುಶ್ಚಟಗಳಿಂದ ಮುಕ್ತಮಾಡಿದ ಬಾಗಲಕೋಟೆಯ ವಿರಕ್ತ ಮಠದ ಡಾ.ಮಹಾಂತ ಶಿವಯೋಗಿ ಸ್ವಾಮೀಜಿಗಳು ತಮ್ಮ ಜೀವನವನ್ನು ವ್ಯಸನ ಮುಕ್ತ ಸಮಾಜವನ್ನು ನಿರ್ಮಿಸಲು ಮುಡಿಪಾಗಿಟ್ಟಿದ್ದರು, ಸಮಾಜ ಅವರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನಡೆಯಬೇಕೆಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ಆಶಿಸಿದರು.

ಅವರು ಆ. 1ರ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರಿನ ಮದ್ಯಪಾನ ಸಂಯಮ ಮಂಡಳಿ ಹಾಗೂ ಜಿಲ್ಲೆಯ ವಿವಿಧ ಇಲಾಖೆಗಳ ಸಹಯೋಗದಲ್ಲಿ ಡಾ. ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಪ್ರಯುಕ್ತ ಹಮ್ಮಿಕೊಳ್ಳಲಾಗಿದ್ದ ವ್ಯಸನ ಮುಕ್ತ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಹಿಪ್ಪರಗಿ ಗ್ರಾಮದಲ್ಲಿ 1930ರ ಆ.1ರಂದು ಜನಿಸಿದ ಡಾ. ಮಹಾಂತ ಶಿವಯೋಗಿಗಳು ಸಮಾಜ ಸುಧಾರಕರಾಗಿ ಅಪಾರ ಸೇವೆ ಸಲ್ಲಿಸಿದ್ದಾರೆ, ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಅವರು ಪ್ರಾರಂಭಿಸಿದ ಮಹಾಂತ ಜೋಳಿಗೆ ಯೋಜನೆ ಅತ್ಯಂತ ಪ್ರಮುಖವಾದದ್ದಾಗಿದೆ. ಕುಡಿತ ಹಾಗೂ ಮಾದಕ ವಸ್ತುಗಳ ದುಷ್ಪರಿಣಾಮಗಳ ಬಗ್ಗೆ ಸ್ವಾಮೀಜಿಯವರು ಮನೆ ಮನೆಗಳಿಗೆ ತೆರಳಿ ತಂಬಾಕು, ಮದ್ಯಪಾನ ಸೇರಿದಂತೆ ಎಲ್ಲಾ ರೀತಿಯ ದುಶ್ಚಟಗಳ ಬಗ್ಗೆ ಜನತೆಗೆ ಮನ ಮನಮುಟ್ಟುವಂತೆ ತಿಳುವಳಿಕೆ ನೀಡಿದರು. ಸ್ವಾಮಿಜಿಯವರ ಮಾತುಗಳಿಗೆ ಮನ ಕರಗಿ ಪರಿವರ್ತನೆಯಾದ ಸಹಸ್ರಾರು ಜನರು ತಮ್ಮ ಎಲ್ಲಾ ದುಶ್ಚಟಗಳ ವಸ್ತುಗಳನ್ನು ಸ್ವಾಮೀಜಿಯವರ ಜೋಳಿಗೆಗೆ ಹಾಕಿ, ಇನ್ನುಂದೆ ಅವುಗಳನ್ನು ಬಳಸುವುದಿಲ್ಲ ಎಂದು ಪ್ರಮಾಣ ಮಾಡಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಆರೋಗ್ಯ ಇಲಾಖೆಯ ಮನಃಶಾಸ್ತ್ರಜ್ಞ ಚಂದ್ರಶೇಖರ್ ಅವರು ಉಪನ್ಯಾಸ ನೀಡಿ, ಅಧ್ಯಯನದ ಪ್ರಕಾರ ಭಾರತದಲ್ಲಿ 14ನೇ ವಯಸ್ಸಿಗೆ ಯುವಜನತೆ ವ್ಯಸನಕ್ಕೆ ಕಾಲಿಡುತ್ತಿದ್ದಾರೆ. ಆ ಮೂಲಕ ದುಶ್ಚಟಕ್ಕೆ ಬಲಿಯಾಗಿ, ತಮ್ಮನ್ನು ತಾವೇ ಕಳೆದುಕೊಳ್ಳುತ್ತಿದ್ದಾರೆ, ವ್ಯಸನಿಗಳನ್ನು ದುಶ್ಚಟಗಳಿಂದ ಹೊರತರುವಲ್ಲಿ ಜಿಲ್ಲೆಯ ವಿದ್ಯಾರ್ಥಿಗಳು ಯತ್ನಿಸುತ್ತಿರುವುದು ಕಂಡುಬಂದಿದೆ, ಹೆಚ್ಚಾಗಿ ಹೆಣ್ಣು ಮಕ್ಕಳು ತಮ್ಮ ಮನೆ ಅಥವಾ ಪರಿಸರದಲ್ಲಿದ್ದ ತಂಬಾಕು ವ್ಯಸನಿಗಳನ್ನು ವ್ಯಸನ ಮುಕ್ತರನ್ನಾಗಿಸಿದ್ದಾರೆ. ಇತ್ತೀಚೆಗೆ ಬಂದ ಸರ್ಕಾರದ ಆದೇಶದಂತೆ 18 ವರ್ಷದೊಳಗಿನ ಮಕ್ಕಳು ತಂಬಾಕು ಸೇವನೆ ಮಾಡುವುದು ಕಂಡು ಬಂದರೆ ಅವರ ವಿರುದ್ಧ ಪ್ರಕರಣ ದಾಖಲಿಸಿ ಮಾಹಿತಿ ನೀಡಬಹುದಾಗಿದೆ ಎಂದರು. ನಗರದಲ್ಲಿರುವ ಜಿಲ್ಲಾಸ್ಪತ್ರೆಯಲ್ಲಿ ರೂಮ್ ನಂಬರ್ 76ರಲ್ಲಿ ತಂಬಾಕು ವ್ಯಸನ ಮುಕ್ತ ಕೇಂದ್ರ ಕಾರ್ಯ ನಿರ್ವಹಿಸುತ್ತಿದೆ, ಅಲ್ಲಿ ಉಚಿತ ಚಿಕಿತ್ಸೆ ಹಾಗೂ ಸಮಾಲೋಚನೆ ನೀಡಲಾಗುತ್ತಿದೆ. ಅದರ ಸದುಪಯೋಗಪಡಿಸಿಕೊಳ್ಳುವಂತೆ ತಿಳಿಸಿದ ಅವರು ಕೇಂದ್ರ ಸರ್ಕಾರ ಗುರುತಿಸಿರುವ ಅತಿ ಹೆಚ್ಚು ಮಾದಕ ವಸ್ತುಗಳ ಬಳಕೆಯಲ್ಲಿ ಕರ್ನಾಟಕ ರಾಜ್ಯದಲ್ಲಿ ರಾಮನಗರ ಜಿಲ್ಲೆಯೂ ಸೇರಿದೆ ಹಾಗೂ ವಿದ್ಯಾರ್ಥಿಗಳು ದುಶ್ಚಟದಿಂದ ದೂರವಿರುವ ಪಣತೊಡಬೇಕು ಎಂದು ಅವರು ಹೇಳಿದರು.

# ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕೃತಿ ಕಲಿಸಲಿ

**ದಾವಣಗೆರೆ:** ಶಿಕ್ಷಣದಿಂದ ಮನುಷ್ಯನ ಬುದ್ಧಿ ಶಕ್ತಿ ಬೆಳೆಯುತ್ತದೆ. ಧರ್ಮದಿಂದ ಭಾವನೆಗಳು ಬೆಳೆಯುತ್ತವೆ. ಬದುಕಿ ಬಾಳುವ ಮನುಷ್ಯನಿಗೆ ಇವೆರಡರ ಅವಶ್ಯಕತೆಯಿದೆ. ಮಕ್ಕಳಿಗೆ ಶಿಕ್ಷಣದ ಜೊತೆಗೆ ಸಂಸ್ಕೃತಿ ಕಲಿಸುವ ಶಾಲೆಗಳು ಹೆಚ್ಚೆಚ್ಚು ಬೆಳೆದು ಬರಲೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಅವರು ಸೋಮವಾರ ತಾಲೂಕಿನ ಗೋಣಿವಾಡ ಪರಿಸರದಲ್ಲಿರುವ ಶ್ರೀ ಸೋಮೇಶ್ವರ ವಸತಿಯುತ ವಿದ್ಯಾಲಯದ ಮತ್ತೊಂದು ಭವ್ಯ ಶಾಲಾ ಕಟ್ಟಡ ಉದ್ಘಾಟನಾ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಶಿಕ್ಷಣದಿಂದ ದೇಶದ ಪ್ರಗತಿ ಮತ್ತು ಅಭ್ಯುದಯವಿದೆ. ಶಿಕ್ಷಣದಿಂದ ಯಾರೂ ವಂಚಿತರಾಗಬಾರದು. ನಗರ ಪ್ರದೇಶದಲ್ಲಿ ಉತ್ತಮವಾದ ಶಾಲೆಗಳಿರುವುದು ಸಹಜ. ಆದರೆ ಗ್ರಾಮೀಣ ಭಾಗದಲ್ಲಿ ಭಾರತೀಯ ಸಂಸ್ಕೃತಿಯ ಜೊತೆಗೆ ಆಧುನಿಕ ಶಿಕ್ಷಣ ಕೊಡುವ ಶಾಲೆಗಳು ಕಡಿಮೆ ಇವೆ. ಇಂದಿನ ಮಕ್ಕಳೇ ಮುಂದಿನ ನಾಯಕರು. ಮಕ್ಕಳಿಗಾಗಿ ಆಸ್ತಿ ಮಾಡದೇ ಅವರಿಗೆ ಉತ್ತಮ ಶಿಕ್ಷಣ ಕೊಡುವುದರ ಮೂಲಕ ಅವರನ್ನೇ ಆಸ್ತಿಯನ್ನಾಗಿ ಮಾಡಬೇಕಾಗಿದೆ. ಶಿಕ್ಷಣದ ಜೊತೆಗೆ ಸಂಸ್ಕಾರ ಸಂಸ್ಕೃತಿ ಕಲಿಸುವ ಜ್ಞಾನ ದೇಗುಲಗಳು ಎಲ್ಲೆಡೆಗೆ ಬೆಳೆದು ಬರಲೆಂದು ಆಶಿಸಿದ ಜಗದ್ಗುರುಗಳು ಸಂಸ್ಥೆಯ ಕಾರ್ಯದರ್ಶಿ ಕೆ.ಎಂ.ಸುರೇಶ ಅವರು ಗ್ರಾಮೀಣ ಮಕ್ಕಳ ಬಾಳಿಗೆ ಉತ್ತಮ ಶಿಕ್ಷಣ ಕೊಡುವ ಸಂಕಲ್ಪ ತೊಟ್ಟು ಕಾರ್ಯ ಮಾಡುತ್ತಿದ್ದಾರೆ. ಕೇವಲ ಒಂದು ವರ್ಷದಲ್ಲಿ 5 ಅಂತಸ್ತಿನ ಭವ್ಯ ಕಟ್ಟಡ ನಿರ್ಮಾಣಗೊಂಡು ಇಂದು ಉದ್ಘಾಟನೆಯಾಗುತ್ತಿರುವುದು ತಮಗೆ ಸಂತೋಷ ತಂದಿದೆ ಎಂದರು.

ನೇತೃತ್ವ ವಹಿಸಿದ ಕಣ್ವಕುಪ್ಪಿ ಗವಿಮಠದ ಡಾ॥ ನಾಲ್ವಡಿ ಶಾಂತಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಚಿಕ್ಕ ವಯಸ್ಸಿನಲ್ಲಿ ಮಕ್ಕಳಿಗೆ ಆದರ್ಶ ಶಿಕ್ಷಣ ಮತ್ತು ಸಂಸ್ಕಾರ ಕೊಡುವ ಅವಶ್ಯಕತೆಯಿದೆ. ಇದನ್ನು ಮನಗಂಡು ಕಾರ್ಯದರ್ಶಿ ಕೆ.ಎಂ. ಸುರೇಶ ಅವರು ಅತ್ಯಾಧುನಿಕ ಶಿಕ್ಷಣಕ್ಕೆ ಒತ್ತು ಕೊಟ್ಟು ಕಾರ್ಯ ಮಾಡುತ್ತಿರುವುದು ಗ್ರಾಮೀಣ ಭಾಗದ ಜನರ ಸೌಭಾಗ್ಯವಾಗಿದೆ ಎಂದರು. ಸಂಸ್ಥೆಯ ಕಾರ್ಯದರ್ಶಿ ಕೆ.ಎಂ.ಸುರೇಶ ಸರ್ವರನ್ನು ಸ್ವಾಗತಿಸಿ ಪ್ರಾಸ್ತಾವಿಕವಾಗಿ ಸಂಸ್ಥೆಯ ಅಭಿವೃದ್ಧಿಯ ಬಗೆಗೆ ಮಾತನಾಡಿದರು. ಮಾಜಿ ಸಚಿವ ಎಸ್.ಎ.ರವೀಂದ್ರನಾಥ ಹಾಗೂ ಮಾಜಿ ವಿಧಾನ ಪರಿಷತ್ ಸಚೇತಕ ಡಾ॥ಎ.ಎಚ್. ಶಿವಯೋಗಿಸ್ವಾಮಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು. ಶಾಲಾ ಕಟ್ಟಡವನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಇಷ್ಟಲಿಂಗ ಮಹಾಪೂಜೆಯೊಂದಿಗೆ ಉದ್ಘಾಟಿಸಿದರು. ಸಮಾರಂಭದ ನಂತರ ಪ್ರಸಾದ ವಿನಿಯೋಗ ಜರುಗಿತು.



# ಯುವಜನ ದುಶ್ಚಟಗಳಿಂದ ದೂರವಿರಿ

## 5ನೇ ಹಣಕಾಸು ಆಯೋಗದ ಅಧ್ಯಕ್ಷ ಸಿ. ನಾರಾಯಣಸ್ವಾಮಿ ಸಲಹೆ

**ಬೆಂಗಳೂರು ಗ್ರಾಮಾಂತರ :** ಇಂದಿನ ಯುವ ಸಮೂಹ ವ್ಯಸನಗಳಿಗೆ ದಾಸರಾಗಿ ತಮ್ಮ ಜೀವನವನ್ನು ತಾವೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ಪ್ರತಿಯೊಬ್ಬ ಯುವಕರು ದುಷ್ಚಟಗಳಿಂದ ದೂರವಿದ್ದು, ಸಮಾಜದಲ್ಲಿ ಒಳ್ಳೆಯ ಶಿಕ್ಷಣಾಭ್ಯಾಸ ಪಡೆದು ಜೀವನ ರೂಢಿಸಿಕೊಳ್ಳಿ ಎಂದು ರಾಜ್ಯ 5 ನೇ ಹಣಕಾಸು ಆಯೋಗದ ಅಧ್ಯಕ್ಷ ಸಿ. ನಾರಾಯಣಸ್ವಾಮಿ ಅಭಿಪ್ರಾಯ ಪಟ್ಟರು.

ದೇವನಹಳ್ಳಿ ತಾಲೂಕಿನ ವಿಶ್ವನಾಥಪುರ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಡಾ. ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಜೋಳಿಗೆ ಹರಿಕಾರ ಡಾ. ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸಿ ಅವರು ಮಾತನಾಡಿದರು.

ದೇಶಾದ್ಯಂತ 'ಮಹಾಂತ ಜೋಳಿಗೆ ಅಭಿಯಾನ'ದ ಮೂಲಕ ಸಂಚರಿಸಿ, ಜನರಲ್ಲಿನ ವ್ಯಸನ ವಸ್ತುಗಳನ್ನು ತಮ್ಮ ಜೋಳಿಗೆಯಲ್ಲಿ ಭಿಕ್ಷೆ ರೂಪದಲ್ಲಿ ತೆಗೆದುಕೊಂಡು ಜಾಗೃತಿ ಮೂಡಿಸಿ, ವ್ಯಸನ ನಿರ್ಮೂಲನೆಗೆ ಶ್ರಮಿಸಿದ ಡಾ. ಮಹಾಂತ ಸ್ವಾಮಿಜೀಗಳು. ವಿದ್ಯಾರ್ಥಿಗಳು ಜೀವನದಲ್ಲಿ ವ್ಯಸನವನ್ನು ಮೈಗೂಡಿಸಿಕೊಳ್ಳದೆ ಎಚ್ಚರಿಕೆ ವಹಿಸಬೇಕು. ಪ್ರತಿಯೊಬ್ಬರೂ ಪುಸ್ತಕ ಓದು-ಬರಹದ ಹವ್ಯಾಸ, ಒಳ್ಳೆಯ ವ್ಯಕ್ತಿಯ ಗೆಳತನ, ಉನ್ನತ ಗುರಿ ಸಾಧಿಸುವ, ಒಳ್ಳೆಯ ಪ್ರಜ್ಞೆಯನ್ನಾಗುವ ರೂಡಿಯನ್ನು ಬೆಳೆಸಿಕೊಳ್ಳಬೇಕು. ಅಂದಾಗ ವ್ಯಸನ ಮುಕ್ತ ಸಶಕ್ತ ಸಮಾಜವಾಗಿ ನಿರ್ಮಾಣವಾಗಲು ಸಾಧ್ಯವಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.



ವ್ಯಸನ ವೆಂದರೆ ಆರೋಗ್ಯಕ್ಕೆ ಹಾನಿಯುಂಟು ಮಾಡುವ ಮದ್ಯಪಾನ, ಧೂಮಪಾನ, ತಂಬಾಕು ಸೇವನೆ, ಡ್ರಗ್ಸ್ ಸೇವನೆ ಮುಂತಾದ ದುಶ್ಚಟಗಳ ಸೇವನೆ ಮಾಡುವುದು. ಇಂತಹ ದುಶ್ಚಟಗಳನ್ನು ಸಮಾಜದಿಂದ ಮುಕ್ತ ಮಾಡಬೇಕು ಎನ್ನುವ ಉದ್ದೇಶದಿಂದ ಡಾ. ಮಹಾಂತ ಶಿವಯೋಗಿಗಳು ರಾಷ್ಟ್ರಾದ್ಯಂತ 'ಮಹಾಂತ ಜೋಳಿಗೆ ಅಭಿಯಾನ' ನಡೆಸಿ ಸಾಕಷ್ಟು ವ್ಯಸನ ವ್ಯಕ್ತಿಗಳ ಮನ ಪರಿವರ್ತಿಸಿ ವ್ಯಸನ ವಸ್ತುಗಳನ್ನು ಜೋಳಿಗೆಯಲ್ಲಿ ಸಂಗ್ರಹಿಸುತ್ತಿದ್ದರು. ಈ ಸಾಮಾಜಿಕ ಕಳಕಳಿಯನ್ನು ಮನಗಂಡು ಸರ್ಕಾರದ ವತಿಯಿಂದ ಡಾ. ಮಹಾಂತ ಶಿವಯೋಗಿಗಳ ಜನ್ಮದಿನ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆ ಮಾಡಲಾಗುತ್ತಿದೆ. ವಿದ್ಯಾರ್ಥಿಗಳು, ಸಾರ್ವಜನಿಕರು ನಿಮ್ಮ ನೆರೆಹೊರೆಯವರಿಗೆ ದುಶ್ಚಟಗಳಿಂದ ದೂರವಿರುವಂತೆ ಜಾಗೃತಿ ಮೂಡಿಸಬೇಕು ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

### ಕಡಿತದಿಂದ ಜಾಗೃತರಾಗಿರಿ

**ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಕೆ.ಎನ್ ಅನುರಾಧ ಅವರು ಮಾತನಾಡಿ ದೇಹದ ಮೇಲೆ ಕೆಟ್ಟ ಪರಿಣಾಮ ಬೀರುವಂತಹ ಚಟಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರಿಂದ ಸಾರ್ವಜನಿಕರು ದುಶ್ಚಟಗಳಿಗೆ ಬಲಿಯಾಗುತ್ತಿದ್ದಾರೆ. ಪ್ರಸ್ತುತ ಗ್ರಾಮೀಣ, ನಗರ ಪ್ರದೇಶಗಳಲ್ಲಿ ವ್ಯಸನ ಎಂಬುದು ದೊಡ್ಡವರಿಗೆ ಅಲ್ಲದೆ ಶಾಲಾ-ಕಾಲೇಜು ವಿದ್ಯಾರ್ಥಿಗಳು, ಯುವ ಸಮೂಹಕ್ಕೆ ಕೂಡ ಅಂಟಿಕೊಳ್ಳುತ್ತಿದೆ. ಇತ್ತೀಚಿನ ದಿನಗಳಲ್ಲಿ ಚಿಕ್ಕ ಮಕ್ಕಳು ಮೊಬೈಲ್ ನೋಡುವುದು ಹೆಚ್ಚಾಗುತ್ತಿದ್ದು, ಇದು ಕೂಡ ಒಂದು ಚಟ, ಇದರಿಂದ ಮಕ್ಕಳ ಮೆದುಳಿನ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಇದರ ಬಗ್ಗೆ ಪೋಷಕರು ಜಾಗೃತಿ ವಹಿಸಬೇಕು. ವಿದ್ಯಾರ್ಥಿಗಳು, ಯುವಕರು ಆಪ್ತ ವಲಯದಲ್ಲಿನ ಸಹವಾಸಗಳಿಂದ ಮುಂದಿನ ಭವಿಷ್ಯ ರೂಪಿಸಿಕೊಳ್ಳಬಹುದು. ದುಶ್ಚಟಗಳಿಂದ ದೂರ ಇರಲು ಒಳ್ಳೆಯವರ ಸಹವಾಸ ಮಾಡುವ ಜತೆಗೆ ವ್ಯಾಯಾಮ ಹಾಗೂ ಕ್ರೀಡೆಗಳಲ್ಲಿ ಭಾಗವಹಿಸುವದನ್ನು ಮೈಗೂಡಿಸಿಕೊಳ್ಳಿ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕರಾದ ಶಫಿ ಸಾದುದ್ದೀನ್ ಸೇರಿದಂತೆ ಜಿಲ್ಲಾಮಟ್ಟದ ಅಧಿಕಾರಿಗಳು, ಶಾಲಾ ಕಾಲೇಜು ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.**

# ಬ್ಲಾಕ್ ಕೋ ಆರ್ಡಿನೇಟರ್ ಹುದ್ದೆಗೆ ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಗುಡಿಬಂಡೆ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಪೋಷಣ್ ಅಭಿಯಾನ್ ಯೋಜನೆಯಡಿ ಬ್ಲಾಕ್ ಕೋ ಆರ್ಡಿನೇಟರ್ ಹುದ್ದೆ ಖಾಲಿ ಇದ್ದು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹತೆಗಳು: ಪದವಿ, ತಂತ್ರಜ್ಞಾನ ಮತ್ತು ಸಾಫ್ಟ್‌ವೇರ್ ಅಪ್ಲಿಕೇಶನ್ ನಲ್ಲಿ ಎರಡು ವರ್ಷ ಕೆಲಸ ಮಾಡಿರುವ ಅನುಭವ ಪ್ರಮಾಣ ಪತ್ರ. ಸ್ಥಳೀಯ ಭಾಷೆಯಲ್ಲಿ ಮಾತನಾಡುವ ಮತ್ತು ಬರವಣಿಗೆ ಕೌಶಲ್ಯ ಹೊಂದಿರಬೇಕು. ಸ್ಥಳೀಯ ಅಭ್ಯರ್ಥಿಗೆ ಮೊದಲ ಆದ್ಯತೆ ನೀಡಲಾಗುವುದು.

ಅರ್ಜಿಗಳನ್ನು ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಠಡಿ ಸಂ:ಎಫ್.ಬಿ-05, ಮೊದಲನೆ ಮಹಡಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಇಲ್ಲಿ ಪಡೆದು ಆಗಸ್ಟ್ 30 ರೊಳಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಚಿಕ್ಕಬಳ್ಳಾಪುರ ದೂ.ಸಂ:08156-277111 ಮತ್ತು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಗುಡಿಬಂಡೆ ದೂ. ಸಂ: 08156-261116 ಗೆ ಸಂಪರ್ಕಿಸಬಹುದೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕ ವೆಂಕಟೇಶರೆಡ್ಡಿ ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮದಿಂದ ಅರ್ಜಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಡಿ.ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ವತಿಯಿಂದ ವಿವಿಧ ಯೋಜನೆಗಳಲ್ಲಿ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿಗೆ ಸೇರಿದ ನಿರುದ್ಯೋಗಿ ಫಲಾನುಭವಿಗಳು ಕೃಷಿ ಅವಲಂಬಿತ ಚಟುವಟಿಕೆ, ವ್ಯಾಪಾರ, ಕೈಗಾರಿಕೆ, ಸಾರಿಗೆ, ಮತ್ತು ಸೇವಾವಲಯದಲ್ಲಿ ಆರ್ಥಿಕ ಚಟುವಟಿಕೆ ಕೈಗೊಳ್ಳಲು ನಿಗಮದಿಂದ ನೇರವಾಗಿ ಸಾಲ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಗಳ ವಿವರ: ಡಿ.ದೇವರಾಜ ಅರಸು ಸ್ವಯಂ ಉದ್ಯೋಗ ವೈಯಕ್ತಿಕ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು-ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆ, ಹೊಲಿಗೆ ಯಂತ್ರ ವಿತರಣೆಯೋಜನೆ: ಅರ್ಜಿದಾರರು https://www.kaushalkar.com ಜಾಲತಾಣದೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು ಈ ಮೇಲ್ಕಂಡ ಎಲ್ಲಾ ಯೋಜನೆಗಳು ವಿಶ್ವಕರ್ಮ, ಉಪ್ಪಾರ, ಅಂಬಿಗ, ಸವಿತಾ, ಮಡಿವಾಳ, ಅಲೆಮಾರಿ ಮತ್ತು ಅರೆಅಲೆಮಾರಿ ಸಮುದಾಯ, ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಮರಾಠ, ಮತ್ತು ಇದರ ಉಪ ಸಮುದಾಯಗಳು ಹೊರತು ಪಡಿಸಿ ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 3ಎ ಮತ್ತು 3ಬಿ ನಲ್ಲಿ ಉಳಿದ ಸಮುದಾಯಗಳಿಗೆ ಅನ್ವಯವಾಗುತ್ತದೆ. ಮೇಲ್ಕಂಡ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಹಿಂದುಳಿದ ವರ್ಗಗಳ ಅರ್ಜಿದಾರರು ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಲು ಆಗಸ್ಟ್ 31 ಕೊನೆ ದಿನ. ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್ www.dbcdc.karnataka.gov.in ಅಥವಾ ನಿಗಮದ ಸಹಾಯವಾಣಿ ಸಂಖ್ಯೆ:080-22374832 ಮತ್ತು 8050770004 ಅಥವಾ 8050770005 ಹಾಗೂ ಚಿಕ್ಕಬಳ್ಳಾಪುರ ಜಿಲ್ಲಾ ಕಚೇರಿ ದೂ.ಸಂ: 08156-277039 ಗೆ ಸಂಪರ್ಕಿಸಬಹುದೆಂದು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಲ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** ಹಿಂದುಳಿದ ವರ್ಗಗಳ ಪ್ರವರ್ಗ-3ಎ ನಲ್ಲಿ ಬರುವ ಒಕ್ಕಲಿಗ ಸಮುದಾಯಗಳಿಗೆ ಸೇರಿದ ಕ್ರಮ ಸಂಖ್ಯೆ 1 ರ (ಎ) ಯಿಂದ (ಟಿ) ವರೆಗೆ ನಮೂದಾಗಿರುವ ಒಕ್ಕಲಿಗ, ವಕ್ಕಲಿಗ, ಸರ್ಪಒಕ್ಕಲಿಗ, ಹಳ್ಳಿಕಾರ್ ಒಕ್ಕಲಿಗ, ನಾಮಧಾರಿ ಒಕ್ಕಲಿಗ, ಗಂಗಡ್ಕಾರ್ ಒಕ್ಕಲಿಗ, ದಾಸ್ ಒಕ್ಕಲಿಗ, ರೆಡ್ಡಿ ಒಕ್ಕಲಿಗ, ಮರಸು ಒಕ್ಕಲಿಗ, ಗೌಡ (ಉಠತಿಜಚಿ) / ಗೌಡ (ಉಠಣಜಚಿ),ಹಳ್ಳಿಕಾರ್, ಕುಂಚಿಟಿಗ, ಗೌಡ, ಕಾಪು, ಹೆಗ್ಗಡೆ, ಕಮ್ಮ, ರಡ್ಡಿ, ಗೌಂಡರ್, ನಾಮಧಾರಿಗೌಡ, ಉಪ್ಪಿನಕೊಳಗ / ಉತ್ತಮ ಕೊಳಗ ಸಮುದಾಯಕ್ಕೆ ಸೇರಿದ ಜನರ ಅಭಿವೃದ್ಧಿಗಾಗಿ 2023-24ನೇ ಸಾಲಿನಲ್ಲಿ ಅನುಷ್ಠಾನಗೊಳಿಸುತ್ತಿರುವ ಕೆಳಕಂಡ ಯೋಜನೆಗಳಲ್ಲಿ ಸೌಲಭ್ಯ ಪಡೆಯಲು ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಗಳ ವಿವರ: 1) ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, 2) ಗಂಗಾ ಕಲ್ಯಾಣ ನೀರಾವರಿ ಯೋಜನೆ, 3) ಸ್ವಾವಲಂಬಿ ಸಾರಥಿ ಯೋಜನೆ, 4) ಸ್ವಯಂ ಉದ್ಯೋಗ ಸಾಲ ಯೋಜನೆ (ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ), 5) ಶೈಕ್ಷಣಿಕ ಸಾಲ ಯೋಜನೆ (ಹೊಸ ಮತ್ತು ನವೀಕರಣ), 6) ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ 7) ವಿದೇಶ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆಗಳ ಸೌಲಭ್ಯ ಪಡೆಯಬಹುದಾಗಿದೆ.

2023-24ನೇ ಸಾಲಿನಲ್ಲಿ ಆನ್ಲೈನ್ನಲ್ಲಿ ಅರ್ಜಿ ಸಲ್ಲಿಸಿದ್ದು,ಆಯ್ಕೆ ಸಮಿತಿಗಳಲ್ಲಿ ಕಾರಣಾಂತರಗಳಿಂದ ಆಯ್ಕೆಯಾಗದೇ ಇರುವ ಅರ್ಹ ಅರ್ಜಿದಾರರು 2024-25ನೇ ಸಾಲಿನ ಪ್ರಕಟಣೆಗೆ ಅರ್ಜಿಯನ್ನು ಸಲ್ಲಿಸುವ ಅವಶ್ಯಕವಿರುವುದಿಲ್ಲ. ಕಳೆದ ಸಾಲಿನ ಅರ್ಜಿಯನ್ನೆ ಆಯ್ಕೆಸಮಿತಿಗಳ ಮುಂದೆ ಆಯ್ಕೆಗೆ ಮತ್ತೊಮ್ಮೆ ಮಂಡಿಸಲಾಗುವುದು.

ಅರ್ಜಿದಾರರು ಸೇವಾ ಸಿಂಧು ಪೋರ್ಟಲ್ನ ಗ್ರಾಮ ಒನ್ / ಬೆಂಗಳೂರು ಒನ್ / ಕರ್ನಾಟಕ ಒನ್ ಗಳ ಮೂಲಕ ಆನ್ಲೈನಲ್ಲಿ ಮತ್ತು ಕ್ರಮ ಸಂಖ್ಯೆ 06 ರಲ್ಲಿನ ಸ್ವಾತಂತ್ರ ಅಮೃತ ಮುನ್ನಡೆ ಯೋಜನೆಗೆ ಅರ್ಜಿಯನ್ನು ಕೌಶಲ್ಯ ಕರ್ನಾಟಕ ತಂತ್ರಾಶದ https://www.kaushalkar.comನಲ್ಲಿ ಅರ್ಜಿಯನ್ನು ಆಗಸ್ಟ್ 30 ರೊಳಗೆ ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಜಾಲತಾಣ https://kvcdc.karnataka.gov.in ಅಥವಾ ನಿಗಮದ ದೂರವಾಣಿ ಸಂಖ್ಯೆ 080-29904350, 29904268 08156-277039 ಗೆ ಅಥವಾ ಜಿಲ್ಲಾ ಕಚೇರಿಯ ದೂ.ಸಂ: 08156-277039 ಗೆ ಸಂಪರ್ಕಿಸಬಹುದೆಂದು ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಗವಿಕಲರ ಆರೈಕೆಗಾಗಿ 1000 ರೂಪಾಯಿ ಪ್ರೋತ್ಸಾಹ ಧನ

**ಬೆಂಗಳೂರು ಗ್ರಾಮಾಂತರ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ 2024-25ನೇ ಸಾಲಿನಲ್ಲಿ ಸೆರೆಬ್ರಲ್ ಪಾಲ್ಸಿ, ಮಸ್ಕುಲರ್ ಡಿಸ್ಟ್ರೋಫಿ, ಪಾರ್ಕಿನ್ಸನ್ಸ್ ಮತ್ತು ಮಲ್ಟಿಪಲ್ ಸ್ಕ್ಲೆರೋಸಿಸ್ ವಿಕಲಚೇತನ ವ್ಯಕ್ತಿಗಳ ಆರೈಕೆದಾರರು ಪ್ರತಿ ಮಾಹೆ(ತಿಂಗಳು) 1000 ರೂಪಾಯಿಗಳ ಪ್ರೋತ್ಸಾಹಧನ ಪಡೆಯಲು ಅರ್ಜಿ ಆಹ್ವಾನಿಸಲಾಗಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲಾ ವ್ಯಾಪ್ತಿಯಲ್ಲಿನ ಸೆರೆಬ್ರಲ್ ಪಾಲ್ಸಿ, ಮಸ್ಕುಲರ್ ಡಿಸ್ಟ್ರೋಫಿ, ಪಾರ್ಕಿನ್ಸನ್ಸ್ ಮತ್ತು ಮಲ್ಟಿಪಲ್ ಸ್ಕ್ಲೆರೋಸಿಸ್ ವಿಕಲಚೇತನರು ಅವರ ಆರೈಕೆದಾರರು ಅಗತ್ಯ ದಾಖಲಾತಿಗಳೊಂದಿಗೆ, ವಿಆರ್ಡಬ್ಲ್ಯೂ/ಯುಆರ್ಡಬ್ಲ್ಯೂ/ಎಂಆರ್ಡಬ್ಲ್ಯೂ/ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿಗೆ ಆಗಸ್ಟ್ 31 ರೊಳಗೆ ಅರ್ಜಿ ಸಲ್ಲಿಸಿ ಈ ಸೌಲಭ್ಯವನ್ನು ಪಡೆಯಬಹುದಾಗಿದೆ. ಅರ್ಜಿ ಸಲ್ಲಿಸಲು ಬೇಕಾಗುವ ದಾಖಲೆಗಳು: ವಿಕಲಚೇತನರ ವಿಶಿಷ್ಟ ಗುರುತಿನ (ಯುಡಿಐಡಿ), ವಿಕಲಚೇತನರ ಆಧಾರ್ ಕಾರ್ಡ್, ಭಾವಚಿತ್ರ (ವಿಕಲಚೇತನರ ಮತ್ತು ಆರೈಕೆದಾರರ), ಆರೈಕೆದಾರರ ಬ್ಯಾಂಕ್ ಪಾಸ್ ಬುಕ್ ಪ್ರತಿ, ಆರೈಕೆದಾರರ ಆಧಾರ್ ಕಾರ್ಡ್. ಹೆಚ್ಚಿನ ಮಾಹಿತಿಗಾಗಿ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಯವರ ಕಛೇರಿ. ನಂ.3 ನೆಲಮಹಡಿ, ಜಿಲ್ಲಾಡಳಿತ ಭವನ, ಬೀರಸಂದ್ರ ಗ್ರಾಮ, ಕುಂದಾಣ ಹೋಬಳಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ-562110 ಹಾಗೂ ವಿಕಲಚೇತನರ ಸಹಾಯವಾಣಿ ಸಂಖ್ಯೆ- 080-29787441 ಇವರನ್ನು ಸಂಪರ್ಕಿಸಬಹುದಾಗಿದೆ.

# ಮಾನವ ಹಕ್ಕುಗಳ ಆಯೋಗದ ಸಿಟ್ಟಿಂಗ್

**ಬೆಂಗಳೂರು:** ಮಾನವ ಹಕ್ಕುಗಳ ಸಂರಕ್ಷಣೆ ಹಾಗೂ ಮಾನವ ಹಕ್ಕುಗಳ ಉಲ್ಲಂಘನೆ ಪ್ರಕರಣಗಳಲ್ಲಿ ನೊಂದವರಿಗೆ ಸೂಕ್ತ ನೆರವನ್ನು ಒದಗಿಸುವ ನಿಟ್ಟಿನಲ್ಲಿ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗವು ಇದೇ ಆಗಸ್ಟ್ 08 ರಿಂದ ಆಗಸ್ಟ್ 10ರ ವರೆಗೆ ಹಾವೇರಿ ಮತ್ತು ಧಾರವಾಡ ಜಿಲ್ಲೆಗಳಲ್ಲಿ ಸಿಟ್ಟಿಂಗ್ಸ್ ನಡೆಸಲಿದೆ. ಹಾವೇರಿ ಮತ್ತು ಧಾರವಾಡ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಆಯೋಗದಲ್ಲಿ ನೋಂದಣಿಯಾಗಿರುವ ಪ್ರಕರಣಗಳನ್ನು ಆಯಾಯ ಜಿಲ್ಲೆಗಳಲ್ಲಿ ಇತ್ಯರ್ಥಪಡಿಸಿ, ವಿಲೇ ಮಾಡಲು ಕ್ರಮ ಜರುಗಿಸಲಾಗುವುದು. ದೂರುದಾರರು ಹಾಗೂ ಪ್ರತಿವಾದಿ ಪ್ರಾಧಿಕಾರಗಳು ಈ ಸೌಲಭ್ಯದ ಸದುಪಯೋಗಪಡಿಸಿಕೊಳ್ಳಬಹುದು. ಮಾನವ ಹಕ್ಕು ಉಲ್ಲಂಘನೆ ಪ್ರಕರಣಗಳಿಗೆ ಸಂಬಂಧಿಸಿದಂತೆ, ಹಾವೇರಿ ಮತ್ತು ಧಾರವಾಡ ಜಿಲ್ಲೆಗಳಲ್ಲಿನ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ಆಯಾಯ ಜಿಲ್ಲೆಗಳಲ್ಲಿಯೇ ನಿಗದಿತ ದಿನಾಂಕಗಳಂದು ಸಾರ್ವಜನಿಕರಿಂದ ದೂರುಗಳು ಮತ್ತು ಅಹವಾಲುಗಳನ್ನು ಸಹ ಸ್ವೀಕರಿಸಲಾಗುವುದು. ಹಾವೇರಿ ಮತ್ತು ಧಾರವಾಡ ಜಿಲ್ಲೆಗಳ ಸಾರ್ವಜನಿಕರು ನಿಗದಿತ ದಿನಾಂಕಗಳಂದು ಆಯೋಗದ ಹಂಗಾಮಿ ಅಧ್ಯಕ್ಷರು ಹಾಗೂ ಸದಸ್ಯರನ್ನು ಸಂಪರ್ಕಿಸಿ, ದೂರುಗಳನ್ನು ಸಲ್ಲಿಸಬಹುದು.

# ಕೋರ್ಸ್‌ಗೆ ಪ್ರವೇಶಾವಧಿ ವಿಸ್ತರಣೆ

**ಬೆಂಗಳೂರು:** 2024-25ನೇ ಸಾಲಿನ ಪ್ರಥಮ ಸೆಮಿಸ್ಟರ್ ಡಿಪ್ಲೋಮಾ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ ಆಗಸ್ಟ್ 06, 2024 ರ ವರೆಗೆ ಪ್ರವೇಶ ಪಡೆಯಲು ಪ್ರವೇಶಾವಧಿಯನ್ನು ವಿಸ್ತರಿಸಲಾಗಿದೆ. ಎಸ್.ಎಸ್.ಎಲ್.ಸಿ ಪೂರಕ ಪರೀಕ್ಷೆಯಲ್ಲಿ ಪಾಸಾದ ಹಾಗೂ ಪಿ.ಯು.ಸಿ ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣ/ ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳಿಗೆ ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆ, ಬೆಂಗಳೂರು ಇಲ್ಲಿ ಟೆಕ್ಸ್‌ಟೈಲ್ ಟೆಕ್ನಾಲಜಿ ಕೋರ್ಸಿಗೆ ಪ್ರವೇಶ ಲಭ್ಯವಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಶ್ರೀಮತಿ ಉಷಾ ಎಸ್. ಪ್ರಾಂಶುಪಾಲರು ಮೊ. 9481101049 ಹಾಗೂ ಶ್ರೀನಿವಾಸಯ್ಯ ವಿ, ವಿಭಾಗದ ಮುಖ್ಯಸ್ಥರು ಮೊ:9448705205 ಇವರನ್ನು ಸಂಪರ್ಕಿಸಬಹುದು ಅಥವಾ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆ, ಕೆ.ಆರ್.ಸರ್ಕಲ್. ಬೆಂಗಳೂರು ಕಾರ್ಯಾಲಯದಿಂದ ಮಾಹಿತಿ ಪಡೆಯಬಹುದಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಭಾರತೀಯ ಅಂಗಾಂಗ ದಾನ ದಿನ

**ಬೆಂಗಳೂರು:** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯವು ಆಗಸ್ಟ್ 03 ರಂದು ಬೆಳಿಗ್ಗೆ 10 ಗಂಟೆಗೆ ಬೆಳಗಾವಿಯ ಜವಹರಲಾಲ್ ನೆಹರು ಮೆಡಿಕಲ್ ಕಾಲೇಜಿನ ಡಾ. ಬಿ.ಎಸ್. ಜಿರ್ಗೆ ಸಭಾಂಗಣದಲ್ಲಿ ''ಭಾರತೀಯ ಅಂಗಾಂಗ ದಾನ ದಿನ'' ಕಾರ್ಯಕ್ರಮವನ್ನು ಹಮ್ಮಿಕೊಂಡಿದೆ. ಈ ಕಾರ್ಯಕ್ರಮವು ರಾಜ್ಯಮಟ್ಟದ ಕಾರ್ಯಕ್ರಮವಾಗಿದ್ದು, ಕಾರ್ಯಕ್ರವನ್ನು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು / ಶಾಸಕರು ಇತರೆ ಸಚಿವರುಗಳು / ಗಣ್ಯ ವ್ಯಕ್ತಿಗಳು, ಇಲಾಖೆಯ ಮೇಲಾಧಿಕಾರಿಗಳು / ಧರ್ಮ ಗುರುಗಳು / ಅಧಿಕಾರಿಗಳು ಪಾಲ್ಗೊಂಡು ಉದ್ಘಾಟಿಸಲಿದ್ದಾರೆ. ಅಂಗಾಂಗ ದಾನ ಮಾಡಿದ ಕುಟುಂಬದ ಸದಸ್ಯರಿಗೆ ಗೌರವಾರ್ಪಣೆ ಸಹ ಏರ್ಪಡಿಸಲಾಗಿದೆ.

# ಸಂಗಮ, ಮೇಕೆದಾಟು ಪ್ರವೇಶ ನಿಷೇಧ

**ರಾಮನಗರ:** ಕನಕಪುರ ತಾಲ್ಲೂಕಿನಲ್ಲಿರುವ ಸಂಗಮ ಮತ್ತು ಮೇಕೆದಾಟು ಪ್ರದೇಶಗಳು ಪ್ರವಾಸಿ ತಾಣಗಳಾಗಿವೆ. ಪ್ರತಿನಿತ್ಯ ಈ ಪ್ರವಾಸಿ ತಾಣಕ್ಕೆ ಪ್ರವಾಸಿಗಳು ಮತ್ತು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭೇಟಿ ನೀಡುತ್ತಿರುತ್ತಾರೆ. ಪ್ರಸ್ತುತ ರಾಜ್ಯದಲ್ಲಿ ಮಳೆ ಹೆಚ್ಚಾಗಿದ್ದು ಕೆ.ಆರ್.ಎಸ್ ಮತ್ತು ಕಬಿನಿ ಜಲಾಶಯಗಳು ಭರ್ತಿಯಾಗಿದ್ದು ಈ ಜಲಾಶಯಗಳಿಂದ ಹೆಚ್ಚಿನ ಪ್ರಮಾಣದ ನೀರನ್ನು ಹೊರಬಿಟ್ಟಿರುವುದರಿಂದ ಕಾವೇರಿ ನದಿಯು ಅಪಾಯದ ಮಟ್ಟವನ್ನು ಮೀರಿ ಹರಿಯುತ್ತಿರುತ್ತದೆ. ಈ ಸಂದರ್ಭದಲ್ಲಿ ಪ್ರವಾಸಿಗರನ್ನು ಮತ್ತು ಸಾರ್ವಜನಿಕರನ್ನು ಸಂಗಮ ಮತ್ತು ಮೇಕೆದಾಟು ಪ್ರವಾಸಿ ತಾಣಗಳಿಗೆ ಬಿಟ್ಟರೆ ಅನಾಹುತಗಳು ಸಂಭವಿಸುವ ಸಾಧ್ಯತೆಗಳು ಇರುವುದರಿಂದ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ಕಾನೂನು ಸುವ್ಯವಸ್ಥೆ ಕಾಪಾಡುವ ಸಲುವಾಗಿ ಸಂಗಮ, ಬೋರೆಗಾಳಿ ಮತ್ತು ಮೇಕೆದಾಟು ಪ್ರವಾಸಿ ತಾಣಗಳಿಗೆ ಹಾಗೂ ಸುತ್ತಮುತ್ತಲಿನ ಅರಣ್ಯ ಪ್ರದೇಶದ ವ್ಯಾಪ್ತಿಯಲ್ಲಿ ಪ್ರವಾಹ ಕಡಿಮೆಯಾಗುವವರೆಗೆ ಆ. 5ರ ಸಂಜೆ 6 ಗಂಟೆವರೆಗೆ ಪ್ರವೇಶ ನಿಷೇಧಿಸಿ ಕನಕಪುರ ತಹಶೀಲ್ದಾರ್ ಡಾ. ಸ್ಮಿತಾ ರಾಮು ಅವರು ಆದೇಶ ಹೊರಡಿಸಿದ್ದಾರೆ.

# ರೋಟರಿ ಸಕ್ಕರೆ ನಾಡು ಅಧ್ಯಕ್ಷರಾಗಿ ಎ.ಪಿ.ಸತೀಶ್ ಪದವಿ ಸ್ವೀಕಾರ

**ಮಂಡ್ಯ:** ಪ್ರತಿಯೊಂದು ರೋಟರಿ ಕ್ಲಬ್ಗಳು ಸಮಾಜಕ್ಕೆ ಒಂದಲ್ಲ ಒಂದು ರೀತಿ ಕೊಡುಗೆ ನೀಡುತ್ತಾ ಬಂದಿದ್ದು, ಈ ಸೇವಾ ಮನೋಭಾವನೆಯನ್ನು ನೋಡಿ ಹೊಸ ಸದಸ್ಯರುಗಳು ಸೇರ್ಪಡೆಗೊಳ್ಳುತ್ತಿರುವುದು ರೋಟರಿ ಸಂಸ್ಥೆಯ ಗೌರವ ಹೆಚ್ಚಿದೆ ಎಂದು ರೋಟರಿ ಪ್ರಥಮ ಜಿಲ್ಲಾ ಪಾಲಕ ಶ್ರೀನಿವಾಸ್ ಮೂರ್ತಿ ಶ್ಲಾಘಿಸಿದರು.

ನಗರದ ಖಾಸಗಿ ಹೋಟೆಲ್ನಲ್ಲಿ ರೋಟರಿ ಸಕ್ಕರೆ ನಾಡು ಮಂಡ್ಯ 3192 ವತಿಯಿಂದ ಆಯೋಜಿಸಿದ್ದ 2024?25ನೇ ಸಾಲಿನ ಪದವಿ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಮಾಜದಲ್ಲಿ ಸೇವಾ ಮನೋಭಾವ ಎಂಬುದು ಹೆಚ್ಚಬೇಕಿದೆ, ಅದೇರೀತಿ ರೋಟರಿ ಕ್ಲಬ್ಗಳಲ್ಲಿ ಸದಸ್ಯ ಹೊಂದುವ ಮೂಲಕ ಜನರ ಸಮಸ್ಯೆಗಳಿಗೆ ದನಿಯಾಗಿ ಕೆಲಸ ಮಾಡಬೇಕು. ಆ ನಿಟ್ಟಿನಲ್ಲಿ ಎಲ್ಲರೂ ಸಾಗೋಣ ಎಂದು ಮನವಿ ಮಾಡಿದರು.

ರೋಟರಿ ಸಕ್ಕರೆ ನಾಡು 2024-25ನೇ ಸಾಲಿನ ಅಧ್ಯಕ್ಷರಾಗಿ ಎ.ಪಿ.ಸತೀಶ್ ಪದವಿ ಸ್ವೀಕರಿಸಿದರು. ಇದೇ ಸಂದರ್ಭದಲ್ಲಿ ಸರ್ಕಾರಿ ಪ್ರೌಢ ಶಾಲೆ ವಿದ್ಯಾರ್ಥಿಗಳಿಗೆ ಶಬ್ಧಕೋಶ ಪುಸ್ತಕಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ರೋಟರಿ ಜಿಲ್ಲಾ ಕಾರ್ಯದರ್ಶಿಗಳಾದ ಕುಮಾರಸ್ವಾಮಿ, ಬಿಳಿಗೆರೆ ಶಿವಕುಮಾರ್, ವಲಯ ಪಾಲಕ ಪ್ರಶಾಂತ್, ಸಹ ಪಾಲಕ ಬರ್ನಾಡಪ್ಪ, ಯೂತ್ ಸರ್ವಿಸ್ ಕೆ.ಎಸ್.ಶ್ರೀಧರ್ ಭಾಗವಹಿಸಿದ್ದರು.

# ವ್ಯಸನ ಮುಕ್ತ ದಿನಾರಣೆಯ ಅಂಗವಾಗಿ ಜಾಗೃತಿ ಜಾಥಾಕ್ಕೆ ಜಾಲನೆ

**ಮಂಡ್ಯ:** ಡಾ ಮಹಾಂತ ಶಿವಯೋಗಿ ಸ್ವಾಮೀಜಿಯವರ ಜನ್ಮದಿನದ ಪ್ರಯುಕ್ತ ವ್ಯಸನ ಮುಕ್ತ ದಿನಾಚರಣೆಯ ಬಗ್ಗೆ ಜನಜಾಗೃತಿ ಮೂಡಿಸುವ ಜಾಥಕ್ಕೆ ಜಿಲ್ಲಾಧಿಕಾರಿ ಡಾ ಕುಮಾರ ಅವರು ಚಾಲನೆ ನೀಡಿ ಮಾತನಾಡಿದರು.

ಪ್ರತಿಯೊಬ್ಬರೂ ಕೂಡ ನೈತಿಕ ಮೌಲ್ಯವನ್ನು ಅಳವಡಿಸಿಕೊಂಡು ಆದರ್ಶ ಪ್ರಜ್ಞಾವಂತ ಪ್ರಜೆಗಳಾಗಬೇಕು ಎಂಬ ಉದ್ದೇಶವನ್ನು ಇಟ್ಟುಕೊಂಡರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯ ಎಂದರು.

ವ್ಯಕ್ತಿಯ ಹವ್ಯಾಸ ಹಾಗೂ ಅಭಿರುಚಿಗಳು ಸರಿಯಿದ್ದರೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬಹುದು. ಅನಗತ್ಯವಾಗಿ ವ್ಯಸನಗಳಿಗೆ ದಾಸರಾಗಿ ತಮ್ಮ ಬದುಕನ್ನು ಕಳೆದುಕೊಳ್ಳಬಾರದು. ದುಶ್ಚಟಗಳಿಗೆ ಒಳಗಾಗುವುದರಿಂದ ತಮ್ಮ ಕುಟುಂಬಕ್ಕೆ ಹೊರೆಯಾಗುವುದರ ಜೊತೆಗೆ ಆ ಕುಟುಂಬವು ನೋವಿನಲ್ಲಿ ಮುಳುಗುತ್ತದೆ. ಮಧ್ಯಪಾನ, ಬೀಡಿ, ಸಿಗರೇಟ್ ಇನ್ನಿತರ ಚಟಕ್ಕೆ ದಾಸರಾಗಿರುವವರು ವ್ಯಸನಗಳಿಂದ ಮುಕ್ತರಾಗಿ ಸಮಾಜಕ್ಕೆ ಹಾಗೂ ಕುಟುಂಬಕ್ಕೆ ಒಳ್ಳೆಯ ವ್ಯಕ್ತಿಗಳಾಗಬೇಕು. ಈ ಜಾಗೃತಿ ಕಾರ್ಯಕ್ರಮಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದರು.

ತದನಂತರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿಯವರು ಮಾತನಾಡಿ ಇಂದು ಮಂಡ್ಯ ಜಿಲ್ಲಾಡಳಿತದ ವತಿಯಿಂದ ಡಾ ಮಹಾಂತ ಶಿವಯೋಗಿಯವರ ಜನ್ಮ ದಿನದ ಪ್ರಯುಕ್ತ ವ್ಯಸನ ಮುಕ್ತ ದಿನವನ್ನು ಆಚರಿಸಲಾಗುತ್ತಿದೆ. ಇದೊಂದು ಬಹಳ ಅರ್ಥಪೂರ್ಣ ಕಾರ್ಯಕ್ರಮವಾಗಿದ್ದು, ಈ ಕಾರ್ಯಕ್ರಮದ ಮೂಲಕ ನಾವೆಲ್ಲರೂ ಸಮಾಜದಲ್ಲಿ ಹೆಚ್ಚು ಜನರಿಗೆ ಮಾದಕ ದ್ರವ್ಯದಿಂದಾಗುವ ದುಷ್ಪರಿಣಾಮಗಳ ಬಗ್ಗೆ ಅರಿವು ಮೂಡಿಸಬೇಕು. ವ್ಯಸನ ಮುಕ್ತ ಸಮಾಜವನ್ನು ನಿರ್ಮಾಣ ಮಾಡಲಿಕ್ಕೆ ಸಾಕಷ್ಟು ಕಾರ್ಯಕ್ರಮವನ್ನು ಇಲಾಖೆಗಳು ಹಮ್ಮಿಕೊಳ್ಳಲಾಗುತ್ತಿದೆ. ಶಾಲಾ - ಕಾಲೇಜುಗಳಿಗೆ ಭೇಟಿ ನೀಡಿ ವ್ಯಸನಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ. ಸಾರ್ವಜನಿಕರು ಮಾದಕ ವಸ್ತುಗಳಿಂದ ದೂರವಿರಬೇಕು ಎಂದರು. ಜಾಥವು ನಗರದ ಸಂಜಯ ಸರ್ಕಲ್ ನಿಂದ ಹೊರಟು ಎಸ್ ಬಿ ಸಮುದಾಯ ಭವನದಲ್ಲಿ ಸಮಾವೇಶಗೊಂಡಿತು.

ಮಾದಕ ವಸ್ತುಗಳ ಸೇವನೆಯಿಂದ ದೂರವಿದ್ದರೆ ಆರೋಗ್ಯಕರ ಹಾಗೂ ಸ್ವಾಸ್ತ್ಯ ಸಮಾಜ ನಿರ್ಮಾಣ ಸಾಧ್ಯ ಎಂದು ಅಪರ ಜಿಲ್ಲಾಧಿಕಾರಿ ಡಾ.ಎಚ್.ಎಲ್.ನಾಗರಾಜ್ ಅವರು ಅಭಿಪ್ರಾಯಪಟ್ಟರು.

ಯುವಕರು ಮಾದಕ ವ್ಯಸನಿಗಳಾದರೆ, ಇಡೀ ಕುಟುಂಬಕ್ಕೆ ಹಾಗೂ ಸಮಾಜಕ್ಕೆ ಅವಮಾನ. ತಂದೆ, ತಾಯಿಗೆ ಅವಮಾನ ಇದರಿಂದ ಕೆಟ್ಟ ಸಂದೇಶ ರವಾನೆಯಾಗುತ್ತದೆ. ಯುವ ಸಮುದಾಯ ವ್ಯಸನಮುಕ್ತರಾಗಬೇಕು, ಉತ್ತಮ ಸಮಾಜ, ದೇಶ ಕಟ್ಟುವ ಸತ್ಪ್ರಜೆಗಳಾಗಬೇಕು ಎಂದು ಕಿವಿಮಾತು ಹೇಳಿದರು.

ಮಾದಕ ವ್ಯಸನಿಗಳ ಕುಟುಂಬದಲ್ಲಿ ನೆಮ್ಮದಿ ಇರುವುದಿಲ್ಲ. ಹೆಂಡತಿ ಮೇಲೆ ಹಲ್ಲೆ ಮಾಡುವುದು, ಕಳ್ಳತನ, ಮೋಸ ಮುಂತಾದ ತಪ್ಪು ದಾರಿಗಳನ್ನು ಆಯ್ಕೆ ಮಾಡಿಕೊಂಡು ಕುಟುಂಬದಲ್ಲಿ ಅಶಾಂತಿಗೆ ನೆಲೆ ಮಾಡಿ ತಮ್ಮ ಜೀವನವನ್ನೇ ಹಾಳು ಮಾಡಿಕೊಳ್ಳುತ್ತಾರೆ ಎಂದರು.

ಹೆಣ್ಣು ಮಕ್ಕಳನ್ನು ಕೀಳಾಗಿ ನೋಡುವ ಸಂಸ್ಕೃತಿ ಬದಲಾಗಬೇಕು. ಹಣ್ಣು ಮಕ್ಕಳನ್ನು ಭ್ರೂಣಹತ್ಯೆ ಮಾಡುತ್ತಾರೆ ಎಂಬ ಕಳಂಕ ಮಂಡ್ಯಕ್ಕೆ ಅಂಟಿದೆ. ಇದನ್ನು ಮುಂದಿನ ದಿನಗಳಲ್ಲಿ ಹೋಗಲಾಡಿಸಬೇಕು. ಹೆಣ್ಣು ಮಕ್ಕಳನ್ನು ಚಿವುಟಿ ಹಾಕಿದರೆ ಸಮಾಜಕ್ಕೆ, ನಾಡಿಗೆ ಶಾಪ ತಟ್ಟುತ್ತದೆ ಎಂದು ಎಚ್ಚರಿಸಿದರು.

ಭಾರತದಲ್ಲಿ ದಿನೇ ದಿನೇ ವ್ಯಸನಿಗಳ ಸಂಖ್ಯೆ ಹೆಚ್ಚಾಗುತಿದೆ. ಇದು ಅಪಾಯಕಾರಿ ಬೆಳವಣಿಗೆ. ಇದರಿಂದ ವ್ಯಕ್ತಿಗತವಾಗಿ ಹಾಗೂ ಸಮಾಜದ ಮೇಲೆ ಸಾಕಷ್ಟು ದುಷ್ಪಾರಿಣಾಮಗಳಾಗುತ್ತಿವೆ. ಮಾದಕ ವಸ್ತುಗಳನ್ನು ನಾವು ಉಪಯೋಗಿಸಿದರೆ ತಾನೆ ಮಾದಕ ವಸ್ತುಗಳ ಉತ್ಪಾದನೆಯಾಗಿ ಮಾರಾಟವಾಗುತ್ತದೆ. ಮಾದಕ ವಸ್ತುಗಳ ಬಳಕೆಯನ್ನು ನಿಷೇಧಿಸುವುದಾಗಿ ಪ್ರತಿಯೊಬ್ಬರು ಪಣ ತೊಡಬೇಕು ಎಂದರು.

ಮಂಡ್ಯದಲ್ಲಿ ಕ್ಯಾನ್ಸರ್ ರೋಗಿಗಳ ಸಂಖ್ಯೆ ದಿನೇ ದಿನೇ ಹೆಚ್ಚಾಗುತ್ತಿದೆ. ಇಲ್ಲಿ ಕ್ಯಾನ್ಸರ್ ಆಸ್ಪತ್ರೆ ಇಲ್ಲದ ಕಾರಣ ಅದು ಗೊತ್ತಾಗುತ್ತಿಲ್ಲ. ಮಂಡ್ಯದಲ್ಲಿ ಕಿದ್ವಾಯಿ ಆಸ್ಪತ್ರೆ ಮಾಡಿದರೆ ಕ್ಯಾನ್ಸರ್ ರೋಗಿಗಳೇ ತುಂಬುತ್ತಾರೆ ಎಂದರು.

ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಬೆಳೆಸಿಕೊಳ್ಳಿ: ಯಾವ ಮನುಷ್ಯ ವಿದ್ಯಾರ್ಥಿ ಜೀವನದಲ್ಲಿ ಶಿಸ್ತು ಬೆಳೆಸಿಕೊಳ್ಳುತ್ತಾನೋ ಅವನು ಮಾತ್ರ ಉತ್ತಮ ಪ್ರಜೆಯಾಗುತ್ತಾನೆ. ಜೀವನದಲ್ಲಿ ಶಿಸ್ತನ್ನು ಅಳವಡಿಸಿಕೊಳ್ಳಬೇಕು. ಅಂತಹವರಿಗೆ ಸಮಾಜದಲ್ಲಿ ಗೌರವ ಹೆಚ್ಚಾಗುತ್ತದೆ ಎಂದರು.

**ಒಳ್ಳೆ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು: ಡಾ.ಶಶಾಂಕ್**

ಜೀವನದಲ್ಲಿ ಪುಸ್ತಕ ಓದುವುದು, ಚಿತ್ರಕಲೆ, ಹಾಡುಗಾರಿಕೆ, ಪ್ರಬಂಧ ಸ್ಪರ್ಧೆಯಲ್ಲಿ ಭಾಗವಹಿಸುವುದು, ಯಾವುದಾದರೂ ಆಟ, ವ್ಯಾಯಮ ಮುಂತಾದ ಒಳ್ಳೆ ಹವ್ಯಾಸಗಳನ್ನು ಬೆಳೆಸಿಕೊಂಡಾಗ ಮನಸ್ಸಿಗೆ ಸಂತೋಷವಸಿಗುತ್ತದೆ. ಮಾದಕ ವಸ್ತುಗಳ ಸೇವನೆಯಂತಹ ದುಶ್ಚಟಗಳಿಂದ ದೂರವಿರಬಹುದು. ಪ್ರತಿಯೊಬ್ಬರು ಒಳ್ಳೆಯ ಹಾವ್ಯಾಸಗಳನ್ನು ಅಳವಡಿಸಿಕೊಳ್ಳಬೇಕು ಎಂದು ಜಿಲ್ಲಾ ಮಾನಸಿಕ ಆರೋಗ್ಯ ಕೇಂದ್ರದ ಮನೋ ವೈದ್ಯ ಡಾ.ಶಶಾಂಕ್ ಕಿವಿಮಾತು ಹೇಳಿದರು.

ವ್ಯಸನ ಅನ್ನುವುದು ಚಟವಾಗಿ ಮುಂದೆ ಅದು ಒಂದು ಕಾಯಿಲೆಯಾಗಿ ಪರಿವರ್ತನೆಯಾಗುತ್ತದೆ. ಇದರಿಂದ ದೈಹಿಕ, ಮಾನಸಿಕ ಆರೋಗ್ಯದ ಮೇಲೆ ಸಾಕಷ್ಟು ದುಷ್ಪಾರಿಣಾಮಗಳು ಬೀರುತ್ತವೆ. 10 ಮಂದಿ ಮಾದಕ ವ್ಯಸನಿಗಳು ಮಾದಕ ವಸ್ತುಗಳನ್ನು ತ್ಯಜಿಸಲು ಚಿಕಿತ್ಸೆ ಪಡೆದರೆ ಒಂದಿಬ್ಬರು ಮಾತ್ರ ಗುಣಮುಖರಾಗಿ ವ್ಯಸನಮುಕ್ತರಾಗುತ್ತಾರೆ ಎಂದರು.

ಇತ್ತೀಚೆಗೆ 18 ರಿಂದ 25 ವಯೋಮಾನದವರೇ ಮಾದಕ ವಸ್ತುಗಳ ದುಶ್ಚಟಗಳಿಗೆ ದಾಸರಾಗುತ್ತಿದ್ದಾರೆ. ಹದಿಯರೆಯದ ವಯಸ್ಸಿನಲ್ಲಿ ಕ್ಷಣಿಕ ಸುಖಕ್ಕಾಗಿ ಬಲಿಯಾಗುತ್ತಿದ್ದಾರೆ. ಮಾದಕ ವ್ಯಸನದಿಂದ ಮುಕ್ತರಾಗಬೇಕು ಎಂದು ಕಿವಿಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಮಂಡ್ಯ ಮಿಮ್ಸ್ ನ ಸಮುದಾಯ ಆರೋಗ್ಯ ಶಾಸ್ತ್ರ ವಿಭಾಗದ ಡಾ ಸಿದ್ದಲಿಂಗಪ್ಪ ಎಸ್ ಹುಗಾರ್ ಅವರು ಮಾತನಾಡಿ ವ್ಯಕ್ತಿಗಳು ಮಾದಕ ವಸ್ತುಗಳಿಗೆ ಬಲಿಯಾಗುವುದರಿಂದ ವೈಯಕ್ತಿಕ ಹಾಗೂ ಸಮಾಜದ ಮೇಲೆ ತಕ್ಷಣ ಹಾಗೂ ಧೀರ್ಘಕಾಲಿಕ ಪರಿಣಾಮ ಬೀರುತ್ತದೆ ಎಂದರು.

ಮಾದಕ ವಸ್ತುಗಳನ್ನು ಸೇವಿಸಿದಾಗ ಕ್ಷಣಿಕ ಸುಖ ಸಿಗುತ್ತದೆ. ಆರೋಗ್ಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತದೆ. ಹೆಚ್ಚು ಡೋಸ್ ಮಾದಕ ವಸ್ತು ಸೇವನೆ ಮಾಡಿದಾಗ ಸಾವು ಸಂಭವಿಸುವ ಸಾಧ್ಯತೆ ಇರುತ್ತದೆ. ಆದ್ದರಿಂದ ಡ್ರಗ್ಸ್ ನಂತಹ ಮಾದಕ ವಸ್ತುಗಳಿಗೆ ಬಲಿಯಾಗಬೇಡಿ. ನಿಮ್ಮ ಜೀವನವನ್ನು ಹಾಳು ಮಾಡಿಕೊಳ್ಳದೆ ಒಳ್ಳೆಯ ಜೀವನ ರೂಪಿಸಿಕೊಳ್ಳಿ ಎಂದರು.



**ಸ್ಥಳ ಪರಿಶೀಲನೆ**

**ಮಂಡ್ಯ ಜಿಲ್ಲಾಧಿಕಾರಿ ಡಾ: ಕುಮಾರ ಅವರು ಇಂದು ಪಾಂಡವಪುರ ತಾಲ್ಲೂಕಿನ ಎಣ್ಣೆ ಹೊಳೆ ಗ್ರಾಮಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾರ್ವಜನಿಕರೊಂದಿಗೆ ನೆರೆ ಪರಿಸ್ಥಿತಿಯ ಬಗ್ಗೆ ಚರ್ಚೆ ನಡೆಸಿದರು. ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶೇಖ್ ತನ್ವೀರ್ ಆಸಿಫ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮಲ್ಲಿಕಾರ್ಜುನ ಬಾಲದಂಡಿ ಉಪಸ್ಥಿತರಿದ್ದರು.**

### ವಿದ್ಯಾರ್ಥಿಗಳಿಗೆ ಕೋಲಾರ ಜಿಲ್ಲಾಧಿಕಾರಿ ಅಕ್ರಂ ಪಾಷ ಸಲಹೆ

# ವ್ಯಸನ ಮುಕ್ತ ಸಮಾಜದ ರಾಯಭಾರಿಗಳಾಗಲು ಯತ್ನಿಸಿ

**ಕೋಲಾರ:** ವಿದ್ಯಾರ್ಥಿಗಳು ವ್ಯಸನಮುಕ್ತ ಸಮಾಜದ ರೂವಾರಿಗಳಾಗಬೇಕು. ಸ್ವಸ್ಥ ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಬಹು ಮುಖ್ಯ. ಡಾ. ಮಹಾಂತ ಶಿವಯೋಗಿಯವರು ತೋರಿದ ದಾರಿಯಲ್ಲಿ ಪ್ರತಿಯೊಬ್ಬರೂ ಸಾಗಿದರೆ ಸ್ವಸ್ಥ ಸಮಾಜದ ನಿರ್ಮಾಣ ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅಭಿಪ್ರಾಯಪಟ್ಟರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಮದ್ಯಪಾನ ಸಂಯಮ ಮಂಡಳಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಹಾಗೂ ವಿವಿಧ ಇಲಾಖೆಗಳ ಸಹಯೋಗದೊಂದಿಗೆನಗರದ ಟಿ.ಚನ್ನಯ್ಯ ರಂಗಮಂದಿರದ ಸಭಾಂಗಣದಲ್ಲಿ ನಡೆದ ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆಯನ್ನು ವ್ಯಸನಮುಕ್ತ ದಿನವನ್ನಾಗಿ ಆಚರಿಸುವ ದಿನಾಚರಣೆಗೆ ದೀಪ ಬೆಳಗುವ ಹಾಗೂ ಮಹಾಂತ ಶಿವಯೋಗಿಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆಗೈದು ಅವರು ಮಾತನಾಡಿದರು.

ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೋವೈದ್ಯ ಡಾ. ಎನ್.ಸಿ ನಾರಾಯಣಸ್ವಾಮಿ ಅವರು



ಮಾತನಾಡಿ ಇತ್ತೀಚಿನ ದಿನಗಳಲ್ಲಿ ಯುವ ಜನತೆಯೇ ಮಾದಕ ವಸ್ತುಗಳ ಬಳಕೆ ಹಾಗೂ ದುರ್ಬಳಕೆ ಮಾಡುತ್ತಿರುವುದು ಕಂಡು ಬರುತ್ತಿದೆ. ಮಾದಕ, ಮದ್ಯ ಸೇವನೆಯಿಂದ ದೈಹಿಕವಾಗಿ ಮಾನಸಿಕ ಕಾಯಿಲೆಗಳಿಗೂ ಸಹ ಕೊಂಡೊಯ್ಯುತ್ತದೆ. ಎಲ್ಲಾ ವ್ಯಸನಗಳಿಂದ ಮುಕ್ತರಾಗಲು ಚಿಕಿತ್ಸಾ ಆಪ್ತ ಸಮಾಲೋಚನೆ ಲಭ್ಯವಿದ್ದು, ಸಹಾಯವಾಣಿ 14416 ಸಂಖ್ಯೆಗೆ ಕರೆ ಮಾಡಬಹುದು ಎಂದು ತಿಳಿಸಿದರು. ಜಿಲ್ಲಾ ಮನೋ ವೈದ್ಯರಾದ ಡಾ. ವಿಜೇತಾ ದಾಸ್ ಅವರು ವಿಶೇಷ ಉಪನ್ಯಾಸ ನೀಡಿದರು. ವಾರ್ತಾ ಇಲಾಖೆಯ ಹಿರಿಯ ಸಹಾಯಕ ನಿರ್ದೇಶಕರಾದ ಬಿ.ವಿ.ಚೇತನಕುಮಾರ್ ಅವರು ಕಾರ್ಯಕ್ರಮಕ್ಕೆ ಎಲ್ಲರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಇಳಕಲ್ಲನ ಚಿತ್ರಗಿ ಸಂಸ್ಥಾನ ಮಠದ ಪೂಜ್ಯರಾದ ಶ್ರೀ ಮಹಾಂತ ಶಿವಯೋಗಿಗಳ ಜಯಂತಿಯ ಅಂಗವಾಗಿ ಸರಕಾರವು ವ್ಯಸನಮುಕ್ತ ದಿನಾಚರಣೆ ಆಚರಿಸುತ್ತಿದೆ. ಶಿವಯೋಗಿಯವರು ಸಮಾಜದಲ್ಲಿ ಸಂಚಾರ ಮಾಡಿ ಲೋಕದ ದುಶ್ಚಟಗಳನ್ನು ತಮ್ಮ ಜೋಳಿಗೆಗೆ ಹಾಕಿಕೊಂಡು ಮಾನಸಿಕ ನೆಮ್ಮದಿ ನೀಡುವ ಆರೋಗ್ಯಕರ ಚಿಂತನೆಗಳನ್ನು ಜನರ ಮನಸ್ಸಿನಲ್ಲಿ ಬಿತ್ತುವ ಮೂಲಕ ಉತ್ತಮ ಜೀವನ ನಡೆಸಲು ಅನೇಕರಿಗೆ ಪ್ರೇರಣೆಯಾಗಿದ್ದಾರೆ ಹಾಗಾಗಿ ಇವರ ಜನ್ಮದಿನವನ್ನು ವ್ಯಸನಮುಕ್ತ ದಿನಾಚರಣೆಯಾಗಿ ಆಚರಿಸುತ್ತಿರುವುದು ಶ್ಲಾಘನೀಯ ಎಂದರು. ಯುವ ಪೀಳಿಗೆಯು ತಮ್ಮ ಭವಿಷ್ಯ ಗಮನದಲ್ಲಿಟ್ಟುಕೊಂಡು ಆರೋಗ್ಯಯುತ ಜೀವನಕ್ಕೆ ಒತ್ತು ನೀಡಬೇಕು ಹಾಗೂ ನೆರೆಹೊರೆಯವರಿಗೂ ವ್ಯಸನದಿಂದ ಹೊರಬರಲು ಅರಿವು ಮೂಡಿಸಬೇಕು ಎಂದರು.

ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕರಾದ ಶ್ರೀನಿವಾಸ್, ಸಹಾಯಕ ನಿರ್ದೇಶಕ ಚನ್ನಬಸಪ್ಪ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರು ವಿಜಯಲಕ್ಷ್ಮೀ, ಆರೋಗ್ಯ ಶಿಕ್ಷಣಾಧಿಕಾರಿ ಪ್ರೇಮ, ನಗರದ ಪವನ್, ಚನ್ನೆಗೌಡ, ಇಟ್ಟಿಸಿಎಂ, ವೈದ್ಯಕೀಯ ಮೆಡಿಕಲ್ ಕಾಲೇಜಿನ ವಿದ್ಯಾರ್ಥಿಗಳು, ವಾರ್ತಾ ಇಲಾಖೆ ಸಿಬ್ಬಂದಿ ಸೇರಿದಂತೆ ಪದವಿ ಕಾಲೇಜಿನ ಉಪನ್ಯಾಸಕ ವೃಂದದವರು, ಉಪಸ್ಥಿತರಿದ್ದರು.

## ಕ.ರಾ.ಮು.ವಿ. : ಪರೀಕ್ಷಾ ಶುಲ್ಕ ಪಾವತಿಸಲು ಅರ್ಜಿ ಆಹ್ವಾನ

**ಚಾಮರಾಜನಗರ:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದಲ್ಲಿ 2018-19, ಮತ್ತು 2022-23ನೇ ಶೈಕ್ಷಣಿಕ ಸಾಲಿನಿಂದ 2023-24ನೇ ಶೈಕ್ಷಣಿಕ ಸಾಲಿನವರೆಗೆ ಸ್ನಾತಕ/ಸ್ನಾತಕೋತ್ತರ ಪದವಿಗಳು ಹಾಗೂ ಎಲ್ಲಾ ಪಿಜಿ ಡಿಪ್ಲೊಮಾ ಮತ್ತು ಸರ್ಟಿಫಿಕೆಟ್ ಕೋರ್ಸ್‌ಗಳಿಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಪರೀಕ್ಷಾ ಶುಲ್ಕವನ್ನು ಪಾವತಿಸಲು ಅರ್ಜಿ ಆಹ್ವಾನಿಸಲಾಗಿದೆ. 2018-19 ಮತ್ತು 2022-23ನೇ ಶೈಕ್ಷಣಿಕ ಸಾಲಿನಿಂದ 2023-24ನೇ ಶೈಕ್ಷಣಿಕ ಸಾಲಿನವರೆಗೆ (ಜುಲೈ/ಜನವರಿ ಆವೃತ್ತಿ) ಪ್ರವೇಶಾತಿ ಪಡೆದಿರುವ ಎಲ್ಲಾ ಸ್ನಾತಕ/ಸ್ನಾತಕೋತ್ತರ ಕಾರ್ಯಕ್ರಮಗಳ (ಯುಜಿ/ಪಿಜಿ) ವಾರ್ಷಿಕ ವಿದ್ಯಾರ್ಥಿಗಳಿಗೆ (ನಾನ್ ಸಿಬಿಎಸ್‌ಸಿ) ಹಾಗೂ ಎಲ್ಲಾ ಪಿ.ಜಿ ಡಿಪ್ಲೋಮಾ ಮತ್ತು ಸರ್ಟಿಫಿಕೇಟ್ ಕಾರ್ಯಕ್ರಮಗಳಿಗೆ ಪ್ರವೇಶಾತಿ ಪಡೆದಿರುವ ವಿದ್ಯಾರ್ಥಿಗಳಿಗೆ (ಸಿಬಿಎಸ್‌ಸಿ ಸೆಮಿಸ್ಟರ್ ಸ್ಕೀಮ್) ಪರೀಕ್ಷಾ ಶುಲ್ಕವನ್ನು ಪಾವತಿಸಲು ಅರ್ಜಿ ಆಹ್ವಾನಿಸಿದ್ದು, ದಂಡ ಶುಲ್ಕವಿಲ್ಲದೆ ಪಾವತಿಗೆ ಆಗಸ್ಟ್ 31 ಹಾಗೂ 200ರೂ. ದಂಡ ಶುಲ್ಕದೊಂದಿಗೆ ಪಾವತಿಸಲು ಸೆಪ್ಟೆಂಬರ್ 13 ಕಡೆಯ ದಿನವಾಗಿದೆ. ವಿದ್ಯಾರ್ಥಿಗಳು ಅಧಿಕೃತ ವೆಬ್‌ಸೈಟ್ www.ksoumysuru.ac.inನಲ್ಲಿ ಪರೀಕ್ಷಾ ಅರ್ಜಿ ಮತ್ತು ಪರೀಕ್ಷಾ ಶುಲ್ಕವನ್ನು ಎಲ್ಲಾ ಅಗತ್ಯ ವಿವರಗಳೊಂದಿಗೆ ಭರ್ತಿ ಮಾಡಿ ಕಡ್ಡಾಯವಾಗಿ ಆನ್ ಲೈನ್ ಮೂಲಕವೇ ಸಲ್ಲಿಸಬೇಕು. ಪರೀಕ್ಷೆಗಳನ್ನು ಅಕ್ಟೋಬರ್ ಮಾಹೆಯಲ್ಲಿ ನಡೆಸಲಾಗುವುದು. ಹೆಚ್ಚಿನ ಮಾಹಿತಿಯನ್ನು ವಿವಿ ನಿಲಯದ ಅಧಿಕೃತ ವೆಬ್‌ಸೈಟ್ www.ksoumysuru.ac.in ಆನ್‌ಲೈನ್ ಎಕ್ಸಾಮಿನೇಷನ್ ಪೋರ್ಟಲ್‌ನಲ್ಲಿ ಪಡೆಯಬಹುದು.

## ಸೋಮವಾರಪೇಟೆ ದ್ವಿಮುಖ ವಿದ್ಯುತ್ ಮಾರ್ಗ ಚಾಲನೆ : ಸಾರ್ವಜನಿಕರಿಗೆ ಸೂಚನೆ

ಚಾಮರಾಜನಗರ, ಚಾಮರಾಜನಗರ ತಾಲ್ಲೂಕಿನ ಸೋಮವಾರಪೇಟೆ (ಗಾಳಿಪುರ) ಗ್ರಾಮದಲ್ಲಿ ನೂತನವಾಗಿ ಸ್ಥಾಪಿಸಲಾಗಿರುವ 1ಥ8 ಎಂ.ವಿ.ಎ, 66/11 ಕೆ.ವಿ. ವಿದ್ಯುತ್ ಸ್ವೀಕರಣಾ ಕೇಂದ್ರಕ್ಕೆ ನೂತನವಾಗಿ ನಿರ್ಮಾಣಗೊಂಡಿರುವ 66 ಕೆ.ವಿ. ವಿದ್ಯುತ್ ಮಾರ್ಗದಲ್ಲಿ ಆಗಸ್ಟ್ 5 ರಂದು ಅಥವಾ ನಂತರ ಯಾವುದೇ ದಿನದಲ್ಲಿ ಚೇತನಗೊಳಿಸಲಾಗುವುದು (ವಿದ್ಯುತ್ ಹರಿಸಲಾಗುವುದು) ಎಂದು ಕರ್ನಾಟಕ ವಿದ್ಯುತ್ ಪ್ರಸರಣಾ ನಿಗಮದ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್ ತಿಳಿಸಿದ್ದಾರೆ. 66 ಕೆ.ವಿ ದ್ವಿಮುಖ ವಿದ್ಯುತ್ ಮಾರ್ಗವು ಉದ್ದೇಶಿತ 66 ಕೆ.ವಿ. ಸೋಮವಾರಪೇಟೆ (ಗಾಳಿಪುರ) ವಿದ್ಯುತ್ ವಿತರಣಾ ಕೇಂದ್ರಕ್ಕೆ ಹಾಲಿ ಇರುವ 66 ಕೆ.ವಿ ಚಾಮರಾಜನಗರ- ಹೊನ್ನಳ್ಳಿ ವಿದ್ಯುತ್ ಮಾರ್ಗದಿಂದ ಲೀಲೋ ಮಾಡಿ ಸುಮಾರು 1,804 ಕಿ.ಮೀಗಳಷ್ಟು ನಿರ್ಮಾಣಗೊಂಡಿದ್ದು, ವಿದ್ಯುತ್ ಮಾರ್ಗವು ಹರದನಹಳ್ಳಿ ಹಾಗೂ ಗಾಳಿಪುರ ಪ್ರದೇಶಗಳ ಸರಹದ್ದಿನಲ್ಲಿ ಹಾಯ್ದು ಹೋಗುತ್ತದೆ. ವಿದ್ಯುತ್ ಗೋಪುರಗಳ ಮೇಲೆ ವಿದ್ಯುತ್ ವಾಹಕವು ಚಾಲನೆಗೊಳ್ಳುವುದರಿಂದ ಸಾರ್ವಜನಿಕರು ಗೋಪುರಗಳಿಗೆ ದನಕರುಗಳನ್ನು ಕಟ್ಟುವುದಾಗಲಿ, ಲೋಹದ ಪಟ್ಟಿಯನ್ನು ತೆಗೆಯುವುದಾಗಲಿ, ಗೋಪುರಗಳನ್ನು ಹತ್ತುವುದಾಗಲಿ, ತಂತಿಗಳನ್ನು ಮುಟ್ಟುವುದಾಗಲಿ, ಗೋಪುರಗಳ ಕೆಳಗಡೆ ಮರಗಿಡಗಳನ್ನು ನೆಡುವುದಾಗಲಿ, ಗೋಪುರಗಳಿಗೆ ಬಳ್ಳಿ ಮತ್ತು ಹಗ್ಗ ಎಳೆಯುವುದಾಗಲಿ, ಗಾಳಿಪಟವನ್ನು ಗೋಪುರದ ಹತ್ತಿರ ಹಾರಿಸುವುದು ತುಂಬಾ ಅಪಾಯಕಾರಿ ಹಾಗೂ ಪ್ರಾಣ ಹಾನಿಯಾಗುತ್ತದೆ. ಸೂಚನೆಯನ್ನು ಉಲ್ಲಂಘಿಸಿದ ಪಕ್ಷದಲ್ಲಿ ಉಂಟಾಗುವ ಯಾವುದೇ ತರಹದ ಅಪಘಾತ ಅಥವಾ ಪ್ರಾಣ ಹಾನಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಜವಾಬ್ದಾರರಲ್ಲ ಎಂದು ನಿಗಮದ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕ ಎಂಜಿನಿಯರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಾಲಕಾರ್ಮಿಕ ನಿರ್ಮೂಲನ ಅಭಿಯಾನಕ್ಕೆ ಚಾಲನೆ

**ಕೋಲಾರ:** ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ, ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಇವರ ಸಂಯುಕ್ತಾಶ್ರಯದಲ್ಲಿ ಈ ದಿನ ಸರ್ಕಾರಿ ಪ್ರೌಢಶಾಲೆ ಬೆಗ್ಲಿಹೊಸಹಳ್ಳಿ ಗ್ರಾಮ ಇಲ್ಲಿ 2024ನೇ ಸಾಲಿನ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಬಾಲಕಾರ್ಮಿಕ ನಿರ್ಮೂಲನ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ಪ್ರಸ್ತುತ ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಗೌರವಾನ್ವಿತ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ಸುನಿಲ್ ಎಸ್ ಹೊಸಮನಿ, ವಕೀಲರ ಸಂಘದ ಅಧ್ಯಕ್ಷ ಮುನೇಗೌಡ, ಜಿಲ್ಲಾ ಕಾರ್ಮಿಕ ಅಧಿಕಾರಿಗಳಾದ ವರಲಕ್ಷ್ಮಿ ಆರ್, ಶಾಲಾ ಮುಖ್ಯೋಪಧ್ಯಾಯರು ಗಾಯಿತ್ರಿ, ಕಾರ್ಮಿಕ ನಿರೀಕ್ಷಕ ರಾಜೇಶ್ವರಿ, ಮುಖ್ಯಶಿಕ್ಷಕರು ಹಾಗೂ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಸಿಬ್ಬಂದಿಗಳು ಉಪಸ್ಥತರಿದ್ದು ಶಾಲಾ ವಿದ್ಯಾರ್ಥಿ, ವಿದ್ಯಾರ್ಥಿನಿಯರಿಗೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ ನಿರ್ಮೂಲನೆಯ ಹಾಗೂ ಪ್ರತಿಯೊಬ್ಬ ಮಕ್ಕಳು ಕಡ್ಡಾಯ ಶಿಕ್ಷಣವನ್ನು ಪಡೆಯುವ ಬಗ್ಗೆ ತಿಳಿಸಿದರು. ಬಾಲ್ಯಾವಸ್ಥೆ ಹಾಗೂ ಕಿಶೋರಾವಸ್ಥೆ (ನಿಷೇಧ ಮತ್ತು ನಿಯಂತ್ರಣ)ಕಾಯ್ದೆ1986 ಮತ್ತು 2016 ರ ತಿದ್ದುಪಡಿ ಕಾಯ್ದೆ ಕುರಿತು ತಿಳಿಸಿದರು. ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸಹಾಯವಾಣಿ-155200, ಕಾರ್ಮಿಕ ಸಹಾಯವಾಣಿ-155214, ಮಕ್ಕಳ ಸಹಾಯವಾಣಿ-1098, ಮಹಿಳಾ ಸಹಾಯವಾಣಿ-181, ಪೋಲೀಸ್ ಸಹಾಯವಾಣಿ-112 ಇವುಗಳ ಬಗ್ಗೆ ಮನವರಿಕೆ ಮಾಡಿದರು.

## ಅರ್ಜಿ ಸಲ್ಲಿಸುವ ಅವಧಿ ವಿಸ್ತರಣೆ

**ಬೆಂಗಳೂರು:** ವಿಶ್ವೇಶ್ವರಯ್ಯ ಇಂಜಿನಿಯರಿಮಗ್ ಕಾಲೇಜು ವಿಶ್ವವಿದ್ಯಾನಿಲಯವು 2024-25ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಜುಲೈ 29ರೊಳಗೆ ಸಲ್ಲಿಸುವಂತೆ ಸೂಚಿಸಿದ್ದ ಅವಧಿಯನ್ನು ಆಗಸ್ಟ್ 06, 2024ರ ವರೆಗೆ ವಿಸ್ತರಿಸಲಾಗಿದೆ. ಹೆಚ್ಚಿನ ವಿವರಗಳಿಗೆ ಅಭ್ಯರ್ಥಿಗಳು ಆಯಾಯ ವಿಭಾಗದ ಮುಖ್ಯಸ್ಥರುಗಳನ್ನು ಸಂಪರ್ಕಿಸಬಹುದು ಅಥವಾ www.uvce.karnataka.gov.in ನ್ನು ನೋಡಬಹುದು ಎಂದು ಅಧಿಕೃತ ಪ್ರಕಟಣೆಯಲ್ಲಿ ತಿಳಿಸಿದೆ.

### ಚಿಂತಕ ಬಂಜಗೆರೆ ಜಯಪ್ರಕಾಶ್ ಹೇಳಿಕೆ

# ಜನಪದ ಕಲೆ, ಸಂಸ್ಕೃತಿ ನಿಂತ ನೀರಲ್ಲ, ಚಲನಶೀಲವಾದದ್ದು

**ಚಾಮರಾಜನಗರ:** ಜನಪದ ಕಲೆ, ಸಂಸ್ಕೃತಿ ನಿಂತ ನೀರಲ್ಲ, ಅದು ನಿರಂತರವಾಗಿ ಚಲನಶೀಲವಾಗುವಂತದ್ದು ಎಂದು ಸಾಹಿತಿ ಹಾಗೂ ಸಂಸ್ಕೃತಿ ಚಿಂತಕರಾದ ಡಾ. ಬಂಜಗೆರೆ ಜಯಪ್ರಕಾಶ್ ಅವರು ಅಭಿಪ್ರಾಯಪಟ್ಟರು.

ನಗರದ ವರನಟ ಡಾ. ರಾಜ್‌ಕುಮಾರ್ ಜಿಲ್ಲಾ ರಂಗಮಂದಿರದಲ್ಲಿಂದು ಕರ್ನಾಟಕ ಜಾನಪದ ಅಕಾಡಮಿ, ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಆಕಾಶವಾಣಿ ಮೈಸೂರು ಎಫ್.ಎಂ. 100.06 ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ 'ಜಾನಪದ ಸಂಭ್ರಮ' ಕಾರ್ಯಕ್ರಮದಲ್ಲಿ ವರ್ತಮಾನದ ತಲ್ಲಣಗಳು ಹಾಗೂ ಜಾನಪದ ಕುರಿತು ಉಪನ್ಯಾಸ ನೀಡಿ ಅವರು ಮಾತನಾಡಿದರು.

ಜನರ ಬಾಯಲ್ಲಿ ಬರುವ ಪದವೇ ಜನಪದವಾಗಿದೆ. ಜನಪದ ಸಂಸ್ಕೃತಿ, ಸಂಗೀತ ಕಲೆಗಳು ಗ್ರಾಮೀಣ ಜನರ ವೃತ್ತಿಬದುಕಿನ ಮೇಲೆ ಅವಲಂಬಿತವಾಗಿವೆ. ಜನರು ದಿನನಿತ್ಯದ ದುಡಿಮೆಯ ಬಿಡುವಿನ ವೇಳೆಯಲ್ಲಿ ಕಲೆಗಳನ್ನು ಆಸ್ವಾದಿಸುತ್ತಾರೆ. ಸುಗ್ಗೀ ಕಣ, ಕಳೆ ಕೀಳುವಾಗ, ಗದ್ದೆ ನಾಟೀ ಮಾಡುವಾಗ, ದೋಣಿ ನಡೆಸುವಾಗ ಜನಪದ ಕಾವ್ಯಗಳು ಮೇಳೈಸುತ್ತವೆ. ಜನಪದ ಎಂದಿಗೂ ಕಳೆಗುಂದಿಲ್ಲ. ಅದು ತನ್ನ ಚಲನಶೀಲತೆಯನ್ನು ಇಂದಿಗೂ ಉಳಿಸಿಕೊಂಡಿದೆ. ವಿಕಾಸ ಹಾಗೂ ವಿಸ್ತರಣೆ ಜನಪದ ಕಲೆಯ ಅವಿಭಾಜ್ಯ ಅಂಗಗಳಾಗಿದ್ದು, ಜನರ ನಿತ್ಯ ಬದುಕಿನಲ್ಲಿ ಹಾಸುಹೊಕ್ಕಾಗಿವೆ ಎಂದರು.

ಚಾಮರಾಜನಗರ ಜಿಲ್ಲೆ ಜಾನಪದ ಕಲೆಗಳಿಗೆ ಇಡೀ ರಾಜ್ಯದ ಕೇಂದ್ರಸ್ಥಾನವಾಗಿದೆ. ಸಾಹಿತ್ಯ, ಸಂಸ್ಕೃತಿಗೆ ದಕ್ಷಿಣದ ಹೆಬ್ಬಾಗಿಲು ಆಗಿದೆ. ಕರ್ನಾಟಕಕ್ಕೆ ಮಾದರಿಯಾಗುವ ಜನಪದ ಕಲೆಗಳು ಇಲ್ಲಿವೆ. ಚಾಮರಾಜನಗರಕ್ಕೆ ಜನಪದ ಕಲೆ ದೈವಕಲೆಯಾಗಿದೆ. ಮಲೆ ಮಹದೇಶ್ವರ, ಮಂಟೇಸ್ವಾಮಿ, ಸಿದ್ದಪ್ಪಾಜಿಯಂತಹ ಸಾಧುಸಂತರು ನಡೆದಾಡಿದ ಪುಣ್ಯಭೂಮಿ ಇದಾಗಿದೆ. ಎಲ್ಲಾ ಬಗೆಯ ಜನಪದ ಕಲಾವಿದರು ಇಲ್ಲಿದ್ದಾರೆ. ಕಲಾವಿದರಲ್ಲಿ ಇತ್ತೀಚೆಗೆ ಜಾಗೃತ ಪ್ರಜ್ಞೆ ಮೂಡಿದೆ. ವರ್ತಮಾನದಲ್ಲಿ ನಮ್ಮ ಉದ್ಯೋಗಕ್ಕೂ ಬದುಕಿನ ಕಲೆಗೂ ಸಂಬಂಧವಿದೆ ಎಂದು ತಿಳಿಸಿದರು.

ಗ್ರಾಮೀಣ ಜನರ ಜನಪದ ಬದುಕು ಇಂದು ಸಾಮಾಜಿಕ ಸ್ಥಿತ್ಯಂತರ ಹೊಂದುತ್ತಿದೆ. ವರ್ತಮಾನದ ಬದುಕು ಬಹಳ ವೇಗವಾಗಿ ಅಧುನಿಕತೆ, ಅತ್ಯಾಧುನಿಕತೆಯತ್ತ ಸಾಗಿದೆ. ಆದರೂ ಸಹ ನಮ್ಮ ಜನಪದರ ಬದುಕು ಸಾವಯವ ಸಂಬಂಧದೊಂದಿಗೆ ಬೆಸೆದುಕೊಂಡಿದೆ. ಆಧುನಿಕತೆಯ ಹೆಸರಿನಲ್ಲಿ ಜನಪದ ಬದುಕು ತಲ್ಲಣಿಸುತ್ತಿದೆ. ಭರತನಾಟ್ಯ ಹಾಗೂ ಶಾಸ್ತ್ರೀಯ ನೃತ್ಯ ಪ್ರಕಾರಗಳಿಗೆ ಜನಪದವೇ ಮೂಲವಾಗಿದೆ. ಬಿದ್ದ ಪೆಟ್ಟಿನಿಂದ ಬಂದ ಎಚ್ಚರದಂತೆ ಜನಪದವು ಆಧುನಿಕತೆ ಹಾಗೂ ತಾಂತ್ರಿಕತೆಯನ್ನು ಅಳವಡಿಸಿಕೊಂಡು ಮುಂದೆ ಸಾಗಬೇಕಾದ ಅನಿವಾರ್ಯತೆ ಇದೆ ಎಂದು ಬಂಜಗೆರೆ ಜಯಪ್ರಕಾಶ್ ಅವರು ತಿಳಿಸಿದರು.

ಕಾವೇರಿ ಜಲಾನಯನ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಪಿ. ಮರಿಸ್ವಾಮಿ ಅವರು ಮಾತನಾಡಿ ಜಾನಪದ ಕಲೆಗಳ ತವರೂರು ಚಾಮರಾಜನಗರ. ಜನಪದ ಇಲ್ಲಿ ಸಮೃದ್ಧವಾಗಿದೆ. ಹಿಂದೆ ಹಳ್ಳಿಗಳಲ್ಲಿ ಜನಪದ ಜೀವಂತವಾಗಿತ್ತು. ಜನಪದವನ್ನು ಬರವಣಿಗೆ ಮೂಲಕ ಮುಂದಿನ ಪೀಳಿಗೆಗೆ ಉಳಿಸಿ ಬೆಳೆಸಲು ಕಲಾವಿದರು ಮುಂದಾಗಬೇಕು ಎಂದರು.

ಚಾಮರಾಜನಗರ ಮತ್ತು ರಾಮಸಮುದ್ರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನ ಅವರು ಮಾತನಾಡಿ ಜಿಲ್ಲೆಯ ಜಾನಪದ ಕಲಾವಿದರು ರಾಜ್ಯಕ್ಕೆ ದೇಶಕ್ಕೆ ಸಾಕಷ್ಟು ಕೊಡುಗೆಗಳನ್ನು ನೀಡಿದ್ದಾರೆ. ರಾಷ್ಟ್ರಮಟ್ಟದಲ್ಲಿ ಅವಕಾಶಗಳನ್ನು ಪಡೆದಿದ್ದಾರೆ. ಜಿಲ್ಲೆ ಅನೇಕ ಕಲಾವಿದರನ್ನು ಚಿತ್ರರಂಗಕ್ಕೂ ನೀಡಿದೆ. ಜಾನಪದ ಕಲೆಗಳನ್ನು ಮುಂದಿನ ಪೀಳಿಗೆಗೆ ಪರಿಚಯಿಸಲು ಉತ್ತಮ ಕಾರ್ಯಕ್ರಮ ಹಮ್ಮಿಕೊಂಡಿದೆ ಎಂದು ತಿಳಿಸಿದರು.



### ಜನಪದ ಆಧಾರಸ್ತಂಭ

**ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಜಾನಪದ ಅಕಾಡಮಿ ಅಧ್ಯಕ್ಷರಾದ ಗೊಲ್ಲಹಳ್ಳಿ ಶಿವಕುಮಾರ್ ಅವರು ಮಾತನಾಡಿ ಬದಲಾವಣೆಗೆ ಆಧುನಿಕತೆ ಬೇಕು. ಆದರೆ ಆಧುನಿಕತೆ ಜಾನಪದ ಕಲೆಗಳ ವಿನಾಶಕ್ಕೆ ಕಾರಣವಾಗಬಾರದು. ಕಲೆಗಳಲ್ಲಿ ಶ್ರೇಷ್ಠ, ಕನಿಷ್ಠ ಪ್ರಕ್ರಿಯೆಗಳನ್ನು ಬುಡಸಮೇತ ಕೀಳಬೇಕು. ನಮ್ಮ ಪರಂಪರೆಯನ್ನು ಉಳಿಸಿ ಬೆಳೆಸಲು ಜನಪದ ಆಧಾರಸ್ತಂಭವಾಗಬೇಕು. ಅಂತಹ ಶಕ್ತಿ ಜನಪದಕ್ಕಿದೆ ಎಂದು ತಿಳಿಸಿದರು. ವಿಧಾನ ಪರಿಷತ್ ಶಾಸಕರಾದ ಕೆ. ವಿವೇಕಾನಂದ ಅವರು ಕಾರ್ಯಕ್ರಮ ಉದ್ಘಾಟಿಸಿದರು. ಕರ್ನಾಟಕ ಜಾನಪದ ಅಕಾಡಮಿ ಸದಸ್ಯರಾದ ಉಮೇಶ್, ಮಲ್ಲಿಕಾರ್ಜುನ ಕಲ್ಲಹಳ್ಳಿ, ರಿಜಿಸ್ಟ್ರಾರ್ ನಮ್ರತಾ, ಗುರುರಾಜ ಹೊಸಕೋಟೆ, ಇತರರು ಕಾರ್ಯಕ್ರಮದಲ್ಲಿ ಇದ್ದರು. ವೇದಿಕೆ ಕಾರ್ಯಕ್ರಮದ ಬಳಿಕ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ವಿವಿಧ ಕಲಾತಂಡಗಳು ಸಾಂಸ್ಕೃತಿಕ ಕಲೆಗಳನ್ನು ಪ್ರದರ್ಶಿಸಿದರು. ವೇದಿಕೆ ಕಾರ್ಯಕ್ರಮಕ್ಕೂ ಮೊದಲು ನಗರದ ಶ್ರೀ ಚಾಮರಾಜೇಶ್ವರ ದೇವಾಲಯದಿಂದ ವಿವಿಧ ಕಲಾತಂಡಗಳೊಂದಿಗೆ ಹಮ್ಮಿಕೊಳ್ಳಲಾಗಿದ್ದ ಜನಪದ ಸಂಭ್ರಮದ ಜಾಥಾಗೆ ಚಾಮರಾಜನಗರ ಮತ್ತು ರಾಮಸಮುದ್ರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಮಹಮ್ಮದ್ ಅಸ್ಗರ್ ಮುನ್ನ ಅವರು ಹಸಿರು ನಿಶಾನೆ ತೋರಿ ಚಾಲನೆ ನೀಡಿದರು.**

### ಕಲಾವಿದರಿಗೆ ವಿವಿಧ ಕಾರ್ಯಕ್ರಮ

**ಜನಪದ ಸಂಸ್ಕೃತಿ ಉಳಿಸುವ ನಿಟ್ಟಿನಲ್ಲಿ ಆಕಾಶವಾಣಿಯು ಜನಪದ ಕಲಾವಿದರನ್ನು ನಿರಂತರವಾಗಿ ಪ್ರೋತ್ಸಾಹಿಸುತ್ತಿದೆ. ಆಕಾಶವಾಣಿಯ ಧ್ವನಿಪರೀಕ್ಷೆಯ ಮಾನದಂಡದ ಆಧಾರದಲ್ಲಿ ವಿವಿಧ ಇಲಾಖೆಗಳು ಕಲಾವಿದರಿಗೆ ಕಾರ್ಯಕ್ರಮಗಳನ್ನು ನೀಡುತ್ತಿವೆ ಎಂದು ಮೈಸೂರು ಆಕಾಶವಾಣಿ ಉಪನಿರ್ದೇಶಕರಾದ ಎಸ್.ಎಸ್. ಉಮೇಶ್ ಹೇಳಿದರು. ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಜಿಲ್ಲಾಧ್ಯಕ್ಷರಾದ ಎಚ್.ವಿ. ಚಂದ್ರು ಅವರು ಮಾತನಾಡಿ ಜನಪದ ಕವಿತೆಗಳು ಸಮಾಜಕ್ಕೆ ಉತ್ತಮ ಸಂದೇಶ ನೀಡುವಲ್ಲಿ ಸಫಲವಾಗಿವೆ. ಗ್ರಾಮೀಣ ಜನರು ತಮ್ಮ ದೈಹಿಕ ಶ್ರಮ ಕಡಿಮೆ ಮಾಡಿಕೊಳ್ಳಲು ಹುಟ್ಟುಹಾಕಿದ್ದು ಜನಪದ ಗೀತೆಗಳನ್ನು. ಜನಪದ ಕಲೆಗಳು ನಶಿಸದಂತೆ ತಡೆದು ಪುನಶ್ಚೇತನ ಗೊಳಿಸಬೇಕಾದ ಅಗತ್ಯವಿದೆ ಎಂದರು.**

# ಪರಿಸರ ಸಂರಕ್ಷಿಸುವತ್ತ ಗಮನಹರಿಸಿ

**ಕೋಲಾರ:** ಬೀಜದ ಉಂಡೆಗಳನ್ನು ಎಸೆಯುವುದು ಮತ್ತು ನಾಟುವುದರೊಂದಿಗೆ ವಿಶ್ವಪರಿಸರ ದಿನಾಚರಣೆ ಆಚರಿಸುತ್ತಿರುವುದು ಅರ್ಥಪೂರ್ಣವಾಗಿದೆ. ಆದರೆ ಒಂದು ನೋವಿನ ಸಂಗತಿಯೆಂದರೆ ನಾವೇ ಪರಿಸರ ನಾಶ ಮಾಡುತ್ತಿದ್ದೇವೆ, ಆದ ಕಾರಣದಿಂದಲೇ ಗಿಡನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಬೇಕಾಗಿದೆ ನಾವು ಪರಿಸರ ನಾಶ ಮಾಡಿದ್ದರಿಂದ ಈ ಕಾರ್ಯಕ್ರಮ ನಡೆಸುವ ಸಂದರ್ಭ ಎದುರಾಗಿದೆ ದಯವಿಟ್ಟು ಪ್ರತಿಯೊಬ್ಬರು ಯಾವುದೇ ಆಚರಣೆಯ ಸಂದರ್ಭದಲ್ಲಿ ಗಿಡಗಳನ್ನು ನೆಟ್ಟು ಪೋಷಿಸಿ ಪರಿಸರವನ್ನು ರಕ್ಷಿಸಿ ಎಚ್ಚರಿಕೆ ರಾಜ್ಯ ಅಹಿಂದ ಜನಸೇವಾ ಸಮಿತಿಯ ಅಧ್ಯಕ್ಷರಾದ ಸ್ಕಂದ ನವೀನ್ ಹೇಳಿದರು.

ಜೆ ಡಿ ಎಸ್ ನಾಯಕರು ಹಾಗೂ ಸಮಾಜಸೇವಕರಾದ ಸಿಎಂಆರ್ ಶ್ರೀನಾಥ್ ಮಾತನಾಡಿ ನಮ್ಮೆಲ್ಲರ ತಾಯಿ ಪ್ರಕೃತಿ ಮಾತೆ ಸಾಲುಮರದ ತಿಮ್ಮಕ್ಕನವರನ್ನು ಸ್ಮರಿಸಿ ಅವರ ಹಾಗೆ ನಾವೆಲ್ಲರಾಗಬೇಕು ಮುಂದಿನ ಪೀಳಿಗೆಗಾಗಿ ಪ್ರತಿಯೊಬ್ಬರೂ ''ಮನೆಗೊಂದುಮರ ಊರಿಗೊಂದು ವನ ''ಎಂಬ ನಾನ್ನುಡಿಯಂತೆ ಅದರತ್ತ ಸಾಗಬೇಕಾಗಿದೆ .ಪ್ರಕೃತಿಯನ್ನು ನಾವೇ ನಾಶ ಮಾಡುತ್ತಿದ್ದೇವೆ .ಅಷ್ಟೇಅಲ್ಲದೆ ಪ್ರಾಣಿ ಪಕ್ಷಿಗಳ ರಕ್ಷಣೆ ಪ್ರಕೃತಿಯ ರಕ್ಷಣೆ ನಮ್ಮ ಹೊಣೆಯಾಗಿದೆ .ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಸಸಿಯನ್ನು ನೆಟ್ಟು ಪೋಷಿಸುವ ಜವಾಬ್ದಾರಿಯನ್ನು ನಿಭಾಯಿಸಬೇಕೆಂದರು.

ಕಾಂಗ್ರೆಸ್ ಮುಖಂಡರಾದ ಗೌತಮ್ ಮಾತನಾಡಿ ನಾವು ಪ್ರಕೃತಿಯ ಜೊತೆ ನಾನಾ ನೀನಾ ಎಂಬಂತೆ ಸಾಗುತ್ತಿದ್ದೇವೆ ಕೆಲವು ಪ್ರಾಣಿ ಪಕ್ಷಿಗಳು ಕಾಣ ಸಿಗದಂತಾಗಿದೆ ಇಂತಹ ಕಾರ್ಯಕ್ರಮಗಳ ಮೂಲಕ ಸ್ವಲ್ಪ ಮಟ್ಟದ ಸುದಾರಾಯಣೆಯಾಗಬಹುದು ದೇಶದ ಪ್ರತಿಯೊಬ್ಬ ಪ್ರಜೆಯೂ ಈ ನಿಟ್ಟಿನಲ್ಲಿ ಹೆಚ್ಚಾಗಿ ಆಸಕ್ತಿವಹಿಸಿದಾಗ ಮಾತ್ರ ಮುಂದಿನ ಪೀಳಿಗೆಗೆ ಉತ್ತಮ ಬುನಾದಿಯಾಗುತ್ತದೆಯೆಂದರು.

ಕೋಲಾರ ಚಿಕ್ಕಬಳ್ಳಾಪುರದ ಪತ್ರಕರ್ತರ ಸಹಕಾರ ಸಂಘದ




ಅದ್ಯಕ್ಷರಾದ ಕೆ ಎಸ್ ಗಣೇಶ್ ಮಾತನಾಡಿ ಕಾರ್ಯಕ್ರಮದ ಭಾಗವಾಗಿರುವ ವಿದ್ಯಾರ್ಥಿಗಳು ಈ ನಿಟ್ಟಿನಲ್ಲಿ ದಿಟ್ಟ ನಿರ್ಧಾರ ಕೈಗೊಳ್ಳಬೇಕು ಮತ್ತು ನಿಮ್ಮ ಸಹಪಾಠಿಗಳನ್ನು ಜಾಗೃತಿಗೊಳಿಸಬೇಕು ಕೇವಲ ಬೀಜದುಂಡೆಗಳನ್ನು ಎಸೆದರೆ ಸಾಲದು ನಾವು ನೆಟ್ಟಂತಹ ಗಿಡಗಳು ಅರಣ್ಯವಾಗಬೇಕಾದರೆ ಆರೈಕೆಯಾಗುತ್ತಿಲ್ಲ ಕಾರಾಣ ಕಾಡ್ಗಿಚ್ಚು ಮತ್ತು ಕೆಲವರು ಮೋಜಿಗಾಗಿ ಬೆಂಕಿಯಿಡುವುದು ಸಂಭಂದ ಪಟ್ಟ ಇಲಾಖೆಯವರು ಇಂತಹ ಘಟನೆಗಳು ನಡೆಯದೇ ನೋಡಿಕೊಂಡರೆ ನಮ್ಮ ಅಂತರಗಂಗೆಯು ಕಾಡಾಗುತ್ತದೆ

ವಿಷಾದವೆಂದರೆ ಕೆರೆಗಳು ಆಟದಮೈದಾನಗಳಾಗುತ್ತಿವೆ , ಬಸ್ ನಿಲ್ದಾಣಗಳಾಗುತ್ತಿದೆ ಮತ್ತು ವಾಣಿಜ್ಯ ಕಟ್ಟಡಗಳು ತಲೆಯೆತ್ತುತ್ತಿದೆ ನಾವು ಜಾಗೃತರಾಗದಿದ್ದರೆ ಪ್ರತಿಯೊಬ್ಬರಿಗೂ ಕಾಯಿಲೆಗಳು ಕಟ್ಟಿಟ್ಟ ಬುತ್ತಿ ಎಂದರು. ವಿಕೆ ರಾಜೇಶ್ ಸಂತೋಷ್ ,ತ್ಯಾಗರಾಜ್ ,ಶಿವಣ್ಣ ,ರಾಮಾಂಜಿನಪ್ಪ ,ಕಾಶಿ ,ಶೇಷಾದ್ರಿ, ವೆಂಕಟಪ್ಪ ,ನಾರಾಯಣಸ್ವಾಮಿ ,ಬಾಬು ,ಚೌಡರೆಡ್ಡಿ ,ನಾರಾಯಣಸ್ವಾಮಿ ,ನಾಗೇಶ್ ,ವೇಣುಗೋಪಾಲ್ ,ಮಂಜುನಾಥ್ ಹಾಗೂ ಹಲವು ಕಾಲೇಜಿನ ಮಕ್ಕಳು ಭಾಗವಹಿಸಿದ್ದರು .

# ಮಗುವಿಗೆ ತಾಯಿ ಹಾಲು ಸಂಜೀವಿನಿ

**ಕೋಲಾರ:** ಆರೋಗ್ಯವಂತ ಶಿಶು ಸಧೃಡ ಪ್ರಜೆಯಾಗಿ ಸಮಾಜದಲ್ಲಿ ಬದುಕಬೇಕಾದರೆ ಇದಕ್ಕೆ ಒಂದೇ ಮದ್ದು ತಾಯಿ ಹಾಲು ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಆಯೋಜಿಸಿದ್ದ, ವಿಶ್ವಸ್ತನ್ಯಪಾನ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ತಾಯಿ ಹಾಲು ಮಕ್ಕಳಿಗೆ ಸಂಜೀವಿನಿ, ದೈಹಿಕ ಮತ್ತು ಮಾನಸಿಕ ಬೆಳವಣಿಗೆಗೆ ತಾಯಿ ಹಾಲು ಉತ್ತಮವಾದ ಆಹಾರ ಎಂದರು. ಹಿಂದಿನ ಕಾಲದಲ್ಲಿ ಈ ಹಾಲುಣಿಸುವ ಬಗ್ಗೆ ಅರಿವು ನೀಡುವುದು ತಾಯಂದಿರಿಂದ ಮಕ್ಕಳಿಗೆ ಮುಂದುವರಿಯುತ್ತಿತ್ತು. ಆದರೆ ಇಂದು ವಿದ್ಯಾವಂತರಿಗೆ ಹಾಲುಣಿಸುವ ಕುರಿತು ಅರಿವು ಮೂಡಿಸಲು ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಇಂದಿನ ದಿನಗಳಲ್ಲಿ ಮಕ್ಕಳು ರೋಗಗಳ ಗೂಡಾಗುತ್ತಿರಲು ಕಾರಣ ತಾಯಂದಿರು ಸ್ತನ್ಯಪಾನ ಮಾಡಿಸದೇ ಇರುವುದು ಎಂದರು.



ಎಸ್.ಎನ್.ಆರ್ ಆಸ್ಪತ್ರೆಗಳಲ್ಲಿ ತಾಯಿ ಮಗುವಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. ಗರ್ಭಿಣಿಯಿಂದ ಹಿಡಿದು ಬಾಣಂತಿ ಆರೈಕೆ ಮಗುವಿಗೆ ಚುಚ್ಚುಮದ್ದು, ತಾಯಿ ಮಗುವಿನ ಆರೋಗ್ಯ ಸೇವೆಗಳನ್ನು ಅನುಸರಿಸುವಂತಹ ವ್ಯವಸ್ಥೆ ಇಡೀ ರಾಜ್ಯದಲ್ಲಿ ಕೋಲಾರ ನಗರದಲ್ಲಿಮಾತ್ರ ಇದ್ದು, ಇದು ಹೆಮ್ಮೆಯ ವಿಷಯವಾಗಿದೆ. ಹಾಗಾಗಿ ಪ್ರತಿಯೊಬ್ಬ ತಾಯಿ ಮಗು ಇದರ ಸದುಪಯೋಗ ಪಡೆದುಕೊಳ್ಳುವಂತೆ ಜಿಲ್ಲಾಧಿಕಾರಿಗಳು ಮಹಿಳೆಯರಲ್ಲಿ ಮನವಿ ಮಾಡಿದರು.

ಉತ್ತಮ ವೈದ್ಯಾಧಿಕಾರಿಗಳ ತಂಡವಿದ್ದು, ಉತ್ತಮ ಸಮಾಜಕ್ಕೆ ಆರೋಗ್ಯವಂತ ಪ್ರಜೆಗಳನ್ನು ನೀಡುವುದು ವೈದ್ಯರ ಉದ್ದೇಶವಾಗಿದೆ ಎಂದರು.

ಡಾ.ಬಿರೇಗೌಡ ಮಾತನಾಡಿ 25 ವರ್ಷಗಳ ಹಿಂದೆ ಈ ಆಸ್ಪತ್ರೆಗೆ ಯಾವುದೇ ವೈದ್ಯಕೀಯ ಸೌಲಭ್ಯಗಳಿರಲಿಲ್ಲ ಆದರೆ ಇಂದು ಜೀರೆ ಆಸ್ಪತ್ರೆಯಿಂದ ಈ ಆಸ್ಪತ್ರೆಗೆ ಶಿಫಾರಸ್ಸು ಮಾಡಿ ರೋಗಿಗಳು ಬರುತ್ತಿದ್ದಾರೆ. ಇದಕ್ಕೆ ಮೂಲ ಮತ್ತು ಮುಖ್ಯ ಕಾರಣ ಈ ಆಸ್ಪತ್ರೆಯಲ್ಲಿರುವ ಮೂಲ ಸೌಲಭ್ಯಗಳು ಎಂದರು. ಮೂಢನಂಬಿಕೆ ಯಿಂದ ಹೊರಬಂದು ಉತ್ತಮ ಆರೋಗ್ಯವಂತ ಸಮಾಜ ನಿರ್ಮಾಣಕ್ಕೆ ಕೈ ಜೋಡಿಸಿ ಎಂದರು. ದೇವಾನುದೇವತೆಗಳೇ ತಾಯಿ ಹಾಲು ಕುಡಿದು ಆರೋಗ್ಯವಂತ ಮತ್ತು ಸದೃಢರಾಗಿ ಪ್ರಪಂಚವನ್ನೆಗೆದ್ದಿದ್ದಾರೆ. ಹಾಗಾಗಿ ಬಲಿಷ್ಠ ಹಾಗೂ ಆರೋಗ್ಯವಂತ ಮಕ್ಕಳನ್ನು ಹೊಂದಲು ಪ್ರತಿಯೊಬ್ಬ ತಾಯಿ ತನ್ನ ಮಗುವಿಗೆ ಹುಟ್ಟುದಾಗಿನಿಂದ ಆರು ತಿಂಗಳವರೆಗೆ ಕಡ್ಡಾಯವಾಗಿ ಎದೆ ಹಾಲುಣಿಸುವಂತೆ ಹೇಳಿದರು. ಆಹಾರ ಸೇವನೆ ಕ್ರಮಬದ್ಧವಾಗಿದ್ದರೆ ಅನಾರೋಗ್ಯಕ್ಕೆ ಅವಕಾಶವಿರುವುದಿಲ್ಲ ಎಂದರು.

ಡಾ.ಮಮತಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಯಾದ ಎನ್.ಸಿ ನಾರಾಯಣಸ್ವಾಮಿಯವರು ವಿಶ್ವ ಸ್ತನ್ಯಪಾನ ದಿನಾಚರಣೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು. ವೈದ್ಯರುಗಳಾದ ಬಾಲಸುಂದರ್, ಕಮಲಾಕರ್ ಕೆ.ಆರ್, ಜಿಲ್ಲಾ ಆರೋಗ್ಯಾಧಿಕಾರಿ ಎಂ. ಪ್ರೇಮಾ, ನರ್ಸಿಂಗ್ ಅಧೀಕ್ಷಕರಾದ ವಿಜಿಯಮ್ಮ, ಸುಮತಿ ಅವರು ಸೇರಿದಂತೆ ಬಾಣಂತಿಯರು ಮಗು ಭಾಗವಹಿಸಿದ್ದರು.

ಜಿಲ್ಲಾಧಿಕಾರಿಗಳು ಎಸ್ ಇನ್ ಆರ್. ಆಸ್ಪತ್ರೆಯಲ್ಲಿ ಮಿಲ್ಕ್ ಬ್ಯಾಂಕ್ ಉದ್ಘಾಟನೆ ಮಾಡಿದರು.

# ಮುಖ್ಯ ಶಿಕ್ಷಕ ಮುನಿ ಅಂಜನಪ್ಪಗೆ ಬೀಳ್ಕೊಡುಗೆ

**ವಿಜಯಪುರ:** ವಿಧಾನಸೌಧದ ದ್ವಾರ ಬಾಗಿಲಿನ ಮುಂದೆ ಬರೆದಿರುವ ಸರ್ಕಾರಿ ಕೆಲಸ ದೇವರ ಕೆಲಸ ಎಂಬ ನಾಣ್ಣುಡಿಗೆ ತಕ್ಕಂತೆ ಸರಳತೆ, ಪ್ರಾಮಾಣಿಕತೆ, ಸತ್ಯನಿಷ್ಠೆಗೆ ಮತ್ತೊಂದು ಹೆಸರಾಗಿ ಸರ್ಕಾರಿ ಶಾಲೆಯ ಮುಖ್ಯೋಪಾಧ್ಯಾಯರಾಗಿ ಸೇವೆ ಸಲ್ಲಿಸಿದ ಮುನಿ ಅಂಜನಪ್ಪ ರವರ ಸೇವೆ ಸದಾ ನೆನಪಿನಲ್ಲಿ ಉಳಿಯುವಂತದ್ದು ಹಾಗೂ ಇತರೆ ಸರ್ಕಾರಿ ಅಧಿಕಾರಿಗಳಿಗೆ ಮಾದರಿಯಾಗಿರುವಂತಹದ್ದೆಂದು ಪುರಸಭಾ ಮಾಜಿ ಅಧ್ಯಕ್ಷೆ ಹಾಲಿ ಸದಸ್ಯೆ ರಾಜೇಶ್ವರಿ ಭಾಸ್ಕರ್ ತಿಳಿಸಿದರು.

ಇಲ್ಲಿನ ಭರತ್ ನಗರದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯಲ್ಲಿ ಮುಖ್ಯ ಶಿಕ್ಷಕರಾಗಿ ಸುದೀರ್ಘ ಕಾಲ ಸೇವೆ ಸಲ್ಲಿಸಿ ನಿವೃತ್ತರಾಗುತ್ತಲಿರುವ ಮುಖ್ಯ ಶಿಕ್ಷಕ ಮುನಿಅಂಜನಪ್ಪ ರವರಿಗೆ ಏರ್ಪಡಿಸಿದ್ದ ಅಭಿನಂದನಾ ಕಾರ್ಯಕ್ರಮದಲ್ಲಿ ಅವರನ್ನು ಅಭಿನಂದಿಸಿ ಮಾತನಾಡುತ್ತಿದ್ದರು.

ವಿಜಯಪುರ ಕ್ಲಸ್ಟರ್ನ ಸಿ ಆರ್ ಪಿ ದಿನೇಶ್ ರವರು ಮಾತನಾಡಿ ಸರ್ಕಾರದಿಂದ ಕಾಲಕಾಲಕ್ಕೆ ಬರುವ ಆದೇಶಗಳನ್ನು ಶಾಲೆಯಲ್ಲಿ ಜಾರಿಗೆ ತರುವುದರೊಂದಿಗೆ ಮಕ್ಕಳಿಗೆ ಅವಶ್ಯಕವಾಗಿ ದೊರಕಬೇಕಾಗಿರುವ ಎಲ್ಲಾ ಸೌಲಭ್ಯಗಳನ್ನು ಇಲಾಖೆಯ ಸಹಕಾರದೊಂದಿಗೆ ಮಕ್ಕಳಿಗೆ ದೊರಕುವಂತೆ ಮಾಡುವುದರೊಂದಿಗೆ ಸಮಯ ಪಾಲನೆ ಮುನಿ ಅಂಜನಪ್ಪನವರ ಮತ್ತೊಂದು ಸಾಧನೆಯಾಗಿದ್ದು, ಅವರು ನಿವೃತ್ತರಾದರು



ಸಹ ಸದಾಕಾಲ ಶಾಲೆಗೆ ಬಂದು ಅವರ ಸಲಹೆ ಸೂಚನೆಗಳನ್ನು ನೀಡುತ್ತಿರಬೇಕೆಂದು ತಿಳಿಸಿದರು.

ಜಾಲಿಗೆ ಸಿ ಆರ್ ಪಿ ಶ್ರೀಧರ್ ಶ್ರೀಧರ್ ಅವರು ಮಾತನಾಡಿ ತಾವು ಕರ್ತವ್ಯ ನಿರ್ವಹಿಸುತ್ತಿದ್ದ ಕುಂದಾಣ ಶಾಲೆಯಲ್ಲಿ ಮುಖ್ಯ ಶಿಕ್ಷಕರಾಗಿ ಸೇವೆ ಸಲ್ಲಿಸುತ್ತಿದ್ದ ಮುನಿಅಂಜನಪ್ಪ ರವರು ಶಾಲಾ ಕಟ್ಟಡದ ತಕರಾರಿನಲ್ಲಿ ಶಾಲೆಗೆ ಬೀಗ ಹಾಕುತ್ತಿದ್ದ ಸಮಯದಲ್ಲಿ ಮಕ್ಕಳನ್ನು ಕರೆದುಕೊಂಡು ಹೋಗಿ ಮರದ ನೆರಳಿನಲ್ಲಿ ಇಲ್ಲವೇ ಯಾವುದಾದರೂ ಆವರಣಗಳಲ್ಲಿ ಕುಳ್ಳಿರಿಸಿ ಪಾಠ ಪ್ರವಚನ ಮಾಡಿಸುವುದರೊಂದಿಗೆ ಬೀಗ ಹಾಕಿಸಿದ ಶಾಲೆಯ ಬೀಗ ತೆಗೆಸುವಲ್ಲಿ ಅವರು ಪಡುತ್ತಿದ್ದ ಶ್ರಮ ಮರೆಯಲಾಗದಂತಹದ್ದೆಂದು ತಿಳಿಸಿದರು.

ಪ್ರಭಾರಿ ಮುಖ್ಯ ಶಿಕ್ಷಕಿಯಾಗಿ ಅಧಿಕಾರಿ ಸ್ವೀಕರಿಸಿದ ಗುಲ್ಜಾರ್ ಫಾತಿಮಾ ರವರನ್ನು ಅಭಿನಂದಿಸಲಾಯಿತು. ಸಿ ಆರ್ ಪಿ ಮುನಿಯಪ್ಪ, ಸರ್ಕಾರಿ ಮಾದರಿ ಹೆಣ್ಣು ಮಕ್ಕಳ ಪಾಠಶಾಲಾ ಮುಖ್ಯೋಪಾಧ್ಯಾಯರಾದ ಮನೋಹರ್, ಸರ್ಕಾರಿ ಮಾದರಿ ಬಾಲಕರ ಪಾಠಶಾಲಾ ಮುಖ್ಯೋಪಾಧ್ಯಾಯರಾದ ಸುಭಾಷ್ ದಾತರ್, ಶಾಲಾ ಅಭಿವೃದ್ಧಿ ಸಮಿತಿಯ ಅಧ್ಯಕ್ಷರಾದ ಮಹೇಶ್,ಮಾಜಿ ಅಧ್ಯಕ್ಷರಾದ ಅನ್ಸರ್ ಪಾಷಾ ದೇವರಾಜ್, ಶಿಕ್ಷಕ ರುಗಳಾದ ಸುಕನ್ಯ,ಮಾಲತಿ ಅರ್ಚಕರಾದ ಲೋಕನಾಥಾಚಾರ್ಯ,ನಿವೃತ್ತರಾಗ ುತ್ತಲಿರುವ ಮುಖ್ಯ ಶಿಕ್ಷಕ ಮುನಿ ಆಂಜನಪ್ಪ ರವರ ಪತ್ನಿ ಪ್ರಮೀಳಾ, ಮಕ್ಕಳಾದ ಶ್ರೀ ಲಕ್ಷ್ಮಿ, ಸುಶ್ಮಿತಾ, ಸರ್ಕಾರಿ ಹೆಣ್ಣು ಮಕ್ಕಳ ವಸತಿ ನಿಲಯದ ಸೂಪರ್ ವಿಶಾಲಾಕ್ಷಿ,ನಾರಾಯಣಪುರ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠ ಶಾಲೆಯ ಪ್ರಭಾರಿ ಮುಖ್ಯ ಶಿಕ್ಷಕ ಪರಮೇಶಯ್ಯ, ಗುರಪ್ಪನ ಮಠದ ಸರ್ಕಾರಿ ಹಿರಿಯ ಪಾಠಶಾಲೆಯ ಮುಖ್ಯ ಶಿಕ್ಷಕಿ ಸುಜಾತ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಆದರ್ಶ, ಕಾರ್ಯದರ್ಶಿ ನಾರಾಯಣ, ಉಪಾಧ್ಯಕ್ಷರಾದ ಭಾಗ್ಯಲಕ್ಷ್ಮಿ, ವೆಂಕಟಚಲಯ್ಯ, ಸೋಮಶೇಖರ್, ಪುಟ್ಟಸ್ವಾಮಿ, ಹಾಗೂ ಸದಸ್ಯರುಗಳು, ಪೋಷಕರು ಮತ್ತಿತರರು ಭಾಗವಹಿಸಿದ್ದರು.

# ನಡೆ-ನುಡಿಗಳಲ್ಲಿ ಶುಚಿತ್ವ ಕಾಪಾಡುವವನು ನಿಜವಾದ ಜ್ಞಾನಿ

**ಬೆಂಗಳೂರು:** ತನು, ಮನ, ಭಾವ, ನಡೆ-ನುಡಿ, ಇವುಗಳಲ್ಲಿ ಶುಚಿತ್ವ ಕಾಪಾಡುವವನು ನಿಜವಾದ ಜ್ಞಾನಿ ಎಂದು ಶಿರೂರು ಮಠದ ಬಸವಲಿಂಗ ಮಹಾ ಸ್ವಾಮೀಜಿ ಅವರು ತಿಳಿಸಿದರು.

ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಬೆಂಗಳೂರು ಇವರ ಸಹಯೋಗದಲ್ಲಿ ಗಾಂಧಿ ಭವನದಲ್ಲಿ ಚಿತ್ತರಗಿ ಇಳಕಲ್ ಶ್ರೀ ವಿಜಯ ಮಹಂತೇಶ್ವರ ಸಂಸ್ಥಾಪನದ ಪೂಜ್ಯ ಡಾ. ಮಹಾಂತ ಶಿವಯೋಗಿಗಳ ಜಯಂತಿ ಪ್ರಯುಕ್ತ ಹಮ್ಮಿಕೊಳ್ಳಲಾದ 'ವ್ಯಸನಮುಕ್ತ ದಿನಾಚರಣೆ' ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಮಕ್ಕಳಲ್ಲಿ ಒಳ್ಳೆಯ ಹವ್ಯಾಸ ಬೆಳೆಯಬೇಕು. ನಮ್ಮಲ್ಲಿರುವ ಒಡವೆಯೆಂದರೆ ಜ್ಞಾನ ರತ್ನ. ಮಾನವೀಯತೆಯೇ ದೇವರು. ಇತರರಿಗೆ ಒಳಿತನ್ನು ಬಯಸಿ ಅವರ ಕಷ್ಟ ಕಾರ್ಪಣ್ಯಕ್ಕೆ ಸ್ಪಂದಿಸುವುದೇ ನಿಜವಾದ ಮನುಷ್ಯತ್ವ. ನಮ್ಮ ಮನಸ್ಸನ್ನು ಚಂಚಲಗೊಳಿಸದೆ ಒಳ್ಳೆಯ ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪದ್ಮಶ್ರೀ ಪುರಸ್ಕೃತ ಮನೋವೈದ್ಯಕೀಯ ತಜ್ಞರಾದ ಡಾ.ಸಿ.ಆರ್. ಚಂದ್ರಶೇಖರ್ ಅವರು ಮಾತನಾಡಿ, ಸಿಗರೇಟ್, ಗಾಂಜಾ, ಮದ್ಯಪಾನಕ್ಕೆ ದಾಸರಾದವರು ತಮ್ಮ ಮೈಮನಸ್ಸುಗಳನ್ನು ಹಾಳುಮಾಡಿಕೊಳ್ಳುವರು. ಮುಖ್ಯವಾಗಿ ಇವು ಮೆದುಳಿಗೆ ಹಾನಿ ಉಂಟು ಮಾಡುತ್ತದೆ. ಇವುಗಳಿಗೆ ದಾಸರಾದವರು ತಮ್ಮ ಕುಟುಂಬ, ಹಣ, ಮನಸ್ಸಿನ ದೇಹದ ಸ್ವಾಸ್ಥ?ಯ ಕಳೆದುಕೊಳ್ಳುವರು. ಅಲ್ಲದೆ ದೇಹದ ಮೇಲೆ ಮಾದಕ ವಸ್ತುಗಳು ವ್ಯತಿರಿಕ್ತ ಪರಿಣಾಮವನ್ನುಂಟು ಮಾಡುತ್ತವೆ. ಯುವ ಜನರು ಇವುಗಳ ಚಟಕ್ಕೆ ಬೀಳಬಾರದೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಗಾಂಧೀ ಸ್ಮಾರಕ ನಿಧಿ ಅಧ್ಯಕ್ಷರಾದ ನಾಡೋಜ ಡಾ. ವೂಡೇ. ಪಿ. ಕೃಷ್ಣ ಮಾತನಾಡಿ ಮದ್ಯ ಮಾರಾಟದಿಂದ ದೇಶ ಹಾಗೂ ರಾಜ್ಯಕ್ಕೆ ಕೋಟ್ಯಾಂತರ ರೂಗಳ ಆದಾಯ ಬರುತ್ತದೆ. ಜನರನ್ನು ಅದರಲ್ಲೂ ಯುವಜನರನ್ನು ವ್ಯಸನಮುಕ್ತಗೊಳಿಸುವುದು



ನಮ್ಮೆಲ್ಲರ ಗುರಿಯಾಗಬೇಕು. ದಿನದಲ್ಲಿ ಒಂದು ಗಂಟೆ ಇತರರ ಒಳಿತಿಗೆ ಶ್ರಮಿಸಿದರೆ ನಮಗೆ ನೆಮ್ಮದಿ ಆತ್ಮತೃಪ್ತಿ ಸಿಗುತ್ತದೆ. ಗಾಂಧೀಜಿ ಅಖಂಡ ಭಾರತ ಪ್ರವಾಸ ಮಾಡಿ ಬಡತನ, ವ್ಯಸನವನ್ನು ಮುಕ್ತವಾಗಿಸಲು ಹೋರಾಟ ನಡೆಸಿದರು. ಅದರಲ್ಲೂ ಗ್ರಾಮೀಣ ಜನರು ಮದ್ಯಪಾನಕ್ಕೆ ದಾಸರಾಗಿ ತಮ್ಮ ಹಾಗೂ ಕುಟುಂಬದವರ ಜೀವನವನ್ನು ಹಾಳು ಮಾಡುತ್ತಿರುವುದರ ವಿರದ್ಧ ದನಿ ಎತ್ತಿದರು. ಅವರು ವ್ಯಸನಮುಕ್ತ, ಕೋಮುಸೌಹಾರ್ದ, ಅಸ್ಪೃಶ್ಯತೆ ಮುಕ್ತ ಸಮಾಜವನ್ನು ಬಯಸಿ ಹೋರಾಟ ನಡೆಸಿದರು. ಯುವಜನರು ಮದ್ಯಪಾನ, ಮಾದಕ ವಸ್ತುಗಳನ್ನು ಸೇವಿಸದೆ ಸ್ವಾಸ್ಥ ಸಮಾಜ ನಿರ್ಮಿಸಿ, ಇತರರಿಗೂ ಈ ಕುರಿತು ತಿಳಿಸಬೇಕೆಂದರು. ಡಾ. ಸಿ.ಎನ್. ಚಂದ್ರಶೇಖರ್ ಬರೆದಿರುವ 'ಮದ್ಯಪಾನ ಆರೋಗ್ಯಕ್ಕೆ ಹಾನಿಕರ ಹೇಗೆ ಪರಿಹಾರ ಹೇಗೆ' ಕಿರು ಹೊತ್ತಿಗೆಯನ್ನು ಗಣ್ಯರು ಬಿಡುಗಡೆಗೊಳಿಸಿದರು. ವಿಕ್ಟೋರಿಯಾ ಆಸ್ಪತ್ರೆಯ ಮನೋವೈದ್ಯಕೀಯ ತಜ್ಞರಾದ ಡಾ.ಗುರುಪ್ರಸಾದ್, ಕರ್ನಾಟಕ ಗಾಂಧಿ ಸ್ಮಾರಕ ನಿಧಿ ನಿರ್ದೇಶಕರಾದ ಡಾ. ಶಿವರಾಜ್, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಉಪನಿರ್ದೇಶಕರಾದ ಬಿ.ಕೆ. ರಾಮಲಿಂಗಪ್ಪ, ಕರ್ನಾಟಕ ಮದ್ಯಪಾನ ಸಂಯಮ ಮಂಡಳಿ ಕಾರ್ಯದರ್ಶಿಗಳಾದ ಎಸ್.ಎನ್. ಮಹೇಶ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಸಂಜೆ ಟಿಪ್ಸ್

## ಸುರಕ್ಷಾ ಡಯಾಗ್ನೋಸ್ಟಿಕ್ ಲಿಮಿಟೆಡ್ ಸೆಬಿಯೊಂದಿಗೆ ಡಿಆರ್‌ಹೆಚ್‌ಪಿ ಸಲ್ಲಿಕೆ

ಕ್ರಿಸಿಲ್ ವರದಿಯ ಪ್ರಕಾರ 2023 ರ ಹಣಕಾಸು ವರ್ಷದ ಕಾರ್ಯಾಚರಣೆಯ ಆದಾಯದ ಪ್ರಕಾರ, ಪೂರ್ವ ಭಾರತದಲ್ಲಿ ಪ್ರಧಾನ ಕಛೇರಿ ಹೊಂದಿರುವ ಸುರಕ್ಷಾ ಡಯಾಗ್ನೋಸ್ಟಿಕ್ ಲಿಮಿಟೆಡ್, ಬಂಡವಾಳ ಮಾರುಕಟ್ಟೆ ನಿಯಂತ್ರಕ ಸೆಬಿಗೆ ಆರಂಭಿಕ ಸಾರ್ವಜನಿಕ ಕೊಡುಗೆ (ಐಪಿಒ) ಯ ಕರಡು ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಅನ್ನು ಸಲ್ಲಿಸಿದೆ. ಕರಡು ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ ಪ್ರಕಾರ, ಕೋಲ್ಕತ್ತಾದ ಪ್ರಧಾನ ಕಛೇರಿಯ ಕಂಪನಿಯ ಆರಂಭಿಕ ಸಾರ್ವಜನಿಕ ಕೊಡುಗೆಯು ಮಾರಾಟ ಮಾಡುವ ಷೇರುದಾರರಿಂದ 19,189,330 ಇಕ್ವಿಟಿ ಷೇರುಗಳ ಮಾರಾಟದ ಕೊಡುಗೆಯನ್ನು ಒಳಗೊಂಡಿದೆ. ಒಎಫ್‌ಎಸ್ ಹೂಡಿಕೆದಾರರ ಮಾರಾಟದ ಷೇರುದಾರರಾದ ಆರ್ಬಿಮೆಡ್ ಏಷ್ಯಾ ಃಃ ಮಾರಿಷಸ್ ಲಿಮಿಟೆಡ್ ರವರಿಂದ 10,660,737 ಇಕ್ವಿಟಿ ಷೇರುಗಳನ್ನು ,ಪ್ರವರ್ತಕರಾದ ಡಾ. ಸೋಮನಾಥ್ ಚಟರ್ಜಿ, ರಿತು ಮಿತ್ತಲ್ ಮತ್ತು ಸತೀಶ್ ಕುಮಾರ್ ವರ್ಮಾ ಅವರಿಂದ ತಲಾ 2,132,148 ವರೆಗೆ ಈಕ್ವಿಟಿ ಷೇರುಗಳನ್ನು , ವೈಯಕ್ತಿಕ ಮಾರಾಟದ ಷೇರುದಾರರಾದ ಮುನ್ನಾ ಲಾಲ್ ಕೇಜ್ರಿವಾಲ್ ಮತ್ತು ಸಂತೋಷ್ ಕುಮಾರ್ ಕೇಜ್ರಿವಾಲ್ ಅವರಿಂದ ಕ್ರಮವಾಗಿ 799,556 ಮತ್ತು 1,332,593 ಈಕ್ವಿಟಿ ಷೇರುಗಳನ್ನು ಮಾರಾಟಕ್ಕೆ ಇಡಲಾಗಿದೆ. ಮಾರಾಟ ಮಾಡುವ ಷೇರುದಾರರಿಂದ ಒಟ್ಟು 19,189,330 ಇಕ್ವಿಟಿ ಷೇರುಗಳ ಮಾರಾಟಕ್ಕಾಗಿ ಪ್ರಸ್ತಾಪವನ್ನು ಕೈಗೊಳ್ಳುವುದು ಮತ್ತು ಸ್ಟಾಕ್ ಎಕ್ಸ್ಚೇಂಜ್ ಗಳಲ್ಲಿ ಈಕ್ವಿಟಿ ಷೇರುಗಳನ್ನು ಪಟ್ಟಿ ಮಾಡುವ ಮೂಲಕ ಪ್ರಯೋಜನ ಪಡೆಯುವುದು ಈ ಕೊಡುಗೆಯ ಮೂಲ ಉದ್ದೇಶವಾಗಿದೆ. ಡಾ. ಸೋಮನಾಥ್ ಚಟರ್ಜಿ ಅವರು ದಿವಂಗತ ಕಿಶನ್ ಕುಮಾರ್ ಕೇಜ್ರಿವಾಲ್ ಅವರೊಂದಿಗೆ 1992 ರಲ್ಲಿ 'ಸುರಕ್ಷಾ' ಬ್ರಾಂಡ್ನಡಿಯಲ್ಲಿ ಕೋಲ್ಕತ್ತಾದಲ್ಲಿ ಸಂಪೂರ್ಣ ಸಮಗ್ರ ರೋಗನಿರ್ಣಯ ಕೇಂದ್ರವನ್ನು ನಿರ್ಮಿಸಿದರು. ಕಂಪನಿಯು ಪ್ರಸ್ತುತ ಜಂಟಿ ವ್ಯವಸ್ಥಾಪಕ ನಿರ್ದೇಶಕ ಡಾ. ಸೋಮನಾಥ್ ಚಟರ್ಜಿ ಮತ್ತು ಜಂಟಿ ವ್ಯವಸ್ಥಾಪಕ ರಿತು ಮಿತ್ತಲ್ , ನಿರ್ದೇಶಕರು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಈ ಕಂಪೆನಿಯ ಪ್ರವರ್ತಕರಾಗಿದ್ದು ಪ್ಯಾಥೋಲಜಿ ಮತ್ತು ರೇಡಿಯಾಲಜಿ ಪರೀಕ್ಷೆಗೆ ಒಂದು-ನಿಲುಗಡೆ ಸಂಯೋಜಿತ ಪರಿಹಾರವನ್ನು ನೀಡುತ್ತಾರೆ ಮತ್ತು ಅದರ ವ್ಯಾಪಕ ಕಾರ್ಯಾಚರಣೆಯ ಜಾಲದ ಮೂಲಕ ಅದರ ಗ್ರಾಹಕರಿಗೆ ವೈದ್ಯಕೀಯ ಸಮಾಲೋಚನಾ ಸೇವೆಗಳನ್ನು ಒದಗಿಸುತ್ತಾರೆ,

## ಹೆಸರು ಬೇಳೆ ತೊವ್ವೆ

ಪಾಕ ಶಾಲೆ



### ಬೇಕಿರುವ ಸಾಮಗ್ರಿ

1 ಕಪ್- ಹೆಸರು ಬೇಳೆ, ತೆಂಗಿನಕಾಯಿ ಹಾಲು-3 ಕಪ್, 2-3-ಒಣಮೆಣಸು, ಶುಂಠಿ-ಚಿಕ್ಕ ತುಂಡು, ಹಸಿ ಮೆಣಸಿನಕಾಯಿ - 1, ಈರುಳ್ಳಿ -1, ಉದ್ದಿನ ಬೇಳೆ- 1 ಟೀ ಸ್ಪೂನ್, ಸಾಸಿವೆ-1 ಟೀ ಸ್ಪೂನ್, 10ರಿಂದ 15 ಕರಿಬೇವಿನ ಎಲೆ, ಸ್ವಲ್ಪ ಕೊತ್ತಂಬರಿ ಸೊಪ್ಪು, ಎಣ್ಣೆ-1 ಚಮಚ, ರುಚಿಗೆ ತಕ್ಕಷ್ಟು-ಉಪ್ಪು.

### ಮಾಡುವ ವಿಧಾನ

ಗ್ಯಾಸ್ ಮೇಲೆ ಕುಕ್ಕರ್ ಇಟ್ಟು ಅದಕ್ಕೆ ಹೆಸರುಬೇಳೆ, ಶುಂಠಿ, ಹಸಿಮೆಣಸು, ಒಂದು ಲೋಟ ನೀರು ಹಾಕಿ 2 ವಿಷಲ್ ಕೂಗಿಸಿಕೊಳ್ಳಿ. ಇದು ತಣ್ಣಗಾದ ಮೇಲೆ ವಿಷಲ್ ತೆಗೆದು ರುಚಿಗೆ ತಕ್ಕಷ್ಟು ಉಪ್ಪು ಬೆರೆಸಿ ಇದಕ್ಕೆ ತೆಂಗಿನಕಾಯಿ ಹಾಲು ಸೇರಿಸಿ ಮಿಕ್ಸ್ ಮಾಡಿಕೊಳ್ಳಿ.

ನಂತರ ಗ್ಯಾಸ್ ಮೇಲೆ ಪ್ಯಾನ್ ಇಟ್ಟು ಅದು ಬಿಸಿಯಾದ ಮೇಲೆ ಅದಕ್ಕೆ ಎಣ್ಣೆ ಸಾಸಿವೆ, ಈರುಳ್ಳಿ, ಕರಿಬೇವು, ಉದ್ದಿನ ಬೇಳೆ, ಒಣಮೆಣಸು ಹಾಕಿ ಫ್ರೈ ಮಾಡಿದ ಒಗ್ಗರಣೆಯನ್ನು ಕುಕ್ಕರಿಗೆ ಹಾಕಿ ನಂತರ ಕೊತ್ತಂಬರಿ ಸೊಪ್ಪು ಸೇರಿಸಿದರೆ ಹೆಸರು ಬೇಳೆ ತೊವ್ವೆ ರೆಡಿ.

## ಸೋಲೋ ಟ್ರಿಪ್ ಮುಗಿಸಿ ಬಂದ ಐಶ್ವರ್ಯಾ ರೈ



ಪತಿ ಅಭಿಷೇಕ್ ಬಚ್ಚನ್ ಅವರೊಂದಿಗಿನ ದಾಂಪತ್ಯ ಬಿರುಕಿನ ವದಂತಿಗಳ ಮಧ್ಯೆಯೇ ನಟಿ ಐಶ್ವರ್ಯಾ ರೈ ಮತ್ತು ಮಗಳು ಆರಾಧ್ಯ ಬಚ್ಚನ್ ನ್ಯೂಯಾರ್ಕ್ನಲ್ಲಿ ವೆಕೇಷನ್ ಮುಗಿಸಿ ಮುಂಬೈಗೆ ವಾಪಾಸ್ಸಾಗಿದ್ದಾರೆ.

ಗುರುವಾರ ಮುಂಜಾನೆ ಮುಂಬೈ ನಟಿ ತನ್ನ ಮಗಳೊಂದಿಗೆ ನಗರಕ್ಕೆ ಬಂದಿಳಿದ ವಿಡಿಯೋವನ್ನು ಮುಂಬೈ ಮೂಲದ ಛಾಯಾಗ್ರಾಹಕರೊಬ್ಬರು ಇನ್ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ.

ಮುಂಬೈನಲ್ಲಿ ಪಾಪರಾಜಿಗಳಿಂದ ಸ್ವಾಗತಿಸಲ್ಪಟ್ಟ ತಾಯಿ-ಮಗಳು ತಮ್ಮ ವಾಹನದತ್ತ ಸಾಗುತ್ತಿರುವಾಗ ಕ್ಯಾಮರಾಗಳಿಗೆ ಮುಗುಳ್ನಕ್ಕರು. ಈಚೆಗೆ ಬಾಲಿವುಡ್ ಅಂಗಳದಲ್ಲಿ ಅಭಿಷೇಕ್ ಹಾಗೂ ಐಶ್ವರ್ಯಾ ರೈ ನಡುವಿನ ದಾಂಪತ್ಯದ ಬಿರುಕಿನ ಬಗ್ಗೆ ವದಂತಿ ಜೋರಾಗಿ ಹರಿದಾಡುತ್ತಿದೆ. ಈ ಜೋಡಿ ಮಧ್ಯೆ ಎಲ್ಲವೂ ಸರಿಯಿಲ್ಲ, ಇವರಿಬ್ಬರು ಡಿವೋರ್ಸ್ ಪಡೆಯಲಿದ್ದಾರೆ ಎಂಬ ಸುದ್ದಿಯಿದೆ. ಈ ವಿಚಾರ ಹೆಚ್ಚು ಮುನ್ನೆಲೆಗೆ ಬಂದಿದ್ದು ಜುಲೈ 12 ರಂದು ನಡೆದ ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ಅವರ ಮದುವೆಯಲ್ಲಿ ಅಭಿಷೇಕ್ ತನ್ನ ಪೋಷಕರ ಜತೆ ಫೋಟೋಗೆ ಪೋಸ್ ನೀಡಿದರೆ, ಐಶ್ವರ್ಯಾ ತನ್ನ ಮಗಳ ಜತೆ ಫೋಟೋ ತೆಗೆಸಿಕೊಂಡಿದ್ದಾರೆ. ಈ ಈವೆಂಟ್ಗೆ ಅಭಿಷೇಕ್ ಅವರು ತಂದೆ ಅಮಿತಾಭ್ ಮತ್ತು ತಾಯಿ ಜಯಾ ಬಚ್ಚನ್ ಮತ್ತು ಅವರ ಸಹೋದರಿ ಶ್ವೇತಾ ಬಚ್ಚನ್ ಅವರ ಕುಟುಂಬದೊಂದಿಗೆ ಈವೆಂಟ್ನಲ್ಲಿ ಭಾಗವಹಿಸಿದ್ದರು, ಆದರೆ ಐಶ್ವರ್ಯಾ ಆರಾಧ್ಯ ಅವರೊಂದಿಗೆ ಪ್ರತ್ಯೇಕವಾಗಿ ಆಗಮಿಸಿದರು. ಜುಲೈ 13 ರಂದು ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ಅವರ ಶುಭ ಆಶೀರ್ವಾದ ಸಮಾರಂಭದಲ್ಲಿ ಐಶ್ವರ್ಯಾ ಏಕಾಂಗಿಯಾಗಿ ಕಾಣಿಸಿಕೊಂಡಿದ್ದರು. ಆದರೆ, ಐಶ್ವರ್ಯ ಅಥವಾ ಅಭಿಷೇಕ್ ಊಹಾಪೋಹಗಳಿಗೆ ಸಂಬಂಧಿಸಿದಂತೆ ಯಾವುದೇ ಸಾರ್ವಜನಿಕ ಕಾಮೆಂಟ್ ಮಾಡಿಲ್ಲ.



## ಮಹಿಳೆಯರು, ಯುವಜನಾಂಗದಲ್ಲಿ ಹೆಚ್ಚುತ್ತಿರುವ ಶ್ವಾಸಕೋಶ ಕ್ಯಾನ್ಸರ್: ತಜ್ಞ ವೈದ್ಯರ ಕಳವಳ

ಹೆಲ್ತ್ ಟಿಪ್ಸ್

ಇತ್ತೀಚಿನ ದಿನಗಳಲ್ಲಿ ಭಾರತದಲ್ಲಿ ಮಹಿಳೆಯರು ಮತ್ತು ಯುವಪೀಳಿಗೆಯಲ್ಲಿ ಶ್ವಾಸಕೋಶ ಕ್ಯಾನ್ಸರ್ ಪ್ರಕರಣಗಳು ಹೆಚ್ಚಾಗುತ್ತಿರುವುದನ್ನು ಕಾಣುತ್ತಿದ್ದೇವೆ. ಇದಕ್ಕೆ ಪ್ರಮುಖ ಕಾರಣ ಮಹಿಳೆಯರು ಹೆಚ್ಚು ಹೆಚ್ಚು ಧೂಮಪಾನ ಮಾಡುತ್ತಿರುವುದು ಮತ್ತು ಯುವಪೀಳಿಗೆಯಲ್ಲಿ ಚಿಕ್ಕ ವಯಸ್ಸಿನಲ್ಲೇ ಧೂಮಪಾನದ ಗೀಳು ಹೆಚ್ಚಾಗುತ್ತಿರುವುದು. ಇದೇ ವೇಳೆ ಅತಿಯಾದ ಧೂಮಪಾನ ಮಾಡುವವರಿಂದ ಹೊರಬರುವ ಹೊಗೆಯಿಂದಾಗಿ ಮಾಲಿನ್ಯ ಮಟ್ಟ ಹೆಚ್ಚಾಗುತ್ತಿದೆ ಮತ್ತು ಧೂಮಪಾನ ಮಾಡದೇ ಇರುವ ಮತ್ತು ಕಡಿಮೆ ಧೂಮಪಾನ ಮಾಡುತ್ತಿರುವ ವ್ಯಕ್ತಿಗಳಲ್ಲಿಯೂ ಶ್ವಾಸಕೋಶ ಕ್ಯಾನ್ಸರ್ ಪ್ರಕರಣಗಳು ಹೆಚ್ಚಾಗುತ್ತಿವೆ. ವಿಶ್ವ ಶ್ವಾಸಕೋಶ ದಿನದ ಹಿನ್ನೆಲೆಯಲ್ಲಿ ಬೆಂಗಳೂರಿನ ಸಂಪ್ರದ ಮಲ್ಟಿ-ಸ್ಪೆಷಾಲಿಟಿ ಹಾಸ್ಪಿಟಲ್ ನ ವೈದ್ಯರು ಈ ಆತಂಕಕಾರಿ ಅಂಶಗಳ ಮೇಲೆ ಬೆಳಕು ಚೆಲ್ಲಿದ್ದಾರೆ.

ಸಂಪ್ರದ ಮಲ್ಟಿಸ್ಪೆಷಾಲಿಟಿ ಹಾಸ್ಪಿಟಲ್ ನ ಕನ್ಸಲ್ಟೆಂಟ್ ಮೆಡಿಕಲ್ ಆಂಕಾಲಾಜಿಸ್ಟ್ ಹೆಮಟಾಲಾಜಿಸ್ಟ್ ಡಾ.ರಾಧೇಶ್ಯಾಂ ನಾಯಕ್ ಅವರು ಮಾತನಾಡಿ, ''ಶೇ.80 ಕ್ಕಿಂತಲೂ ಅಧಿಕ ಶ್ವಾಸಕೋಶ ಕ್ಯಾನ್ಸರ್ ಪ್ರಕರಣಗಳು ಧೂಮಪಾನ ಮತ್ತು ತಂಬಾಕಿನ ಇತರ ಮಾದರಿಯ ಬಳಕೆಯಿಂದ ಬರುತ್ತಿವೆ. ಧೂಮಪಾನದ ಅವಧಿ ಮತ್ತು ದಿನಕ್ಕೆ ಒಬ್ಬರು ಸೇದುವ ಸಿಗರೇಟುಗಳ ಸಂಖ್ಯೆಯೊಂದಿಗೆ ಅಪಾಯದ ಮಟ್ಟವೂ ಹೆಚ್ಚಾಗುತ್ತದೆ. ಚಿಕ್ಕ ವಯಸ್ಸಿನಲ್ಲೇ ಧೂಮಪಾನ ಮಾಡುವುದು ಅಪಾಯವನ್ನು ಗಣನೀಯ ಪ್ರಮಾಣದಲ್ಲಿ ಹೆಚ್ಚಿಸುತ್ತದೆ. ಧೂಮಪಾನದ ಜೊತೆಗೆ ಕಲ್ನಾರಿನಂತಹ ಕಾರ್ಸಿನೋಜೆನ್ ಗಳಿಗೆ ಒಡ್ಡಿಕೊಳ್ಳುವುದರಿಂದ ಶ್ವಾಸಕೋಶದ ಕ್ಯಾನ್ಸರ್ ಗಂಭೀರ ಸ್ವರೂಪಕ್ಕೆ ತಿರುಗಿ ಅಪಾಯವನ್ನು ಹಲವಾರು ಪಟ್ಟು ಹೆಚ್ಚು ಮಾಡುತ್ತದೆ. ಪ್ಯಾಸಿವ್ ಸ್ಮೋಕಿಂಗ್ ಶ್ವಾಸಕೋಶದ ಕ್ಯಾನ್ಸರ್ ಗೆ ಕಾರಣವಾಗುತ್ತದೆ. ಇದರಿಂದ ಬರುವ ಕ್ಯಾನ್ಸರ್ ನ ಪ್ರಮಾಣ ಶೇ.5 ರಷ್ಟಿರುತ್ತದೆ. ಇದಲ್ಲದೇ ವಾಹನ ದಟ್ಟಣೆ ಮತ್ತು ಮನೆಯ ಅಡುಗೆ ಕೋಣೆಯಲ್ಲಿ ಬಳಸುವ ಉರುವಲು ಅಥವಾ ಇಂಧನಗಳನ್ನು ಸುಡುವುದರಿಂದ ಉಂಟಾಗುವ ಮಾಲಿನ್ಯದಿಂದ ಧೂಮಪಾನ ಮಾಡದಿದ್ದವರಲ್ಲಿಯೂ ಶ್ವಾಸಕೋಶದ ಕ್ಯಾನ್ಸರ್ ಉಂಟಾಗುತ್ತದೆ'' ಎಂದು ತಿಳಿಸಿದರು.

ಪ್ರತಿ 1,00,000 ಜನರಲ್ಲಿ 5.6 ಜನರಲ್ಲಿ ಶ್ವಾಸಕೋಶ ಕ್ಯಾನ್ಸರ್ ಪ್ರಕರಣಗಳು ದಾಖಲಾಗುತ್ತಿವೆ. ಒಟ್ಟಾರೆ ಕ್ಯಾನ್ಸರ್ ಪ್ರಕರಣಗಳಲ್ಲಿ ಶೇ.5.9 ರಷ್ಟು ಮತ್ತು ಕ್ಯಾನ್ಸರ್ ಸಂಬಂಧಿ ಮರಣ ಪ್ರಮಾಣದಲ್ಲಿ ಶೇ.8 ರಷ್ಟು. ಶ್ವಾಸಕೋಶ ಕ್ಯಾನ್ಸರ್ ಜೀವನದ 4 ಮತ್ತು 5 ನೇ ದಶಕದ ಸಂದರ್ಭದಲ್ಲಿ ಕಾಣಿಸಿಕೊಳ್ಳುತ್ತದೆ. ಈ ಪೈಕಿ ಅತ್ಯಧಿಕ ಶ್ವಾಸಕೋಶ ಕ್ಯಾನ್ಸರ್ ಕಂಡುಬರುವುದು 55 ರಿಂದ 64 ವರ್ಷದ ಜನರಲ್ಲಿ. ಹೀಗೆ ಶ್ವಾಸಕೋಶ ಕ್ಯಾನ್ಸರ್ ಬಂದ ವ್ಯಕ್ತಿಗಳು 5 ವರ್ಷ ಅಥವಾ ಅದಕ್ಕಿಂತ ಹೆಚ್ಚು ವರ್ಷದವರೆಗೆ ಬದುಕಬಲ್ಲರು. ಕೇವಲ ಶೇ.10-15 ರಷ್ಟು ರೋಗಿಗಳು 10 ವರ್ಷ ಅಥವಾ ಅದಕ್ಕಿಂತ ಹೆಚ್ಚು ವರ್ಷ ಬದುಕಬಲ್ಲರು. ಆರಂಭಿಕ ಹಂತದಲ್ಲಿಯೇ ರೋಗ ಪತ್ತೆ ಮಾಡಿ ಸೂಕ್ತ ಚಿಕಿತ್ಸೆ ಪಡೆದುಕೊಂಡಲ್ಲಿ ಮರಣ ಪ್ರಮಾಣವನ್ನು ಕಡಿಮೆ ಮಾಡಬಹುದಾಗಿದೆ.

ಸಂಪ್ರದ ಮಲ್ಟಿ ಸ್ಪೆಷಾಲಿಟಿ ಹಾಸ್ಪಿಟಲ್ ನ ಪ್ರಿವೆಂಟಿವ್ ಆಂಕಾಲಾಜಿಸ್ಟ್ ಡಾ.ವಿನೋದ್ ಕೆ.ರಮಣಿ ಅವರು ಮಾತನಾಡಿ, ''ಬಹುತೇಕ ಶ್ವಾಸಕೋಶ ಕ್ಯಾನ್ಸರ್ ಪ್ರಕರಣಗಳನ್ನು ಃಃಃ ಮತ್ತು ಃಗಿ ನೇ ಹಂತ ತಲುಪಿದ್ದಾಗ ಪತ್ತೆ ಮಾಡಲಾಗುತ್ತದೆ. ಆ ವೇಳೆಯಲ್ಲಿ ಕ್ಯಾನ್ಸರ್ ರೋಗವು ಗಂಭೀರ ಸ್ವರೂಪಕ್ಕೆ ತಿರುಗಿರುತ್ತದೆ. ಇನ್ನು ಃ ಮತ್ತು ಃ ಃ ನೇ ಹಂತದಲ್ಲಿದ್ದಾಗ ರೋಗ ಪತ್ತೆ ಮಾಡುವವರ ಸಂಖ್ಯೆ ಕೇವಲ ಶೇ.20-30 ರಷ್ಟು. ಇದಕ್ಕೆ ಹಲವಾರು ಕಾರಣಗಳಿವೆ. ಧೂಮಪಾನ ಮಾಡುವವರ ಪ್ರಮಾಣವು ದೀರ್ಘಕಾಲದ ಬ್ರಾಂಕೈಟಿಸ್ ಅನ್ನು ಹೊಂದಿರುತ್ತದೆ. ಇದನ್ನು ಕ್ಯಾನ್ಸರ್ ನಿಂದ ಪ್ರತ್ಯೇಕಿಸಲು ಕಷ್ಟಸಾಧ್ಯವಾಗುತ್ತದೆ. ಇದರಿಂದಾಗಿ ಅವರು ವೈದ್ಯರನ್ನು ತಡವಾಗಿ ಭೇಟಿ ಮಾಡಿ ಚಿಕಿತ್ಸೆ ಮೊರೆಹೋಗುತ್ತಾರೆ. ಶ್ವಾಸಕೋಶದ ಕ್ಯಾನ್ಸರ್ ನ ಅನೇಕ ಪ್ರಕರಣಗಳನ್ನು ಆರಂಭದಲ್ಲಿ ಕ್ಷಯರೋಗವಿರಬಹುದು ಎಂದು ತಪ್ಪಾಗಿ ತಿಳಿದುಕೊಳ್ಳಲಾಗುತ್ತದೆ ಮತ್ತು ನಿಯಮಿತವಾಗಿ ಕ್ಯಾನ್ಸರ್ ರೋಗ ಪತ್ತೆ ತಪಾಸಣೆ ಅಥವಾ ಕ್ಯಾನ್ಸರ್ ತಪಾಸಣೆಗೆ ಒಳಗಾಗಲು ಭಾರತೀಯರು ಹಿಂದೇಟು ಹಾಕುತ್ತಾರೆ'' ಎಂದು ತಿಳಿಸಿದರು.

## ಮಕ್ಕಳ ಜೊತೆ ರಾಧಿಕಾ ಪಂಡಿತ್ ವೆಕೇಷನ್- ಯಶ್ ಎಲ್ಲಿ ಎಂದ ಫ್ಯಾನ್ಸ್

ಸ್ಯಾಂಡಲ್‌ವುಡ್ ನಟಿ ರಾಧಿಕಾ ಪಂಡಿತ್ ಇದೀಗ ಮಕ್ಕಳ ಜೊತೆ ವೆಕೇಷನ್‌ನಲ್ಲಿ ಸಖತ್ ಆಗಿ ಎಂಜಾಯ್ ಮಾಡಿದ್ದಾರೆ. ಪ್ರವಾಸದ ಸುಂದರ ಕ್ಷಣಗಳ ಫೋಟೋಗಳನ್ನು ನಟಿ ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಕುಟುಂಬದ ಜೊತೆ ವಿವಿಧ ಸ್ಥಳಗಳಿಗೆ ಭೇಟಿ ಕೊಟ್ಟು ರಾಧಿಕಾ ಫೋಟೋ ಕ್ಲಿಕ್ಕಿಸಿಕೊಂಡಿದ್ದಾರೆ. ನೀಲಿ ಬಣ್ಣದ ಡ್ರೆಸ್ ಧರಿಸಿ ರಾಧಿಕಾ ಸ್ಟೈಲೀಶ್ ಆಗಿ ಕಾಣಿಸಿಕೊಂಡಿದ್ದಾರೆ. ಆದರೆ ಯಶ್ ಮಾತ್ರ ಕಾಣಿಸಿಕೊಂಡಿಲ್ಲ. ಈ ಫೋಟೋ ನೋಡಿ ಯಶ್ ಎಲ್ಲಿ ಎಂದು ನಟಿಗೆ ಅಭಿಮಾನಿಗಳು ಪ್ರಶ್ನಿಸಿದ್ದಾರೆ. ಅಂದಹಾಗೆ, ಇತ್ತೀಚೆಗೆ ಅಂಬಾನಿ ಮನೆ ಮಗನ ಮದುವೆಗೆ ಯಶ್ ದಂಪತಿ ಹಾಜರಿ ಹಾಕಿದ್ದರು. ಈ ವೇಳೆ, ಯಶ್ ಹೊಸ ಲುಕ್ ಭಾರೀ ವೈರಲ್ ಆಗಿತ್ತು. ಅದರಂತೆ ರಾಧಿಕಾ ಪಂಡಿತ್, ಸೀರೆಯುಟ್ಟು ಸಿಂಪಲ್ ಆಗಿ ಭಾಗಿಯಾಗಿದ್ದು ಅಭಿಮಾನಿಗಳ ಮೆಚ್ಚುಗೆಗೆ ಕಾರಣವಾಗಿತ್ತು.

ಇನ್ನೂ ಕಡೆಯದಾಗಿ 'ಆದಿ ಲಕ್ಷ್ಮಿ ಪುರಾಣ' ಎಂಬ ಸಿನಿಮಾದಲ್ಲಿ ರಾಧಿಕಾ ನಟಿಸಿದ್ದರು. ಮತ್ತೆ ಅವರು ನಟನೆಗೆ ಕಮ್ ಬ್ಯಾಕ್ ಎಂದು ಫ್ಯಾನ್ಸ್ ಎದುರು ನೋಡ್ತಿದ್ದಾರೆ. ಒಳ್ಳೆಯ ಕಥೆ ಸಿಕ್ಕರೆ ಖಂಡಿತಾ ನಟಿಸುತ್ತೇನೆ ಎಂದು ನಟಿ ಕೂಡ ಭರವಸೆ ನೀಡಿದ್ದಾರೆ. ಹಾಗಾದ್ರೆ ಮುಂದಿನ ದಿನಗಳಲ್ಲಿ ಗುಡ್ ನ್ಯೂಸ್ ಸಿಗುತ್ತಾ ಕಾದುನೋಡಬೇಕಿದೆ.



## ಆಯ್ಲಿ ಸ್ಕಿನ್‌ಗೆ ಟಿಪ್ಸ್

ಬ್ಯೂಟಿ ಟಿಪ್ಸ್



ಕೆಲ ಮಹಿಳೆಯರ ಚರ್ಮ ತುಂಬಾ ಎಣ್ಣೆಯುಕ್ತವಾಗಿರುತ್ತದೆ. ಆಯ್ಲಿ ಸ್ಕಿನ್ ನಿಂದಾಗಿ ಮುಖದ ಮೇಲೆ ಮೊಡವೆ ಕಾಣಿಸಿಕೊಳ್ಳುತ್ತದೆ. ಚರ್ಮ ಜಿಗುಟಾಗಿ ಮುಖ ಕೆಟ್ಟದಾಗಿ ಕಾಣುತ್ತದೆ. ಹಾರ್ಮೋನ್ ಬದಲಾವಣೆ ಹಾಗೂ ಬಿಸಿಲಿನಿಂದಾಗಿ ಚರ್ಮ ಆಯ್ಲಿಯಾಗುತ್ತದೆ. ಆಯ್ಲಿ ಸ್ಕಿನ್ ಮಹಿಳೆಯರು ಮಾಡುವ ಕೆಲವೊಂದು ತಪ್ಪಿನಿಂದಾಗಿ ಮತ್ತಷ್ಟು ತೊಂದರೆ ಅನುಭವಿಸಬೇಕಾಗುತ್ತದೆ. ಚರ್ಮ ಆಯ್ಲಿಯಾಗಿದೆ ಎನ್ನುವ ಕಾರಣಕ್ಕೆ ಕೆಲ ಮಹಿಳೆಯರು ಪದೇ ಪದೇ ಮುಖ ತೊಳೆಯುತ್ತಾರೆ. ಇದ್ರಿಂದ ಸಮಸ್ಯೆ ಕಡಿಮೆಯಾಗುವ ಬದಲು ಹೆಚ್ಚಾಗುತ್ತದೆ. ಚರ್ಮದಲ್ಲಿರುವ ನೈಸರ್ಗಿಕ ಎಣ್ಣೆ ಪ್ರಮಾಣ ಕಡಿಮೆಯಾಗಿ ಚರ್ಮ ಒಣಗಲು ಶುರುವಾಗುತ್ತದೆ. ಆಯ್ಲಿ ಸ್ಕಿನ್ ಹೊಂದಿದವರು ಮಾಯಿಶ್ಚರೈಸರ್ ಕ್ರೀಂ ಬಳಸಬಾರದು. ಇದು ಚರ್ಮ ಮತ್ತಷ್ಟು ಆಯ್ಲಿಯಾಗಲು ಕಾರಣವಾಗುತ್ತದೆ. ಚರ್ಮ ತೇವಾಂಶ ಕಳೆದುಕೊಂಡ ಸಂದರ್ಭದಲ್ಲಿಯೂ ಚರ್ಮದಿಂದ ಎಣ್ಣೆ ಹೊರಬರುತ್ತದೆ. ಚರ್ಮವನ್ನು ತೇವಾಂಶಯುಕ್ತವಾಗಿಡುವ ಕ್ರೀಂ ಅವಶ್ಯವಾಗಿ ಹಚ್ಚಿ. ಎಣ್ಣೆಯುಕ್ತ ಚರ್ಮ ಹೊಂದಿದವರು ಅದಕ್ಕೆ ಸೂಕ್ತವೆನಿಸುವ ಫೇಸ್ ವಾಶ್ ಬಳಸಬೇಕು. ಕೆಲ ಫೇಸ್ ವಾಶ್ ನಲ್ಲಿ ಗ್ಲೈಕೊಲಿಕ್ ಆಮ್ಲ ಅಥವಾ ಸ್ಯಾಲಿಸಿಲಿಕ್ ಆಮ್ಲ ಹೆಚ್ಚಿನ ಪ್ರಮಾಣದಲ್ಲಿದ್ದು, ಅದು ಸ್ಕಿನ್ ಹಾಳು ಮಾಡುತ್ತದೆ.

## ರಾಗಿ ಕಣದಲ್ಲಿ ಕೈಮಗ್ಗ ದಿನ

ರಾಗಿ ಕಣ, ಜನಪ್ರಿಯ ಸಾಂಸ್ಕೃತಿಕ ಕೇಂದ್ರ, ವಾರಾಂತ್ಯದ ಸಂತೆ ಮತ್ತು ಚರ್ಚಾ ವೇದಿಕೆ, 4ನೇ ಆಗಸ್ಟ್ 2024 ರಂದು ಕೈಮಗ್ಗ ದಿನವನ್ನು ಆಚರಿಸುತ್ತದೆ. ನೇಕಾರರೊಂದಿಗೆ ನೇರವಾಗಿ ಸಂವಹನ ನಡೆಸಲು ಮತ್ತು ಅವರ ಕೆಲಸದ ಬಗ್ಗೆ ತಿಳಿದುಕೊಳ್ಳಲು ಒಂದು ಅನನ್ಯ ಅವಕಾಶವಿದೆ. ಸಂತೆಯ ಸಾಮಾನ್ಯ ಕೊಡುಗೆಗಳ ಹೊರತಾಗಿ ವೈವಿಧ್ಯಮಯ ಕೈಮಗ್ಗ ಬಟ್ಟೆಗಳ ಪ್ರದರ್ಶನ ಮತ್ತು ಮಾರಾಟದ ಜೊತೆಗೆ.

ಕೈಯಿಂದ ತಯಾರಿಸಿದ ವಸ್ತುಗಳ ವಲಯವು ಭಾರತದಲ್ಲಿನ ಜೀವನೋಪಾಯದ ದೊಡ್ಡ ಮೂಲಗಳಲ್ಲಿ ಒಂದಾಗಿದೆ.

ಅದಲ್ಲದೆ, ಇದು ಹೆಚ್ಚು ಸಮರ್ಥನೀಯ ಉತ್ಪಾದನಾ ಸಾಧನವಾಗಿದ್ದು, ಹವಾಮಾನ ಬದಲಾವಣೆಯಿಂದ ಎದುರಾಗುವ ಸವಾಲುಗಳನ್ನು ಎದುರಿಸಲು ಹೆಚ್ಚಿನ ಅಳವಡಿಕೆಯ ಅಗತ್ಯವಿದೆ ಮತ್ತು ಭೂಮಿಯ ಸ್ನೇಹಿ ಪರ್ಯಾಯಗಳಿಗಾಗಿ ನಮ್ಮ ಹುಡುಕಾಟ. ಆದಾಗ್ಯೂ, ಅದರ ಆಕರ್ಷಣೆ ಮತ್ತು ಅಳವಡಿಕೆಯನ್ನು ಬೆಳೆಸಲುಪ್ರಯತ್ನಿಸುವಾಗ ವಲಯ ಮತ್ತು ಅದರ ಅಭ್ಯಾಸಕಾರರು ಎದುರಿಸುವ ಹಲವು ಸವಾಲುಗಳಿವೆ. ಈ ಕೈಮಗ್ಗ ದಿನದಂದು, ರಾಗಿ ಕಣವು ಬೆಂಗಳೂರಿನ ಜನರು ತಮ್ಮ ಪ್ರಯಾಣದ ಬಗ್ಗೆ ನೇರವಾಗಿ ಅಭ್ಯಾಸ ಮಾಡುವವರಿಂದ ಕಲಿಯುವ ಅವಕಾಶವನ್ನು ಒದಗಿಸುತ್ತದೆ.

ಚಟುವಟಿಕೆಗಳು ಆಗಸ್ಟ್ 4, 2024 ರಂದು ಬೆಳಿಗ್ಗೆ 11 ರಿಂದ ರಾಗಿ ಕಣ ಸಂತೆಯಲ್ಲಿ ಕೈಮಗ್ಗ ದಿನಾಚರಣೆಯನ್ನು ಪ್ರಾರಂಭಿಸಲಾಗುವುದು.

ಗಜೇಂದ್ರಗಡದ ನೇಕಾರರಾದ ಜ್ಯೋತಿಯವರ ವಚನಗಳ ಪಠಣದೊಂದಿಗೆ ಕಾರ್ಯಕ್ರಮವು ಪ್ರಾರಂಭವಾಗುತ್ತದೆ. ಇದನ್ನು ಅನುಸರಿಸಿ ಕೈಮಗ್ಗಕ್ಕೆ ಜೀವ ತುಂಬುವ ನೇಕಾರರೊಂದಿಗೆ ಸಂವಹನ ನಡೆಸಲು ಅವಕಾಶ ದೊರೆಯುತ್ತದೆ: ಮಹಾಲಿಂಗಪುರದಿಂದ ಬಸವರಾಜ ಹಟ್ಟಿ ಗೋಪಾಲ್ ಕುದುರೆಮೋಟ್ ಗಜೇಂದ್ರಗಡದಿಂದ ಜ್ಯೋತಿ ಕಿನ್ನಾಳದ ಲಿಂಗರಾಜ್ ಈ ದಿನದಂದು ಬ್ಲಾಕ್ ಪ್ರಿಂಟಿಂಗ್ ಕಾರ್ಯಾಗಾರವನ್ನು ನಡೆಸಲಾಗುವುದು, ಸಂದರ್ಶಕರು ತಮ್ಮ ಸೃಜನಶೀಲತೆಯನ್ನು ಪ್ರದರ್ಶಿಸಲು ಮತ್ತು ಅವರ ರಚನೆಗಳನ್ನು ಮನೆಗೆ ತೆಗೆದುಕೊಂಡು ಹೋಗಲು ಆಕರ್ಷಕ ಬ್ಲಾಕ್‌ಗಳನ್ನು ಬಳಸಲು ಅವಕಾಶವನ್ನು ನೀಡುತ್ತದೆ!ಅಂಬರ ಚರಕವನ್ನು ಬಳಸಿ ಕೈ ನೂಲುವುದು ಮತ್ತು ಕೈ ನೇಯ್ಗೆ ಪ್ರಾತ್ಯಕ್ಷಿಕೆಗಳು ದಿನವಿಡೀ ನಡೆಯುತ್ತವೆ.




ಪ್ರದರ್ಶನ ಮತ್ತು ಮಾರಾಟ ಕೈಮಗ್ಗ ದಿನಾಚರಣೆಯಲ್ಲಿ ದೇಸಿ, ಇಂಡು ಸಿಲ್ಕ್ಸ್, ಖಾನ ವೀವ್ಸ್, ಮಾಯಾ, ನೇಚರ್ ಆಲಿ, ಸರ್ವೋದಯ ಖಾದಿ, ಸೋಮದ ಖಾದಿ, ತರಿವರ್ಣ, ಟಿಂಬಕ್ಟು, ತುಲಾ ಮತ್ತು ಇತರ ಕೈಮಗ್ಗದ ಬಟ್ಟೆ ಮತ್ತು ಪ್ರದರ್ಶನ ಮತ್ತು ಮಾರಾಟದ ಉಡುಪುಗಳನ್ನು ಪ್ರದರ್ಶಿಸಲಾಗುತ್ತದೆ. ಭೇಟಿ ನೀಡುವ ನೇಕಾರರು ನೇರವಾಗಿ ತಂದ ಉತ್ಪನ್ನಗಳ ವಿಶೇಷ ಆಕರ್ಷಣೆಯಾಗಿದೆ:

**ಗದಗದಿಂದ ಬೆಡ್ಶೀಟ್ ಮತ್ತು ಕೋಟ್ ಬಟ್ಟೆ:** ಕಿನ್ನಾಲ್‌ನಿಂದ ಟವೆಲ್‌ಗಳು ಮತ್ತು ಕಾರ್ಪೆಟ್ ಗಳೂ ಮಹಾಲಿಂಗಪುರದಿಂದ 90 ಅಗಲದ ಬಟ್ಟೆ ಯಾದಗಿರಿಯಿಂದ ದುಪಟ್ಟಾ ಮತ್ತು ಕಾಟನ್ ಸೀರೆಗಳು ಎಂದಿನಂತೆ, ನೈಸರ್ಗಿಕವಾಗಿ ಬೆಳೆದ ದಿನಸಿ ಮತ್ತು ತರಕಾರಿಗಳು, ಕರಕುಶಲ ವಸ್ತುಗಳು, ಆಹಾರ ವಸ್ತುಗಳು, ಪುಸ್ತಕಗಳು ಮತ್ತು ಹೆಚ್ಚಿನವುಗಳನ್ನು ನೇರವಾಗಿ ಉತ್ಪಾದಕರಿಂದ ಮಾರಾಟ ಮಾಡಲಾಗುತ್ತದೆ. ಇದರ ಜೊತೆಗೆ, ಪ್ರವಾಸಿಗರಿಗೆ ಆನಂದಿಸಲು ತುಟಿ ಸ್ನ್ಯಾಕಿಂಗ್ ತಿಂಡಿಗಳು ಮತ್ತು ಮಧ್ಯಾಹ್ನದ ಊಟ ಲಭ್ಯವಿರುತ್ತದೆ!

ರಾಗಿ ಕಣವು ಗ್ರಾಮ ಸೇವಾ ಸಂಘ ಮತ್ತು ಹುಲ್ಕುಲ್ ಮುನಿಸ್ವಾಮಪ್ಪ ಮತ್ತು ಮುನಿವೆಂಕಟಮ್ಮ ಚಾರಿಟೇಬಲ್‌ಟ್ರಸ್ಟ್ನ ಜಂಟಿ ಉಪಕ್ರಮವಾಗಿದೆ. ಕಳೆದ ಏಳು ವರ್ಷಗಳಿಂದ ಯಶಸ್ವಿಯಾಗಿ ನಡೆಸುತ್ತಿರುವ ರಾಗಿ ಕಾನವು ಕುಂಬಾರರು, ನೇಕಾರರು, ಕೃಷಿಕರು ಅಥವಾ ಇತರ ನುರಿತ ಗ್ರಾಮೀಣ ಕುಶಲಕರ್ಮಿಗಳು ಕೈಯಿಂದ ಮಾಡಿದಉದ್ಯೋಗಗಳಲ್ಲಿ ತೊಡಗಿರುವವರಿಗೆ ಸುಸ್ಥಿರ ಮತ್ತು ಯೋಗ್ಯವಾದ ಜೀವನೋಪಾಯವನ್ನು ಒದಗಿಸುವ ಗುರಿಯನ್ನು ಹೊಂದಿದೆ. ಸಂತೆ ಸಮಯ: ಬೆಳಿಗ್ಗೆ 10 ರಿಂದ ಸಂಜೆ 4 ರವರೆಗೆ ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಿ 9972676426

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

**ಮೇಷ:** ಆರ್ಥಿಕ ಅನುಕೂಲ, ರತ್ನಾಭರಣ ಖರೀದಿ, ನೇರ ಮಾತುಗಳು, ತಾಯಿಯಿಂದ ಸಹಕಾರ

**ವೃಷಭ:** ಸ್ಥಿರಾಸ್ತಿ ವಾಹನಕ್ಕಾಗಿ ಖರ್ಚು, ದೂರ ಪ್ರಯಾಣ, ಧಾರ್ಮಿಕ ಕಾರ್ಯಗಳು, ವಿದ್ಯಾಭ್ಯಾಸದಲ್ಲಿ ಪ್ರಗತಿ

**ಮಿಥುನ:** ಪ್ರಯಾಣದಲ್ಲಿ ಯಶಸ್ಸು, ಸರ್ಕಾರಿ ಕಾರ್ಯಜಯ, ಅನಿರೀಕ್ಷಿತ ಲಾಭ, ಆರ್ಥಿಕ ಅನುಕೂಲ

**ಕಟಕ:** ಆರ್ಥಿಕ ಅನುಕೂಲ ಮತ್ತು ಲಾಭ, ಉದ್ಯೋಗ ಒತ್ತಡಗಳು, ಗೌರವಕ್ಕೆ ಧಕ್ಕೆ, ಚಿಂತೆ, ಕುಟುಂಬದಿಂದ ಸಹಕಾರ

**ಸಿಂಹ:** ಅದೃಷ್ಟದ ದಿವಸ, ವ್ಯಾಪಾರ ವ್ಯವಹಾರದಲ್ಲಿ ಯಶಸ್ಸು, ಪ್ರಯಾಣದಲ್ಲಿ ಅಡೆತಡೆ, ಆರೋಗ್ಯ ಚೇತರಿಕೆ

**ಕನ್ಯಾ:** ಅನಿರೀಕ್ಷಿತ ದೂರ ಪ್ರಯಾಣ, ಅವಘಡಗಳು ಮತ್ತು ಅಪಘಾತಗಳು, ಲಾಭದಲ್ಲಿ ಹಿನ್ನಡೆ, ಅಪವಾದ ಮತ್ತು ಅವಮಾನ

**ತುಲಾ:** ಸಂಶಯಗಳು ಮತ್ತು ಗೊಂದಲ, ಅನಿರೀಕ್ಷಿತ ಅವಕಾಶ, ಆತ್ಮ ಸಂಕಟಗಳು, ಗುಪ್ತ ಕಾರ್ಯ ಯತ್ನ

**ವೃಶ್ಚಿಕ:** ಉದ್ಯೋಗ ಅನುಕೂಲ, ಅಧಿಕಾರಿಗಳಿಂದ ಪ್ರಶಂಸೆ, ಶತ್ರು ನಾಶ, ಅಪರಾಧದಿಂದ ಮುಕ್ತಿ

**ಧನಸ್ಸು:** ಪ್ರೀತಿ ಪ್ರೇಮದಲ್ಲಿ ಸಂಶಯ, ಭಾವನೆಗಳ ತೊಳಲಾಟ, ಮಾಟ ಮಂತ್ರ ಪ್ರಯತ್ನ, ತಂದೆಯೊಂದಿಗೆ ಶತ್ರುತ್ವ

**ಮಕರ:** ಗುಪ್ತ ವಿಷಯಗಳಿಂದ ತೊಂದರೆ, ಅಧರ್ಮದ ಕೆಲಸ, ತಾಯಿಯ ಆರೋಗ್ಯ ವ್ಯತ್ಯಾಸ, ದಾಂಪತ್ಯ ಸೌಖ್ಯದಿಂದ ದೂರ

**ಕುಂಭ:** ಪ್ರೀತಿ ಪ್ರೇಮದಲ್ಲಿ ಸೋಲು, ಅಧರ್ಮದ ಸಂಪಾದನೆಯಲ್ಲಿ ನಷ್ಟ, ಗುಪ್ತ ಆಸೆಗಳು, ಆರ್ಥಿಕ ಅಲ್ಪ ಚೇತರಿಕೆ

**ಮೀನ:** ಸಾಲದ ಚಿಂತೆ, ಶತ್ರು ಕಾಟಗಳು, ಆರ್ಥಿಕ ಮೋಸ, ಮಾತಿನಿಂದ ತೊಂದರೆ.

## ಅಂತರರಾಷ್ಟ್ರೀಯ ಬಿಯರ್ ದಿನ

ಬಿಯರ್ ಜಗತ್ತು ತಿಳಿದಿರುವ ಅತ್ಯಂತ ಹಳೆಯ ಪಾನೀಯಗಳಲ್ಲಿ ಒಂದಾಗಿದೆ. ಅಂತರಾಷ್ಟ್ರೀಯ ಬಿಯರ್ ದಿನವು ಪ್ರಪಂಚದಾದ್ಯಂತದ ಅಭಿಮಾನಿಗಳಿಗೆ ಆಗಸ್ಟ್ನಲ್ಲಿ ಮೊದಲ ಶುಕ್ರವಾರದಂದು ಸುತ್ತಲು ಕೇವಲ ಒಂದು ಕ್ಷಮೆಯನ್ನು ನೀಡುತ್ತದೆ. ಬಿಯರ್ ಸಾಮಾನ್ಯ ಕೆಲಸ ಮಾಡುವ ಪುರುಷ ಅಥವಾ ಮಹಿಳೆಗೆ ಆಯ್ಕೆಯ ಪಾನೀಯವಾಗಿ ಖ್ಯಾತಿಯನ್ನು ಹೊಂದಿದೆ. ಇದು ಶೀತ ಮತ್ತು ನೊರೆಯಿಂದ ಅಥವಾ ಬಲವಾಗಿ ಬಡಿಸಿದಾಗ ಮತ್ತು ನಾವು ಪ್ರತಿ ವರ್ಷ ಆಗಸ್ಟ್ನಲ್ಲಿ ಮೊದಲ ಶುಕ್ರವಾರದಂದು ಅಂತರರಾಷ್ಟ್ರೀಯ ಬಿಯರ್ ದಿನವನ್ನು ಆಚರಿಸುತ್ತೇವೆ - ಆಗಸ್ಟ್ 2, ಬೇಸಿಗೆಯ ಅಂತ್ಯವು ದೊಡ್ಡದಾಗಲು ಪ್ರಾರಂಭಿಸಿದಾಗ. ಮತ್ತೊಂದು ವಾರಾಂತ್ಯದ ಆರಂಭವು ನಮ್ಮ ಕೆಲಸವನ್ನು ಬದಿಗಿಟ್ಟು, ಭಿನ್ನಾಭಿಪ್ರಾಯಗಳನ್ನು ಬದಿಗಿರಿಸಿ, ಮತ್ತು ಬಿಯರ್ನ ನಮ್ಮ ಹಂಚಿದ ಪ್ರೀತಿಯನ್ನು ಆಚರಿಸಲು ಒಟ್ಟಾಗಿ ಸೇರಲು ನಮ್ಮನ್ನು ಕರೆಯುತ್ತದೆ.

ರಾಜಕಾರಣಿಗಳು ಶತಮಾನಗಳಿಂದ ಮಾಡಲು ಪ್ರಯತ್ನಿಸಿದ್ದನ್ನು ಬಿಯರ್ ಹೇಗಾದರೂ ನಿರ್ವಹಿಸುತ್ತದೆ - ಒಳ್ಳೆಯದಕ್ಕಾಗಿ ಸಾಮಾನ್ಯ ಕಾರಣಕ್ಕಾಗಿ ಜನರನ್ನು ಒಂದುಗೂಡಿಸಿ. ಬಿಯರ್ಗಾಗಿ ನಮ್ಮ ಅತೃಪ್ತ ಬಾಯಾರಿಕೆಯು ವಿರಾಮಗೊಳಿಸಲು ನಮಗೆ ಕಾರಣವನ್ನು ನೀಡುತ್ತದೆ; ನಾವು ಮಾಡುತ್ತಿರುವುದನ್ನು ನಿಲ್ಲಿಸಲು, ಕುಳಿತುಕೊಂಡು ಒಬ್ಬರಿಗೊಬ್ಬರು ಒಂದು ಅಥವಾ ಎರಡು ಪೈಂಟ್ಗಳ ಮೇಲೆ ಸಂಭಾಷಣೆ ಮಾಡಿ. ಸಂಭಾಷಣೆಯು ಆಹ್ಲಾದಕರವಾಗಿರಬಹುದು ಅಥವಾ ಇಲ್ಲದಿರಬಹುದು, ಶಾಂತವಾಗಿರಬಹುದು ಅಥವಾ ಅನಿಮೇಟೆಡ್ ಆಗಿರಬಹುದು, ಆದರೆ ಹೇಗಾದರೂ ಬಿಯರ್ ಅದನ್ನು ಒಪ್ಪುವುದಿಲ್ಲ ಎಂದು ಒಪ್ಪಿಕೊಳ್ಳಲು ಮತ್ತು ಸ್ನೇಹಿತರನ್ನು ದೂರವಿಡಲು ಸಾಧ್ಯವಾಗಿಸುತ್ತದೆ.

ಪ್ರಪಂಚದ ಅತ್ಯಂತ ಹಳೆಯ ಮತ್ತು ಅತ್ಯಂತ ಪ್ರೀತಿಯ ಪಾನೀಯಕ್ಕಾಗಿ ಮನುಕುಲದ ಸಾಮಾನ್ಯ ಬಾಯಾರಿಕೆಯನ್ನು ಆಚರಿಸುವುದು ಅಂತರರಾಷ್ಟ್ರೀಯ ಬಿಯರ್ ದಿನವಾಗಿದೆ. ಮೊದಲ ಧಾನ್ಯಗಳು ಆಕಸ್ಮಿಕವಾಗಿ ಹುದುಗಿದವು ಎಂದು ಕಂಡುಹಿಡಿದಾಗಿನಿಂದ ಮಾನವರು ಬಿಯರ್ನತ್ತ ಆಕರ್ಷಿತರಾಗಿದ್ದಾರೆ, ಬಬ್ಲಿ ಆರೊಮ್ಯಾಟಿಕ್ ಉತ್ಪನ್ನವನ್ನು ಉತ್ಪಾದಿಸುತ್ತಾರೆ, ಅದನ್ನು ಯಾರಾದರೂ ರುಚಿ ನೋಡಿದರು, ಸಾಯಲಿಲ್ಲ, ಬದಲಿಗೆ ಸುಂದರವಾದ ಸಣ್ಣ ಝೇಂಕಾರವನ್ನು ಅನುಭವಿಸಿದರು, ಮುಗುಳ್ನಕ್ಕು ವಾವ್ ಎಂದು ಹೇಳಿದರು. ಮುಂದಿನ ವಾಹ್ ಅನ್ವೇಷಣೆಯಲ್ಲಿ ಬಿಯರ್ ಪಾಕವಿಧಾನಗಳು ಮತ್ತು ಬ್ರೂಯಿಂಗ್ ಪ್ರಕ್ರಿಯೆಗಳನ್ನು ಪರಿಪೂರ್ಣಗೊಳಿಸುವುದರೊಂದಿಗೆ ಮಾನವಕುಲವು ಅಂದಿನಿಂದ ಗೀಳಾಗಿದೆ.

ಮಾನವ ಇತಿಹಾಸದುದ್ದಕ್ಕೂ ಬಿಯರ್ ಅನ್ನು ಪ್ರತಿಯೊಂದು ಸಂಸ್ಕೃತಿಯೂ ಸೇವಿಸಿದೆ. ಪ್ರಾಚೀನ ಬ್ಯಾಬಿಲೋನಿಯಾ ಮತ್ತು ಮೆಸೊಪಟ್ಯಾಮಿಯಾದಲ್ಲಿ ಬಿಯರ್ ತಯಾರಿಕೆಯಲ್ಲಿ ಮನುಷ್ಯನ ಗೀಳಿನ ಹಳೆಯ ಪುರಾವೆಗಳು. ಪುರಾತತ್ವಜ್ಞರು 4300 B.Cಯಲ್ಲಿ ಮಣ್ಣಿನ ಮಾತ್ರೆಗಳ ಮೇಲೆ ಬರೆಯಲಾದ ಬಿಯರ್ನ ಪಾಕವಿಧಾನಗಳನ್ನು ಮತ್ತು 3400 B.Cಯಿಂದ ಸೆರಾಮಿಕ್ ಪಾತ್ರೆಗಳನ್ನು ಕಂಡುಹಿಡಿದಿದ್ದಾರೆ. ಅದು ಇನ್ನೂ ಬಿಯರ್ ಶೇಷದೊಂದಿಗೆ ಅಂಟಿಕೊಳ್ಳುತ್ತದೆ.

# ಸಂಸತ್ತಿನಲ್ಲಿ ಅಬ್ಬರಿಸಿದ ರೈಲ್ವೆ ಸಚಿವ!



**ನವದೆಹಲಿ:** ಶೋ ಆಫ್‌ಗಾಗಿ ನಾವು ರೀಲ್ಸ್ ಮಾಡೋರಲ್ಲ ದುಡಿಯುವ ಜನ ಎಂದು ಕಾಂಗ್ರೆಸ್ ಆರೋಪಕ್ಕೆ ಸಂಸತ್ತಿನಲ್ಲಿ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಘರ್ಜಿಸಿದ್ದಾರೆ. ರೈಲ್ವೇ ಅಪಘಾತಗಳ ಬಗ್ಗೆ ಪ್ರತಿಪಕ್ಷಗಳ ಗದ್ದಲಕ್ಕೆ ಅಸಮಾಧಾನ ವ್ಯಕ್ತಪಡಿಸಿದ ಸಚಿವರು, 58 ವರ್ಷಗಳ ಅಧಿಕಾರದಲ್ಲಿ ಒಂದೇ ಒಂದು ಕಿಲೋಮೀಟರ್‌ಗೂ ಸ್ವಯಂಚಾಲಿತ ರೈಲು ರಕ್ಷಣೆ (ಎಟಿಪಿ) ಏಕೆ ಸ್ಥಾಪಿಸಲು ಸಾಧ್ಯವಾಗಲಿಲ್ಲ ಎಂದು ಇಲ್ಲಿ ಕೂಗುತ್ತಿರುವವರಿಗೆ ಕೇಳಬೇಕು ಎಂದು ಹೇಳಿದರು.

ಸಂಸತ್ತಿನಲ್ಲಿ ಮಾತನಾಡುವಾಗ ಪ್ರತಿಪಕ್ಷಗಳ ಸಂಸದರು ಗದ್ದಲ ಎಬ್ಬಿಸಿದರು. ಇದರಿಂದ ಸಚಿವರು ಕೋಪಗೊಂಡರು. ಇದಾದ ಬಳಿಕ ಸಭಾಪತಿಯನ್ನುದ್ದೇಶಿಸಿ ಮಾತನಾಡುತ್ತಾ ಇದೇನಿದು, ಮಧ್ಯೆ ಮಧ್ಯೆ ಏನು ಬೇಕಾದರೂ ಹೇಳುತ್ತಾರೆ.

ಇಂದು ಅವರು ಪ್ರಶ್ನೆಗಳನ್ನು ಎತ್ತುವ ಧೈರ್ಯ ಮಾಡುತ್ತಿದ್ದಾರೆ. ಮಮತಾ ಬ್ಯಾನರ್ಜಿ ಅವರು ರೈಲ್ವೆ ಸಚಿವರಾಗಿದ್ದಾಗ ಅಪಘಾತದ ಸಂಖ್ಯೆ 0.24 ರಿಂದ 0.19 ಕ್ಕೆ ಇಳಿದಿತ್ತು. ಆದರೆ ಇಂದು 0.19 ರಿಂದ 0.03 ಕ್ಕೆ ಇಳಿದಿದೆ. ಹೀಗಾಗಿ ಈ ಜನರು ಸದನದಲ್ಲಿ ಚಪ್ಪಾಳೆ ತಟ್ಟಬೇಕು ಎಂದರು.

ಈ ದೇಶ ಹೀಗೆ ಸಾಗುತ್ತದೆಯೇ ಎಂದು ಸ್ಪೀಕರ್ ಅವರನ್ನು ಪ್ರಶ್ನಿಸಿದ ಅಶ್ವಿನಿ ವೈಷ್ಣವ್, ಸಾಮಾಜಿಕ ಜಾಲತಾಣಗಳಲ್ಲಿ ಕಾಂಗ್ರೆಸ್ ತನ್ನ ಟ್ರೋಲ್ ಆರ್ಮಿ ಮೂಲಕ ಸುಳ್ಳುಗಳನ್ನು ಹರಡುತ್ತಿದೆ ಎಂದು ಆರೋಪಿಸಿದರು.

# ಇಸ್ರೇಲ್ ದಾಳಿ ಬಳಿಕ ಲೆಬನಾನ್ ತೊರೆಯುವಂತೆ ದೇಶದ ಪ್ರಜೆಗಳಿಗೆ 'ಭಾರತ' ಸೂಚನೆ

**ಬೈರುತ್:** ಕಳೆದ 48 ಗಂಟೆಗಳಲ್ಲಿ ಹಮಾಸ್ ಉನ್ನತ ನಾಯಕರ ಹತ್ಯೆಯ ನಂತರ ದೇಶದಲ್ಲಿ ಉದ್ವಿಗ್ನ ಪರಿಸ್ಥಿತಿಯ ಮಧ್ಯೆ ಲೆಬನಾನ್ ನಲ್ಲಿರುವ ಭಾರತೀಯ ರಾಯಭಾರ ಕಚೇರಿ ಭಾರತೀಯ ಪ್ರಜೆಗಳಿಗೆ ಹೊಸ ಸಲಹೆಯನ್ನು ನೀಡಿದೆ ಮತ್ತು ದೇಶವನ್ನು ತೊರೆಯುವಂತೆ ಬಲವಾಗಿ ಸಲಹೆ ನೀಡಿದೆ.

ಈ ಪ್ರದೇಶದಲ್ಲಿನ ಇತ್ತೀಚಿನ ಬೆಳವಣಿಗೆಗಳು ಮತ್ತು ಸಂಭಾವ್ಯ ಬೆದರಿಕೆಗಳನ್ನ ಗಮನದಲ್ಲಿಟ್ಟುಕೊಂಡು, ಮುಂದಿನ ಸೂಚನೆ ಬರುವವರೆಗೆ ಲೆಬನಾನ್ಗೆ ಪ್ರಯಾಣಿಸದಂತೆ ಭಾರತೀಯ ಪ್ರಜೆಗಳಿಗೆ ಬಲವಾಗಿ ಸೂಚಿಸಲಾಗಿದೆ ಎಂದು ರಾಯಭಾರ ಕಚೇರಿ ಗುರುವಾರ ಸಾಮಾಜಿಕ ಮಾಧ್ಯಮ ಪೋಸ್ಟ್ನಲ್ಲಿ ತಿಳಿಸಿದೆ.

ಈ ಪ್ರದೇಶಕ್ಕೆ ಅನಿವಾರ್ಯವಲ್ಲದ ಪ್ರಯಾಣವನ್ನ ತಪ್ಪಿಸಿ ಎಂದು ಭಾರತೀಯ ಪ್ರಜೆಗಳಿಗೆ ಪ್ರಯಾಣ ಸಲಹೆಯನ್ನು ಬಿಡುಗಡೆ ಮಾಡಿದ ಕೆಲವೇ ಗಂಟೆಗಳ ನಂತರ ಇತ್ತೀಚಿನ ಎಚ್ಚರಿಕೆ ಬಂದಿದೆ. ಆ ಸಮಯದಲ್ಲಿ, ಅದು ಭಾರತೀಯ ಪ್ರಜೆಗಳಿಗೆ ದೇಶವನ್ನು ತೊರೆಯುವಂತೆ ಸಲಹೆ ನೀಡಲಿಲ್ಲ. ವಿಶೇಷವೆಂದರೆ, ಇದು 48 ಗಂಟೆಗಳಲ್ಲಿ ರಾಯಭಾರ ಕಚೇರಿ ಹೊರಡಿಸಿದ ಮೂರನೇ ಪ್ರಯಾಣ ಸಲಹೆಯಾಗಿದೆ.



# ಮಂಗಗಳಿಗೆ ಸಂತಾನಹರಣ ಚುಚ್ಚುಮದ್ದು: ಅರಣ್ಯ ಇಲಾಖೆ ನಿರ್ಧಾರ




**ನವದೆಹಲಿ:** ಜನವಸತಿ ಪ್ರದೇಶಗಳಲ್ಲಿ ಮಂಗಗಳ ಹಾವಳಿ ತಡೆಗೆ ವಿವಿಧ ಕ್ರಮಗಳನ್ನು ತೆಗೆದುಕೊಳ್ಳಲಾಗಿದ್ದು, ಮಂಗಗಳನ್ನು ಹಿಡಿದು ಕಾಡಿಗೆ ಬಿಡುವುದರೊಂದಿಗೆ, ಅವುಗಳಿಗೆ ಸಂತಾನಹರಣ ಚುಚ್ಚುಮದ್ದು ನೀಡಲಾಗುತ್ತಿದೆ ಮತ್ತು ಆಹಾರದ ಮೂಲಕವೂ ಸಂತಾನಹರಣವಾಗುವಂತೆ ಕ್ರಮ ತೆಗೆದುಕೊಳ್ಳಲಾಗಿದೆ ಎಂದು ಅರಣ್ಯ ಮತ್ತು ಪರಿಸರ ಸಚಿವ ಭೂಪೇಂದ್ರ ಯಾದವ್ ರಾಜ್ಯಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೆಯೊಂದಕ್ಕೆ ಉತ್ತರಿಸಿ ಮಾತನಾಡಿದ ಅವರು, ಮಾನವ-ಪ್ರಾಣಿ ಸಂಘರ್ಷ ತಡೆಯಲು ಸ್ಥಳೀಯ ಆಡಳಿತಗಳೊಂದಿಗೆ ಅನೇಕ ಜಾಗೃತಿ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದರು. ವನ್ಯಜೀವಿ ಕಾಯ್ದೆಯಡಿ ಮಾನವ ಪ್ರಾಣಿ ಸಂಘರ್ಷ ತಡೆಗೆ ಸರ್ಕಾರ ರಾಜ್ಯಗಳಿಗೆ ಸಲಹೆ- ಸೂಚನೆಗಳನ್ನು ಹೊರಡಿಸುತ್ತಿದೆ. ದುರ್ಘಟನೆ ವೇಳೆ ಜೀವಹಾನಿ, ಬೆಳೆನಷ್ಟಕ್ಕೆ ಪರಿಹಾರವನ್ನು ನೀಡಲಾಗುತ್ತಿದೆ. ಸ್ಥಳೀಯ ಆಡಳಿತಗಳಿಗೆ ತಾಂತ್ರಿಕ ನೆರವನ್ನು ಒದಗಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.

# ಎಸ್‌ಬಿಐ ಇನ್ನೋವೇಟಿವ್ ಆಪರ್ಚುನಿಟೀಸ್ ಫಂಡ್ ಪ್ರಾರಂಭ




**ದೆಹಲಿ:** ಎಸ್‌ಬಿಐ ಮ್ಯೂಚುಯಲ್ ಫಂಡ್ ಎಸ್ ಬಿಐ ಇನ್ನೋವೇಟಿವ್ ಆಪರ್ಚುನಿಟೀಸ್ ಫಂಡ್ ಅನ್ನು ಬಿಡುಗಡೆ ಮಾಡುವುದಾಗಿ ಘೋಷಿಸಿದೆ, ಇದು ನಾವೀನ್ಯತೆ ಥೀಮ್ ಅನ್ನು ಹೊಂದಿರುವ ಓಪನ್-ಎಂಡೆಡ್ ಈಕ್ವಿಟಿ ಸ್ಕೀಮ್ ಆಗಿದೆ. ನವೀನ ತಂತ್ರಗಳು ಮತ್ತು ಥೀಮ್ನ ಅಳವಡಿಕೆಯಿಂದ ಲಾಭ ಪಡೆಯಲು ಬಯಸುವ ಕಂಪನಿಗಳ ಈಕ್ವಿಟಿ ಮತ್ತು ಈಕ್ವಿಟಿ ಸಂಬಂಧಿತ ಇನ್ಸ್ಟ್ರುಮೆಂಟ್‌ಗಳಲ್ಲಿ ಹೂಡಿಕೆ ಮಾಡುವ ಮೂಲಕ ಹೂಡಿಕೆದಾರರಿಗೆ ದೀರ್ಘಾವಧಿಯ ಬಂಡವಾಳ ಅಪ್ರಿಸಿಯೇಷನ್‌ಗೆ ಅವಕಾಶಗಳನ್ನು ಒದಗಿಸುವುದು ಸ್ಕೀಮ್ ಹೂಡಿಕೆಯ ಉದ್ದೇಶವಾಗಿದೆ. ಆದರೆ, ಸ್ಕೀಮ್‌ನ ಹೂಡಿಕೆಯ ಉದ್ದೇಶವು ಸಾಕಾರಗೊಳ್ಳುತ್ತದೆ ಎಂಬುದಕ್ಕೆ ಯಾವುದೇ ಭರವಸೆ ಇರುವುದಿಲ್ಲ. ನಿಫ್ಟಿಯ ಬೆಂಚ್‌ಮಾರ್ಕ್ ನಿಫ್ಟಿ 500 ಟಿಆರ್‌ಐ ಆಗಿದೆ. ಎಸ್‌ಬಿಐಫಂಡ್ಸ್ ಮ್ಯಾನೇಜ್ಮೆಂಟ್ ಲಿಮಿಟೆಡ್‌ನ ಮ್ಯಾನೇಜಿಂಗ್ ಡೈರೆಕ್ಟರ್ ಮತ್ತು ಚೀಫ್ ಎಕ್ಸಿಕ್ಯೂಟಿವ್ ಆಫೀಸರ್ ಶಂಶೇರ್ ಸಿಂಗ್ ಮಾತನಾಡುತ್ತಾ, ಇಂದು ನಮ್ಮ ದೇಶವು ವಿಶ್ವದಲ್ಲಿ ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಗಳಲ್ಲಿ ಒಂದಾಗಿದೆ ಮತ್ತು ನಾವೀನ್ಯತೆ ವಿಕಸಿತ ಭಾರತದ ಕೇಂದ್ರ ಭಾಗವಾಗಿದೆ. ಸ್ಟಾರ್ಟ್ ಅಪ್ ಇಂಡಿಯಾ, ಅಟಲ್ ಇನ್ನೋವೇಶನ್ ಮಿಷನ್ ಮತ್ತು ಇಂಡಿಯಾ ಸ್ಟಾಕ್‌ನಂತಹ ಉಪಕ್ರಮಗಳ ಮೂಲಕ ಸರ್ಕಾರವು ಶಾಲೆಯಿಂದ ಉದ್ಯಮದವರೆಗೆ ನಾವೀನ್ಯತೆಯ ಸಂಸ್ಕೃತಿಯನ್ನು ಸೃಷ್ಟಿಸುವ ಗುರಿಯನ್ನು ಹೊಂದಿದೆ. ಅಭಿವೃದ್ಧಿ ಹೊಂದುತ್ತಿರುವ ಸ್ಟಾರ್ಟ್ ಅಪ್ ಮತ್ತು ಧನಸಹಾಯ ಮಾಡಬಲ್ಲ ಪರಿಸರ ವ್ಯವಸ್ಥೆ, ಅತಿದೊಡ್ಡ ಗ್ರಾಹಕರ ಮಾರುಕಟ್ಟೆ ಜೊತೆಗೆ ಪ್ರಬಲ ಡಿಜಿಟಲ್ ಮೂಲಸೌಕರ್ಯವು ನಾವೀನ್ಯತೆ ವಲಯದಲ್ಲಿ ಮುಂದಿನ ಅತಿದೊಡ್ಡ ಮುಂದಾಳುವಾಗಲು ನಮ್ಮ ದೇಶಕ್ಕೆ ಅನುಕೂಲಕರವಾದ ಪರಿಸ್ಥಿತಿಗಳನ್ನು ಒದಗಿಸುತ್ತದೆ. ಎಸ್‌ಬಿಐ ಇನ್ನೋವೇಟಿವ್ ಆಪರ್ಚುನಿಟೀಸ್ ಫಂಡ್ ಸ್ಪರ್ಧಾತ್ಮಕ ಮೇಲುಗೈ ಅನ್ನು ಪಡೆಯಲು ನಾವೀನ್ಯತೆ ಹೊಂದಿರುವ ಕಂಪನಿಗಳಲ್ಲಿ ಹೂಡಿಕೆ ಮಾಡಲು ಬಯಸುವ ಹೂಡಿಕೆದಾರರು ಮತ್ತು ಅವರ ಆಫರಿಂಗ್‌ಗಳ ಮೌಲ್ಯವನ್ನು ಹೆಚ್ಚಿಸಲು ನಾವು ಕೆಲಸ ಮಾಡುವ ವಿಧಾನವನ್ನು ಬದಲಾಯಿಸಿಕೊಳ್ಳಲು ಉತ್ತಮ ಅವಕಾಶವಾಗಿದೆ'' ಎಂದು ಹೇಳಿದರು.

ಎಸ್‌ಬಿಐ ಫಂಡ್ಸ್ ಮ್ಯಾನೇಜ್ಮೆಂಟ್ ಲಿಮಿಟೆಡ್ನ ಡೆಪ್ಯೂಟಿ ಎಂಡಿ ಮತ್ತು ಜಂಟಿ ಸಿಇಒ ಡಿ ಪಿ ಸಿಂಗ್ ಮಾತನಾಡುತ್ತಾ, ''ನಾವೀನ್ಯತೆಯಿಂದಾಗಿ ಆಟೋಮೊಬೈಲ್ಸ್, ಹಣಕಾಸು ಸೇವೆಗಳು, ಇಂಧನ, ಮಾಧ್ಯಮ ಮತ್ತು ಮನರಂಜನೆ, ತಂತ್ರಜ್ಞಾನ, ಆರೋಗ್ಯ ರಕ್ಷಣೆ, ಇ-ಕಾಮರ್ಸ್ ಮತ್ತು ಕೈಗಾರಿಕೆಗಳಂತಹ ಕ್ಷೇತ್ರಗಳಲ್ಲಿ ನಾವು ಅಡೆತಡೆಗಳು ಎದುರಾಗುವುದನ್ನು ಕಂಡಿದ್ದೇವೆ. ಪೂರ್ವ ನಿಯಾಮಕ ಸರ್ಕಾರ ಮತ್ತು ಖಾಸಗಿ ವಲಯದ ನಡುವಿನ ಸಹಯೋಗವು ನಾವೀನ್ಯತೆಯ ಆಧಾರದ ಮೇಲೆ ನಿರ್ಮಿಸಲಾದ ಹೊಸ ಸ್ಟಾರ್ಟ್‌ಅಪ್‌ಗಳನ್ನು ಉತ್ತೇಜಿಸುತ್ತದೆ. ತಂತ್ರಜ್ಞಾನ ಅಳವಡಿಕೆ ಮತ್ತು ಡಿಜಿಟಲ್ ಟ್ರಾನ್ಸ್ಫರ್ಮೇಶನ್‌ನಲ್ಲಿ ನಮ್ಮ ದೇಶವು ಜಾಗತಿಕ ಮುಂದಾಳುವಾಗಿ ಸೂಕ್ತ ಸ್ಥಾನ ಪಡೆದಿದೆ ಎನ್ನುವುದು ನನ್ನ ನಂಬಿಕೆಯಾಗಿದೆ. ಎಸ್ಬಿಐ ಇನ್ನೋವೇಟಿವ್ ಆಪರ್ಚುನಿಟೀಸ್ ಫಂಡ್ ಹೂಡಿಕೆದಾರರಿಗೆ ಮುಂದಿನ ಪೀಳಿಗೆಯ ಭಾರತವನ್ನು ವ್ಯಾಖ್ಯಾನಿಸಲು ಹೊಂದಿಸಲಾದ ಸದೃಢ ನಾವೀನ್ಯತೆ ಥೀಮ್ನಿಂದ ಲಾಭ ಪಡೆಯುವ ಅವಕಾಶವನ್ನು ಒದಗಿಸುತ್ತದೆ'' ಎಂದು ಅಭಿಪ್ರಾಯಪಟ್ಟರು.

# ಮಥುರಾ ಕೃಷ್ಣಜನ್ಮಭೂಮಿ ವಿವಾದ ಮಸೀದಿ ಪರ ವಕೀಲರು ಸಲ್ಲಿಸಿದ್ದ ಅರ್ಜಿ ವಜಾ

**ಲಕ್ನೋ:** ಮಥುರಾ ಕೃಷ್ಣಜನ್ಮಭೂಮಿ ವಿವಾದ ಸಂಬಂಧ ಮಸೀದಿ ಸಮಿತಿಗೆ ಭಾರೀ ಹಿನ್ನಡೆಯಾಗಿದೆ. ಶಾಹೀ ಈದ್ಗಾ ಮಸೀದಿ ಸಮಿತಿ ಸಲ್ಲಿಸಿದ್ದ ಮೇಲ್ಮನವಿ ಅರ್ಜಿಯನ್ನು ಅಲಹಾಬಾದ್ ಹೈಕೋರ್ಟ್ ವಜಾ ಮಾಡಿದೆ.

ಮಸೀದಿ ತೆರವು ಕೋರಿ ಹಿಂದೂಪರ ಸಂಘಟನೆಗಳು ಸಲ್ಲಿಸಿದ್ದ 15 ಅರ್ಜಿಗಳ ವಿಚಾರಣೆಗೆ ಹೈಕೋರ್ಟ್ ಒಪ್ಪಿಗೆ ಸೂಚಿಸಿದೆ. ಮುಂದಿನ ವಿಚಾರಣೆಯನ್ನು ಆಗಸ್ಟ್ 12ಕ್ಕೆ ಮುಂದೂಡಿದೆ. ಹಿಂದೂಗಳು ಸಲ್ಲಿಸಿರುವ ಅರ್ಜಿಗಳು ವಿಚಾರಣೆಗೆ ಯೋಗ್ಯವಾಗಿವೆ ಎಂದಿದೆ. ಈ ಮೂಲಕ ಹಿಂದೂಗಳ ವಾದಕ್ಕೆ ಹೈಕೋರ್ಟ್ ಮನ್ನಣೆ ನೀಡಿದೆ.

1991ರ ಕಾನೂನಿನಡಿ ಧಾರ್ಮಿಕ ಸ್ಥಳಗಳ ಸ್ವರೂಪ ಬದಲಾಯಿಸಬಾರದು ಎಂದು ಮುಸ್ಲಿಂ ಪರ ವಕೀಲರು ವಾದಿಸಿದ್ದರು. ಆದರೆ ಈ ಕಾನೂನಿನ ಅಂಶದ ವಾದವನ್ನು ಹೈಕೋರ್ಟ್ ತಿರಸ್ಕರಿಸಿದೆ.

ಕೃಷ್ಣ ಜನ್ಮಭೂಮಿ ದೇವಸ್ಥಾನದ ಪಕ್ಕದಲ್ಲಿರುವ ಶಾಹಿ ಈದ್ಗಾ ಮಸೀದಿಯನ್ನು ತೆರವುಗೊಳಿಸಲು ಹಲವಾರು ಮೊಕದ್ದಮೆಗಳನ್ನು ಹೂಡಲಾಗಿತ್ತು. ಕೃಷ್ಣ ದೇವಸ್ಥಾನವನ್ನು ಕೆಡವಿದ ನಂತರ ಔರಂಗಜೇಬ್ ಕಾಲದ ಮಸೀದಿಯನ್ನು ನಿರ್ಮಿಸಲಾಗಿದೆ ಎಂದು ದಾವೆ ಹೂಡಲಾಗಿತ್ತು.



# ಮಣ್ಣಿನಡಿ ಸಿಲುಕಿ ಒದ್ದಾಡುತ್ತಿರೋ ಶ್ವಾನ

**ತಿರುವನಂತಪುರಂ:** ದೇವರ ನಾಡು ಕೇರಳದ ವಯನಾಡು ಭೀಕರ ಭೂಕುಸಿತದಿಂದ ಅಕ್ಷರಶಃ ನಲುಗಿ ಹೋಗಿದೆ. ಇದೀಗ ಭೀಕರತೆಗೆ ಸಾಕ್ಷಿಯಾಗಿ ಒಂದೊಂದೇ ಮನಕಲಕುವ ದೃಶ್ಯಗಳು ಹೊರ ಬರುತ್ತಿದೆ. ಇದೀಗ ಅಂಥದ್ದೇ ಒಂದು ವೀಡಿಯೋ ಹೊರಬಿದ್ದಿದ್ದು, ಇದನ್ನು ನೋಡಿದರೆ ಎಂಥವರ ಮನಸ್ಸು ಒಂದು ಬಾರಿ ಕರಗಿ ಹೋಗುತ್ತದೆ. ಹೌದು. ದುರಂತದಲ್ಲಿ ಬದುಕುಳಿದವರ ರಕ್ಷಣೆ ಒಂದೆಡೆ ನಡೆಯುತ್ತಿದ್ದರೆ, ಇನ್ನೊಂದೆಡೆ ಪತ್ತೆಯಾಗುತ್ತಿರುವ ಶವಗಳನ್ನು ಸ್ಥಳಾಂತರಿಸಲಾಗುತ್ತಿದೆ. ಹೀಗೆ ವಯನಾಡಿನ ಒಂದೊಂದು ದೃಶ್ಯ ಕೂಡ ಕಣ್ಣೀರು ತರಿಸುವಂತಿದೆ. ಮಣ್ಣಿನಡಿ ಸಿಲುಕಿ ಒದ್ದಾಡುತ್ತಿರುವ ಮನುಷ್ಯ ಹಾಗೂ ಶ್ವಾನದ ದೃಶ್ಯವನ್ನು ನೋಡಿದರೆ ನಿಜಕ್ಕೂ ಕಣ್ಣೀರು ತರಿಸುತ್ತದೆ. ಮಣ್ಣು ಕುಸಿತವಾಗಿ ನದಿಯಂತೆ ನೀರು ಹರಿಯುತ್ತಿದ್ದರೆ, ಎಲ್ಲೆಂದರಲ್ಲಿ ಮಣ್ಣು, ಬೃಹತ್ ಬಂಡೆಗಳು, ಬುಡಮೇಲಾದ ಮರಗಳು, ಕಟ್ಟಡಗಳ ಅವಶೇಷಗಳೇ ಕಣ್ಣು ಹಾಯಿಸಿದಷ್ಟು ದೂರಕ್ಕೆ ಕಾಣುತ್ತಿವೆ. ಸುಮಾರು 400 ಮನೆಗಳನ್ನು ಹೊಂದಿದ್ದ ಮುಂಡಕ್ಕೈನಲ್ಲಿ ಈಗ ಕೇವಲ ಮೂವತ್ತು ಮನೆಗಳು ಉಳಿದಿವೆ. ಎಷ್ಟು ಮಂದಿ ಜೀವಂತವಾಗಿದ್ದಾರೆ ಅಥವಾ ಎಷ್ಟು ಮಂದಿ ಸಾವನ್ನಪ್ಪಿದ್ದಾರೆ ಎಂಬ ಬಗ್ಗೆ ನಿಖರ ಮಾಹಿತಿ ಇಲ್ಲ. ಹಲವರು ಇಲ್ಲಿಯವರೆಗೆ ದುಡಿದಿದ್ದನ್ನೆಲ್ಲ ಕಳೆದುಕೊಂಡು ಪ್ರಸ್ತುತ ನಿರಾಶ್ರಿತ ಶಿಬಿರಗಳಲ್ಲಿದ್ದಾರೆ. ಕುಟುಂಬ, ಆತ್ಮೀಯರನ್ನು ಕಳೆದುಕೊಂಡಿದ್ದಾರೆ. ಬದಲಾಯಿಸಲು ಬಟ್ಟೆಯೂ ಇಲ್ಲ. ಮುಂದಿನ ಜೀವನ ಹೇಗೆ ಎಂಬುದೇ ಯಕ್ಷ ಪ್ರಶ್ನೆಯಾಗಿದೆ.



# ಚೀನಾದಲ್ಲೂ ಜಲಪ್ರಳಯ: 30 ಮಂದಿ ಸಾವು




**ಬೀಜಿಂಗ್:** ನೆರೆಯ ದೇಶ ಚೀನಾದಲ್ಲಿ ಈ ವಾರದ ಆರಂಭದಿಂದ ಧಾರಾಕಾರ ಮಳೆ ಸುರಿಯುತ್ತಿದ್ದು, ಬಾರೀ ಮಳೆಗೆ ದೇಶ ತತ್ತರಿಸಿ ಹೋಗಿದೆ. ಚೀನಾದಲ್ಲಿ ಉಂಟಾಗಿರುವ ಜಲಕಂಟಕದಿಂದಾಗಿ ಈಗಾಗಲೇ 30 ಜನರು ಸಾವನ್ನಪ್ಪಿದ್ದಾರೆ. ಇನ್ನೂ 35 ಜನರು ನಾಪತ್ತೆಯಾಗಿದ್ದಾರೆ ಎಂದು ಸ್ಥಳೀಯ ಮಾಧ್ಯಮ ವರದಿ ಮಾಡಿದೆ. ಒಂದು ವಾರದ ಹಿಂದೆ ಫಿಲಿಪೈನ್ಸ್ ಮತ್ತು ತೈವಾನ್ನಿಂದ ಚಂಡಮಾರುತ ಪೂರ್ವ ಚೀನಾಗೆ ಸ್ಥಳಾಂತರಗೊಂಡಿದೆ. ಇದರಿಂದಾಗಿ ಗುಡ್ಡಗಾಡು ಪ್ರದೇಶ ಮುಖ್ಯವಾಗಿ ಭೂಕುಸಿತವಾದ ಹುನಾನ್ ಪ್ರಾಂತ್ಯ ತೀವ್ರ ಹೊಡೆತ ಅನುಭವಿಸಿದೆ. ಕೆಲವು ಪ್ರದೇಶಗಳಲ್ಲಿ ಕೇವಲ 24 ಗಂಟೆಗಳಲ್ಲಿ 645 ಮಿಲಿಮೀಟರ್ ದಾಖಲೆಯ ಮಳೆ ಸುರಿದಿದೆ. ಈ ಹಿನ್ನೆಲೆ ಜಿಕ್ಸಿಂಗ್ ನಗರದಿಂದ 11,000 ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ. ಜಿಕ್ಸಿಂಗ್ ಪ್ರದೇಶದಲ್ಲಿ ಟೌನ್ಶಿಪ್ಗಳನ್ನು ಸಂಪರ್ಕಿಸುವ ಅನೇಕ ರಸ್ತೆಗಳು ಹವಾಮಾನ ವೈಪರೀತ್ಯದಿಂದ ತಾತ್ಕಾಲಿಕವಾಗಿ ಕಡಿತಗೊಂಡಿವೆ. ಇದು ವಿದ್ಯುತ್ ಸರಬರಾಜು ಮತ್ತು ಸಂವಹನ ಮೂಲಸೌಕರ್ಯಗಳ ಮೇಲೂ ಪರಿಣಾಮ ಬೀರಿದೆ. ಈಗಾಗಲೇ ಭಾರೀ ಮಳೆಗೆ 30 ಸಾವುಗಳು ಸಂಭವಿಸಿದ್ದು, 35 ಜನರು ಕಾಣೆಯಾಗಿದ್ದಾರೆ. ಮಂಗಳವಾರ ಕ್ಸಿನ್ಹುವಾ ಜಿಕ್ಸಿಂಗ್ನಲ್ಲಿ ನಾಲ್ಕು ಜನರು ಸಾವನ್ನಪ್ಪಿದ್ದಾರೆ ಮತ್ತು ಮೂರು ಜನರು ಕಾಣೆಯಾಗಿದ್ದಾರೆ. ಹುನಾನ್ನ ಯೊಂಗ್ಸಿಂಗ್ ಕೌಂಟಿಯಲ್ಲಿ ಮೂರು ಜನರು ಸಾವನ್ನಪ್ಪಿದ್ದಾರೆ. ಭಾನುವಾರದಂದು ಭೂಕುಸಿತ ಉಂಟಾದ ಪ್ರದೇಶದಲ್ಲಿ 15 ಜನರು ಸಾವನ್ನಪ್ಪಿದ್ದಾರೆ.

# ಹಮಾಸ್ ಮಾಸ್ಟರ್ ಮೈಂಡ್ 'ಮೊಹಮ್ಮದ್ ದೀಫ್' ಸಾವು



**ದೆಹಲಿ:** ಕಳೆದ ತಿಂಗಳು ಖಾನ್ ಯೂನಿಸ್ ನ ದಕ್ಷಿಣ ಗಾಝಾ ಪ್ರದೇಶದಲ್ಲಿ ನಡೆದ ದಾಳಿಯಲ್ಲಿ ಹಮಾಸ್ ಮಿಲಿಟರಿ ಮುಖ್ಯಸ್ಥ ಮೊಹಮ್ಮದ್ ದೀಫ್ ಸಾವನ್ನಪ್ಪಿದ್ದಾರೆ ಎಂದು ಇಸ್ರೇಲ್ ಮಿಲಿಟರಿ ಗುರುವಾರ ಪ್ರಕಟಿಸಿದೆ. ಉಗ್ರಗಾಮಿ ಗುಂಪಿನ ರಾಜಕೀಯ ನಾಯಕ ಇಸಾಮಿಲ್ ಹನಿಯೆಹ್ ಅವರನ್ನು ತೆಹ್ರಾನ್ ನಲ್ಲಿ ಹತ್ಯೆ ಮಾಡಿದ ಒಂದು ದಿನದ ನಂತರ ಈ ಪ್ರಕಟಣೆ ಹೊರಬಿದ್ದಿದೆ. ಜುಲೈ 13, 2024 ರಂದು, ಐಡಿಎಫ್ ಫೈಟರ್ ಜೆಟ್ಗಳು ಖಾನ್ ಯೂನಿಸ್ ಪ್ರದೇಶದಲ್ಲಿ ದಾಳಿ ನಡೆಸಿದವು ಎಂದು ಐಡಿಎಫ್ (ಇಸ್ರೇಲ್ ರಕ್ಷಣಾ ಪಡೆಗಳು) ಘೋಷಿಸುತ್ತದೆ ಮತ್ತು ಗುಪ್ತಚರ ಮೌಲ್ಯಮಾಪನದ ನಂತರ, ದಾಳಿಯಲ್ಲಿ ಮೊಹಮ್ಮದ್ ದೀಫ್ ಅವರನ್ನು ಹತ್ಯೆ ಮಾಡಲಾಗಿದೆ ಎಂದು ದೃಢಪಡಿಸಬಹುದು'' ಎಂದು ಮಿಲಿಟರಿ ಹೇಳಿದೆ. ಗಾಝಾ ಯುದ್ಧವನ್ನು ಪ್ರಾರಂಭಿಸಿದ ದಕ್ಷಿಣ ಇಸ್ರೇಲ್ ಮೇಲೆ ಹಮಾಸ್ ಅಕ್ಟೋಬರ್ 7 ರಂದು ನಡೆಸಿದ ದಾಳಿಯ ಯೋಜಕರಲ್ಲಿ ದೀಫ್ ಒಬ್ಬರು ಎಂದು ಹೇಳಲಾಗಿದೆ.

# ರಷ್ಯಾದ ಡ್ರೋನ್ ಸಮೂಹವನ್ನು ಹೊಡೆದುರುಳಿಸಿದ ಉಕ್ರೇನ್



**ಕೀವ್:** ರಶ್ಯದ ಸೇನೆಯು ಉಡಾವಣೆಗೊಳಿಸಿದ್ದ ಎಲ್ಲಾ 89 ಶಾಹೀದ್ ಡ್ರೋನ್ಗಳನ್ನು ಉಕ್ರೇನ್ ಪಡೆಗಳು ಹೊಡೆದುರುಳಿಸಿರುವುದಾಗಿ ಉಕ್ರೇನ್ ವಾಯುಪಡೆ ಬುಧವಾರ ತಿಳಿಸಿದೆ. ಈ ವರ್ಷ ರಶ್ಯ ನಡೆಸಿದ ಅತಿ ದೊಡ್ಡ ಪ್ರಮಾಣದ ಡ್ರೋನ್ ಆಕ್ರಮಣ ಇದಾಗಿತ್ತೆನ್ನಲಾಗಿದೆ.

ಬಹುತೇಕವಾಗಿ ಉಕ್ರೇನ್ ರಾಜಧಾನಿ ಕೀವ್ ಅನ್ನು ಗುರಿಯಾಗಿಸಿ ರಶ್ಯ ನಡೆಸಿದ ಈ ದಾಳಿಯಲ್ಲಿ ಯಾವುದೇ ಸಾವುನೋವು ಸಂಭವಿಸಿರುವ ಬಗ್ಗೆ ವರದಿಯಾಗಿಲ್ಲ.

ರಶ್ಯವು ಇಷ್ಟೇ ಸಂಖ್ಯೆಯ ಡ್ರೋನ್ಗಳನ್ನು ಜನವರಿ 1ರ ದಾಳಿಗೂ ಬಳಸಿಕೊಂಡಿತ್ತೆಂದು ಉಕ್ರೇನ್ ವಾಯುಪಡೆಯ ಹೇಳಿಕೆ ತಿಳಿಸಿದೆ.

ಉಕ್ರೇನ್ ಬಳಿಯಿರುವ ಸೋವಿಯತ್ ಯುಗದ ವಾಯುಪಡೆಯ ವಿಮಾನಗಳ ಮೂಲಕ ರಶ್ಯದ ಡ್ರೋನ್ಗಳನ್ನು ಹೊಡೆದುರುಳಿಸಲಾಗಿದೆಯೆಂದು ಕೀವ್ನ ವೈಮಾನಿಕ ತಜ್ಞ ಅನಾತೊಲಿ ಖ್ರಾಪ್ಚಿನ್ಸ್ಕಿಯಿ ತಿಳಿಸಿದ್ದಾರೆ. ಡ್ರೋನ್ನ ಜಿಪಿಎಸ್ನ ವಿರುದ್ಧ ಉಕ್ರೇನ್ ವಾಯುಪಡೆಯು ಇಲೆಕ್ಟ್ರಾನಿಕ್ ಜಾಮಿಂಗ್ ಅನ್ನು ಬಳಸಿಕೊಳ್ಳುತ್ತಿದೆ. ಇದರಿಂದಾಗಿ ಉಕ್ರೇನ್ ವಾಯುಪಡೆ ವಿಮಾನಗಳಿಗೆ ಅವುಗಳನ್ನು ಹೊಡೆದುರುಳಿಸಲು ಸುಲಭವಾಯಿತು ಎಂದು ಅವರು ತಿಳಿಸಿದ್ದಾರೆ.

# ಪಾಕಿಸ್ತಾನಿ ಅಪರಾಧಿಗಳಿಂದ ರೋಸಿ ಹೋಗಿರುವ ಸಂಯುಕ್ತ ಅರಬ್ ಅಮಿರಾತ್

**ಅಬು ಧಾಬಿ (ಸಂಯುಕ್ತ ಅರಬ್ ಅಮರಾತ್):** ಸಂಯುಕ್ತ ಅರಬ್ ಅಮೀರತ್ ಮತ್ತು ಸೌದಿ ಅರೇಬಿಯಾ ಇವುಗಳಂತಹ ಕೊಲ್ಲಿ ದೇಶಗಳಲ್ಲಿ ಪಾಕಿಸ್ತಾನಿ ಕಾರ್ಮಿಕರು ತಲೆನೋವಾಗಿ ಪರಿಣಮಿಸಿದ್ದಾರೆ. ಸಂಯುಕ್ತ ಅರಬ್ ಅಮಿರಾತದಲ್ಲಿ ಶೇ. 50 ರಷ್ಟು ಅಪರಾಧಗಳನ್ನು ಪಾಕಿಸ್ತಾನಿ ಜನರು ಮಾಡುತ್ತಾರೆ ಹಾಗೂ ಸೌದಿ ಅರೇಬಿಯಾ ಪಾಕಿಸ್ತಾನದಿಂದ ಬರುವ ಭಿಕ್ಷುಕರಿಂದ ಬೇಸತ್ತಿದ್ದಾರೆ. ಪಾಕಿಸ್ತಾನಿ ಸಂಸತ್ತಿನ ಸಮಿತಿಯಲ್ಲಿ ಇದರ ಖುಲಾಸೆ ಮಾಡಲಾಯಿತು. ಪಾಕಿಸ್ತಾನಿ ಅಧಿಕಾರಿಗಳು ಈ ಮಾಹಿತಿ ಪಾಕಿಸ್ತಾನಿ ಸಂಸತ್ತಿನ ಮೇಲ್ಮನೆಯ ವಿದೇಶಿ ಪಾಕಿಸ್ತಾನಿಗಳಿಗಾಗಿ ಸ್ಥಾಪಿಸಿರುವ ಸಮಿತಿಯಲ್ಲಿ ನೀಡಿತು. ಸಮಿತಿಗೆ, ಸಂಯುಕ್ತ ಅರಬ್ ಅಮೀರತ್ ಅಂತಹ ದೇಶಗಳು ಪಾಕಿಸ್ತಾನದಿಂದ ಬರುವ ಕಾರ್ಮಿಕರ ಬಗ್ಗೆ ಸಮಾಧಾನವಿಲ್ಲ; ಬಹುತೇಕ ಕಾರ್ಮಿಕರು ಅಪರಾಧದಲ್ಲಿ ಸಹಭಾಗಿ ಆಗಿರುವುದು ಕಂಡು ಬಂದಿದೆ. ಅಲ್ಲಿ ಪಾಕಿಸ್ತಾನಿಯರು ಅಸಭ್ಯವಾಗಿ ವರ್ತಿಸುತ್ತಾರೆ. ದುಬೈಯಂತಹ ನಗರದಲ್ಲಿ ಅವರು ಮಹಿಳೆಯರ ಅನುಮತಿ ಇಲ್ಲದೆ ವಿಡಿಯೋ ತಯಾರಿಸುತ್ತಾರೆ.




# ಇಸ್ರೇಲ್ ಮೇಲೆ ಯುದ್ಧಕ್ಕೆ ಇರಾನ್‌ನ ಖಮೇನಿ ಆದೇಶ




**ನವದೆಹಲಿ:** ಹಮಾಸ್ ಮುಖ್ಯಸ್ಥರಾಗಿದ್ದ ಇಸ್ಮಾಯಿಲ್ ಹನಿಯೆಹ್ ಹತ್ಯೆಗೆ ಸೇಡು ತೀರಿಸಿಕೊಳ್ಳಲು ನಿರ್ಧರಿಸಿರುವ ಇರಾನ್ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಇಸ್ರೇಲ್ ಮೇಲೆ ಯುದ್ಧ ಸಾರಿದ್ದಾರೆ.

ಇಸ್ಮಾಯಿಲ್ ಹನಿಯೆಹ್ ಅವರ ಸಾವಿಗೆ ಪ್ರತೀಕಾರ ತೀರಿಸಿಕೊಳ್ಳುವುದು ಟೆಹ್ರಾನ್ನ ಕರ್ತವ್ಯವಾಗಿದೆ ಎಂದು ಅವರು ಹೇಳಿದ್ದಾರೆ.

ಟೆಹ್ರಾನ್ನಲ್ಲಿ ಹಮಾಸ್ನ ಉನ್ನತ ನಾಯಕ ಇಸ್ಮಾಯಿಲ್ ಹನಿಯೆಹ್ ಅವರ ಹತ್ಯೆಗೆ ಪ್ರತೀಕಾರವಾಗಿ ಇರಾನ್ನ ಸರ್ವೋಚ್ಚ ನಾಯಕ ಅಯತೊಲ್ಲಾ ಅಲಿ ಖಮೇನಿ ಅವರು ಇಸ್ರೇಲ್ ಮೇಲೆ 'ನೇರ ದಾಳಿ' ಗೆ ಆದೇಶಿಸಿದ್ದಾರೆ ಎಂದು ಮೂವರು ಇರಾನ್ ಅಧಿಕಾರಿಗಳನ್ನು ಉಲ್ಲೇಖಿಸಿ ನ್ಯೂಯಾರ್ಕ್ ಟೈಮ್ಸ್ ವರದಿ ಮಾಡಿದೆ.

ಹನಿಯೆಹ್ ಅವರ ಸಾವನ್ನು ಘೋಷಿಸಿದ ಬೆನ್ನಲ್ಲೇ ಇರಾನ್ ಬುಧವಾರ ಬೆಳಿಗ್ಗೆ ದೇಶದ ಸುಪ್ರೀಂ ರಾಷ್ಟ್ರೀಯ ಭದ್ರತಾ ಮಂಡಳಿಯ ತುರ್ತು ಸಭೆಯನ್ನು ಕರೆದಿದೆ. ಅಧಿಕಾರಿಗಳ ಪ್ರಕಾರ, ಈ ಸಭೆಯಲ್ಲಿ ಖಮೇನಿ ಇಸ್ರೇಲ್ ಮೇಲೆ ದಾಳಿಯ ಆದೇಶವನ್ನು ನೀಡಿದ್ದಾರೆ. ಇಂತಹ ಸಭೆಯು ಅಸಾಧಾರಣ ಸಂದರ್ಭಗಳಲ್ಲಿ ಮಾತ್ರ ನಡೆ ಸಲಾಗುತ್ತದೆ. ಹಿಂದಿನ ಏಪ್ರಿಲ್ನಲ್ಲಿ ಸಿರಿಯಾದಲ್ಲಿ ಇಸ್ರೇಲಿ ವಾಯುದಾಳಿಯು ಇಬ್ಬರು ಉನ್ನತ ಇರಾನ್ ಮಿಲಿಟರಿ ಕಮಾಂಡರ್ಗಳನ್ನು ಕೊಲ್ಲುವ ಸಮಯದಲ್ಲಿ ಇದೇ ರೀತಿಯ ಸಭೆಯನ್ನು ಕರೆಯಲಾಗಿತ್ತು. ಒಂದುವೇಳೆ ಇರಾನ್ ಮತ್ತು ಅದರ ಪ್ರಾಕ್ಸಿಗಳು ನಮ್ಮ ದೇಶದ ವಿರುದ್ಧ ಯಾವುದೇ ದಾಳಿ ನಡೆಸಿದರೆ ಇಸ್ರೇಲ್ ಪೂರ್ಣ ಪ್ರಮಾಣದ ಯುದ್ಧಕ್ಕೆ ಹೋಗಲು ಸಿದ್ಧವಾಗಿದೆ ಎಂದು ರಾಜತಾಂತ್ರಿಕ ಬ್ಯಾಕ್ಚಾನಲ್ಗಳ ಮೂಲಕ ಇರಾನ್ಗೆ ಸಂದೇಶಗಳನ್ನು ಕಳುಹಿಸಲಾಗಿದೆ ಎಂದು ಇಸ್ರೇಲ್ನ ಚಾನೆಲ್ ವರದಿ ಮಾಡಿದೆ.

# ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ

**ಬೈರೂತ್:** ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆ ನಡುವೆ ಲೆಬನಾನ್ ತ್ಯಜಿಸುವಂತೆ ಭಾರತೀಯ ಪ್ರಜೆಗಳಿಗೆ ಅಲ್ಲಿನ ಭಾರತೀಯ ರಾಯಭಾರಿ ಕಚೇರಿ ಗುರುವಾರ ಸಲಹೆ ನೀಡಿದೆ.

ಬೈರೂತ್ ಮೇಲೆ ಇಸ್ರೇಲ್ ಮಂಗಳವಾರ ನಡೆಸಿದ ದಾಳಿಯಲ್ಲಿ ಲೆಬನಾನ್ನ ಹೋರಾಟ ಸಂಘಟನೆ ಹಿಜ್ಬುಲ್ಲಾದ ಉನ್ನತ ಸೇನಾ ಕಮಾಂಡರ್ ಫವಾದ್ ಶುಕ್ರ್ ಹತ್ಯೆಯಾದ ಹಿನ್ನೆಲೆಯಲ್ಲಿ ಭಾರತೀಯ ರಾಯಭಾರ ಕಚೇರಿ ಈ ಸಲಹೆ ನೀಡಿದೆ.

ಬುಧವಾರ ಹಮಾಸ್ ಟೆಹ್ರಾನ್ನಲ್ಲಿ ತನ್ನ ನಾಯಕ ಇಸ್ಮಾಯೀಲ್ ಹಾನಿಯೇಹ್ರನ್ನು ಹತ್ಯೆಗೈದಿರುವುದನ್ನು ದೃಢಪಡಿಸಿತ್ತು ಹಾಗೂ ಈ ಹತ್ಯೆಗೆ ಇಸ್ರೇಲ್ ಅನ್ನು ದೂಷಿಸಿತ್ತು. ಆದರೆ, ಈ ದಾಳಿಯಲ್ಲಿ ತಾನು ಭಾಗಿಯಾಗಿರುವುದನ್ನು ಇಸ್ರೇಲ್ ದೃಢಪಡಿಸಿಲ್ಲ. ನಿರಾಕರಿಸಿಯೂ ಇಲ್ಲ.

ಹಾನಿಯೇಹ್ ಹತ್ಯೆಗೆ ಇಸ್ರೇಲ್ ವಿರುದ್ಧ ಪ್ರತೀಕಾರಕ್ಕೆ ಇರಾನ್ ಬುಧವಾರ ಕರೆ ನೀಡಿತ್ತು.

ಇಲ್ಲಿನ ಇತ್ತೀಚೆಗಿನ ಬೆಳವಣಿಗೆಯ ಹಿನ್ನೆಲೆಯಲ್ಲಿ ಮುಂದಿನ ನೋಟಿಸ್ ನೀಡುವ ವರೆಗೆ ಲೆಬನಾನ್ಗೆ ಪ್ರಯಾಣಿಸದಂತೆ ಭಾರತೀಯ ಪ್ರಜೆಗಳಿಗೆ ಸಲಹೆ ನೀಡಲಾಗಿದೆ ಎಂದು ಬೈರೂತ್ನಲ್ಲಿರುವ ಭಾರತೀಯ ರಾಯಭಾರಿ ಕಚೇರಿ ತಿಳಿಸಿದೆ.

ಲೆಬನಾನ್ನಲ್ಲಿ ಉಳಿದಿರುವವರಿಗೆ ತೀವ್ರ ಎಚ್ಚರಿಕೆ ವಹಿಸುವಂತೆ, ತಮ್ಮ ಸಂಚಾರವನ್ನು ನಿರ್ಬಂಧಿಸುವಂತೆ ಹಾಗೂ ಸಂಪರ್ಕದಲ್ಲಿ ಇರುವಂತೆ ಭಾರತೀಯ ರಾಯಭಾರಿ ಕಚೇರಿ ಸೂಚಿಸಿದೆ.



ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಬೆಡ್‌ರೂಮ್ ಫೋಟೋ ಹಂಚಿಕೊಂಡ ನಮ್ರತಾ ಗೌಡ



'ಬಿಗ್ ಬಾಸ್' ಖ್ಯಾತಿಯ ನಮ್ರತಾ ಗೌಡ ಇದೀಗ ಬೆಡ್‌ರೂಮ್ ಫೋಟೋಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ. ಸಖತ್ ಹಾಟ್ ಆಗಿ ಕಾಣಿಸಿಕೊಂಡಿರುವ ನಮ್ರತಾ ಫೋಟೋಗೆ ನೆಟ್ಟಿಗರಿಂದ ಬಗೆ ಬಗೆಯ ಕಾಮೆಂಟ್‌ಗಳು ಬಂದಿದೆ.

ಸದಾ ಒಂದಲ್ಲಾ ಒಂದು ಫೋಟೋಗಳ ಮೂಲಕ ನಮ್ರತಾ ಸದ್ದು ಮಾಡುತ್ತಲೇ ಇರುತ್ತಾರೆ. ಮತ್ತೆ ನಯಾ ಫೋಟೋಶೂಟ್ ಮಾಡಿಸಿ ಗಂಡ್ ಹೈಕ್ಳ ಹಾರ್ಟ್‌ನಲ್ಲಿ ಚಿಟ್ಟೆ ಬಿಟ್ಟಿದ್ದಾರೆ.

ರೆಡ್ ಕಲರ್ ಲಾಂಗ್ ಡ್ರೆಸ್‌ನಲ್ಲಿ ನಟಿ ಸಖತ್ ಹಾಟ್ ಆಗಿ ಕಾಣಿಸಿಕೊಂಡಿದ್ದು, ಬೆಡ್ ಮೇಲೆ ಮಲಗಿ ಸೆಕ್ಸಿ ಆಗಿ ಪೋಸ್ ಕೊಟ್ಟಿದ್ದಾರೆ. ವಿವಿಧ ಭಂಗಿಯಲ್ಲಿ ನಟಿ ಕ್ಯಾಮೆರಾಗೆ ಪೋಸ್ ಕೊಟ್ಟಿದ್ದಾರೆ.

ನಮ್ರತಾ ನಯಾ ಫೋಟೋ ನೋಡ್ತಿದ್ದಂತೆ ಪಡ್ಡೆಹುಡುಗರಿಂದ ಬಗೆ ಬಗೆಯ ಕಾಮೆಂಟ್‌ಗಳು ಹರಿದು ಬಂದಿದೆ. ಬ್ಯೂಟಿಫುಲ್, ಸೆಕ್ಸಿ, ಬೋಲ್ಡ್ ಹೀಗೆ ಕಾಮೆಂಟ್ ಮಾಡುವ ಮೂಲಕ ಮೆಚ್ಚುಗೆ ಸೂಚಿಸಿದ್ದಾರೆ. ಇನ್ನೂ ನಿಮಗೆ ಬಾಯ್‌ಫ್ರೆಂಡ್ ಇದ್ದಾರಾ ಎಂದು ಕೇಳಿದ್ದಾರೆ.

'ಬಿಗ್ ಬಾಸ್ ಕನ್ನಡ ಸೀಸನ್ 10'ರಲ್ಲಿ ಸಂಚಲನ ಮೂಡಿಸಿದ ನಮ್ರತಾ ಗೌಡ ಅವರ ಹೆಸರು ಸ್ನೇಹಿತ್ ಗೌಡ ಮತ್ತು ಕಾರ್ತಿಕ್ ಮಹೇಶ್ ಜೊತೆ ಕೇಳಿ ಬಂದಿತ್ತು. ಆದರೆ ಕೆಲ ಮನಸ್ತಾಪಗಳಿಂದ ಸ್ನೇಹಿತ್ ಜೊತೆಗಿನ ಸ್ನೇಹಕ್ಕೆ ನಟಿ ಅಂತ್ಯ ಹಾಡಿದ್ದರು.

ಅಂದಹಾಗೆ, ಪುಟ್ಟಗೌರಿ ಮದುವೆ, ನಾಗಿಣಿ 2 ಸೀರಿಯಲ್ ನಮ್ರತಾಗೆ ಜನಪ್ರಿಯತೆ ನೀಡಿತ್ತು. ಅದರಲ್ಲೂ 'ನಾಗಿಣಿ 2' ಅವರ ವೃತ್ತಿರಂಗದಲ್ಲಿ ಬಿಗ್ ಬ್ರೇಕ್ ಕೊಟ್ಟಿದೆ.

ಬಾಲನಟಿಯಾಗಿ ಹಲವು ಸಿನಿಮಾಗಳಲ್ಲಿ ನಟಿಸಿದ್ದಾರೆ. 20ಕ್ಕೂ ಹೆಚ್ಚು ವರ್ಷಗಳಿಂದ ನಟನೆಯಲ್ಲಿ ನಮ್ರತಾ ಆಕ್ಟೀವ್ ಆಗಿದ್ದಾರೆ. ಇದೀಗ ಪೂರ್ಣ ಪ್ರಮಾಣದ ನಾಯಕಿಯಾಗಿ ಸಿನಿಮಾದಲ್ಲಿ ಮಿಂಚಲು ನಮ್ರತಾ ಸಿದ್ಧತೆ ನಡೆಸುತ್ತಿದ್ದಾರೆ.

# ಪ್ರಭಾಸ್‌ಗೆ ಮೃಣಾಲ್ ಠಾಕೂರ್ ಜೋಡಿ



ಸೀತಾರಾಮಂ, ಹಾಯ್ ನಾನ್ನಾ ಸಿನಿಮಾಗಳ ಮೂಲಕ ಸಕ್ಸಸ್ ಕಂಡ ಮೃಣಾಲ್ ಠಾಕೂರ್ ಇದೀಗ ತೆಲುಗಿನಲ್ಲಿ ಗೋಲ್ಡನ್ ಚಾನ್ಸ್ ಗಿಟ್ಟಿಸಿಕೊಂಡಿದ್ದಾರೆ. ಡಾರ್ಲಿಂಗ್ ಪ್ರಭಾಸ್ ಜೊತೆ ರೊಮ್ಯಾನ್ಸ್ ಮಾಡೋಕೆ ನಟಿ ರೆಡಿಯಾಗಿದ್ದಾರೆ.

ತೆಲುಗು ಮತ್ತು ಬಾಲಿವುಡ್‌ನಲ್ಲಿ ಗುರುತಿಸಿಕೊಳ್ತಿರುವ ಮೃಣಾಲ್‌ಗೆ ಪ್ರಭಾಸ್ ಚಿತ್ರತಂಡ ಮಣೆ ಹಾಕಿದೆ. ಸುಂದರ ಪ್ರೇಮಕಥೆಯಲ್ಲಿ ಪ್ರಭಾಸ್‌ಗೆ ಜೋಡಿಯಾಗಿ ಮೃಣಾಲ್ ಕಾಣಿಸಿಕೊಳ್ತಿದ್ದಾರೆ. ವಿಶೇಷ ಅಂದ್ರೆ, 'ಸೀತಾರಾಮಂ' ನಿರ್ದೇಶಕ ಈ ಚಿತ್ರಕ್ಕೂ ಡೈರೆಕ್ಷನ್ ಮಾಡುತ್ತಿದ್ದಾರೆ. ಹನು ರಾಘವಪುಡಿ ಆಕ್ಷನ್ ಕಟ್ ಹೇಳ್ತಿದ್ದಾರೆ.

ಪ್ರಭಾಸ್ ಮತ್ತು ಮೃಣಾಲ್ ಕಾಂಬಿನೇಷನ್ ಚಿತ್ರ ಇದೇ ಸೆಪ್ಟೆಂಬರ್‌ನಿಂದ ಶುರುವಾಗಲಿದೆ. ಈ ಸಿನಿಮಾ ತಂಡದಿಂದ ಈ ಕುರಿತು ಯಾವುದೇ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ. ಆದರೆ ಈ ಸುದ್ದಿ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.

ಇನ್ನೂ ಕಲ್ಕಿ ಸಿನಿಮಾದಲ್ಲಿ ಮೃಣಾಲ್ ಠಾಕೂರ್ ಅತಿಥಿ ಪಾತ್ರ ಮಾಡಿದ್ದರು. ಅವರ ನಟನೆಗೆ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಹಾಗಾಗಿ ಈ ಚಿತ್ರದ ಬಗ್ಗೆ ಅಭಿಮಾನಿಗಳಿಗೆ ಭಾರೀ ನಿರೀಕ್ಷೆಯಿದೆ.

# ವಿಷ್ಣು ಮಂಚು ನಟನೆಯ 'ಕಣ್ಣಪ್ಪ' ಚಿತ್ರದಲ್ಲಿ ಮಧುಬಾಲ



ಪಾತ್ರವರ್ಗದ ವಿಚಾರವಾಗಿಯೇ ಸಾಕಷ್ಟು ಸದ್ದು ಮಾಡುತ್ತಿದೆ ಟಾಲಿವುಡ್‌ನ 'ಕಣ್ಣಪ್ಪ' ಸಿನಿಮಾ. ಈಗಾಗಲೇ ಸರಣಿ ಸ್ಟಾರ್ ಕಲಾವಿದರನ್ನೇ ಒಳಗೊಂಡಿರುವ ಕಣ್ಣಪ್ಪ ಸಿನಿಮಾ ಸದ್ಯ ಶೂಟಿಂಗ್ ಜೊತೆಗೆ ಪೋಸ್ಟ್ ಪ್ರೊಡಕ್ಷನ್ ಕೆಲಸಗಳನ್ನೂ ಮುಂದುವರಿಸಿದೆ. ಜೊತೆಗೆ ಈಗಾಗಲೇ ಬಿಡುಗಡೆ ಆಗಿರುವ ಟೀಸರ್ ಸಹ ನೋಡುಗರ ಹುಬ್ಬೇರಿಸಿದೆ. ಪ್ಯಾನ್ ಇಂಡಿಯಾ ಮಟ್ಟದಲ್ಲಿ ನಿರ್ಮಾಣವಾಗುತ್ತಿರುವ ಈ ಸಿನಿಮಾದಲ್ಲಿ ವಿಷ್ಣು ಮಂಚು ಕಣ್ಣಪ್ಪನಾಗಿ ತಮ್ಮ ಖದರ್ ತೋರಿಸಲಿದ್ದಾರೆ. ಇದೀಗ ಇದೇ ಸಿನಿಮಾದಲ್ಲಿ ನಟಿಸುತ್ತಿರುವ ನಟಿ ಮಧುಬಾಲ ಅವರ ಲುಕ್ ಅನಾವರಣ ಮಾಡಲಾಗಿದೆ.

ನಟಿ ಮಧುಬಾಲಾ ಕಣ್ಣಪ್ಪ ಸಿನಿಮಾದಲ್ಲಿ ನಟಿಸಿದ್ದಾರೆ ಎಂಬುದು ಈ ಹಿಂದೆಯೇ ಗೊತ್ತಿದ್ದ ವಿಚಾರ. ಆದರೆ, ಅವರ ಪಾತ್ರ ಹೇಗಿರಲಿದೆ ಎಂಬ ಬಗ್ಗೆ ಈ ವರೆಗೂ ಚಿತ್ರತಂಡ ಸುಳಿವು ಬಿಟ್ಟುಕೊಟ್ಟಿರಲಿಲ್ಲ. ಇದೀಗ ಮಧುಬಾಲ ಅವರ ಪಾತ್ರ ಪರಿಚಯದ ಫಸ್ಟ್ ಲುಕ್ ರಿಲೀಸ್ ಆಗಿದೆ. ಕಣ್ಣಪ್ಪ ಚಿತ್ರದಲ್ಲಿ ಪನ್ನಗ ಹೆಸರಿನ ಖಡಕ್ ಪಾತ್ರದಲ್ಲಿ ಮಧುಬಾಲ ಮಿಂಚು ಹರಿಸಲಿದ್ದಾರೆ. ಕೈಯಲ್ಲಿ ಕತ್ತಿ ಹಿಡಿದು ಶತ್ರುಗಳ ಸಂಹಾರಕ್ಕೆ ನಿಂತಂತಿದೆ ಮಧುಬಾಲಾ ಅವರ ಫಸ್ಟ್ ಲುಕ್.

ಬೇಡ ಕುಲದ ನಾಯಕಿಯಾಗಿ ಮಧುಬಾಲಾ ಅವರ ಪಾತ್ರ ಕಣ್ಣಪ್ಪ ಚಿತ್ರದಲ್ಲಿ ಸಾಗಲಿದೆ. ತಮ್ಮ ಸಮುದಾಯದ ನಾಯಕಿ ಮಾತ್ರವಲ್ಲ, ಹೋರಾಟದಲ್ಲಿಯೂ ದಿಟ್ಟೆ, ಧೀರೆ. ಅಂದುಕೊಂಡಂತೆ ಮಧುಬಾಲ ಅವರ ಪಾತ್ರ ಮೂಡಿಬಂದಿದ್ದು, ನೋಡುಗರಿಗೆ ಇಷ್ಟವಾಗಲಿದೆ ಎಂಬುದು ಚಿತ್ರತಂಡ ಭರವಸೆಯ ಮಾತುಗಳು.




ಇನ್ನು ಈಗಾಗಲೇ ಕಣ್ಣಪ್ಪ ಚಿತ್ರದ ಟೀಸರ್ ಜಾಗತಿಕ ಮಟ್ಟದಲ್ಲಿಯೂ ಕ್ರೇಜ್ ಸೃಷ್ಟಿಸಿದೆ. ಇತ್ತೀಚಿನ ಕಾನ್ ಸಿನಿಮೋತ್ಸವದಲ್ಲಿ ಈ ಚಿತ್ರದ ಟೀಸರ್ ಬಿಡುಗಡೆಯಾಗಿ, ಜಾಗತಿಕ ಪ್ರೇಕ್ಷಕರ ಗಮನ ಸೆಳೆದಿತ್ತು.

ಕಣ್ಣಪ್ಪ ಸಿನಿಮಾ ಬರೀ ಇತಿಹಾಸವಲ್ಲ, ಇದು ಎರಡನೇ ಶತಮಾನದ ಚೋಳರ ಕಾಲದ ಕಥೆ ಎಂದು ಶಂಕರಾಚಾರ್ಯರು ಹೇಳಿದ್ದರು. 14ನೇ ಶತಮಾನದಲ್ಲಿ ಕವಿ ಧೂರ್ಜಟಿ ಈ ಬಗ್ಗೆ ಬರೆದಿದ್ದಾರೆ. 18ನೇ ಶತಮಾನದಲ್ಲಿ ಬ್ರಿಟಿಷರೂ ಇಂಗ್ಲಿಷ್‌ನಲ್ಲಿ ಇದನ್ನು ಉಲ್ಲೇಖಿಸಿದ್ದಾರೆ. ಇದೆಲ್ಲವನ್ನು ಅಧ್ಯಯನ ನಡೆಸಿ ಈ ಸಿನಿಮಾ ಮಾಡಲಾಗಿದೆ ಎಂದು ಟೀಸರ್ ಬಿಡುಗಡೆ ಸಂದರ್ಭದಲ್ಲಿ ವಿಷ್ಣು ಮಂಚು ಹೇಳಿಕೊಂಡಿದ್ದರು. ಹಾಗಾಗಿಯೇ ಕುತೂಹಲ ದುಪ್ಪಟ್ಟಾಗಿದೆ.

ಚಿತ್ರದಲ್ಲಿ ಮೋಹನ್ ಬಾಬು, ಪ್ರಭಾಸ್, ಅಕ್ಷಯ್ ಕುಮಾರ್, ಮೋಹನ್ ಲಾಲ್, ಶರತ್ ಕುಮಾರ್, ಮಧುಬಾಲ, ಕಾಜಲ್ ಅಗರ್ ವಾಲ್ ಸೇರಿ ಬಹು ತಾರಾಗಣವೇ ಇದೆ. ಮಗನ ಚಿತ್ರವನ್ನು ಸ್ವತಃ ತಂದೆ ಮೋಹನ್ ಬಾಬು ನಿರ್ಮಿಸುತ್ತಿರುವ ಈ ಚಿತ್ರವನ್ನು ಮುಖೇಶ್ ಕುಮಾರ್ ಸಿಂಗ್ ನಿರ್ದೇಶನ ಮಾಡುತ್ತಿದ್ದಾರೆ. ತೆಲುಗು ಮಾತ್ರವಲ್ಲದೆ, ತಮಿಳು, ಕನ್ನಡ, ಮಲಯಾಳಂ, ಹಿಂದಿ ಸೇರಿ ಇನ್ನೂ ಹಲವು ಭಾರತೀಯ ಭಾಷೆಗಳಿಗೂ ಈ ಚಿತ್ರ ಡಬ್ ಆಗಿ ರಿಲೀಸ್ ಆಗಲಿದೆ. ಡಿಸೆಂಬರ್‌ನಲ್ಲಿ 'ಕಣ್ಣಪ್ಪ' ಚಿತ್ರವನ್ನು ವಿಶ್ವದಾದ್ಯಂತ ಬಿಡುಗಡೆ ಮಾಡಲು ಪ್ಲ್ಯಾನ್ ಮಾಡಿದ್ದಾರೆ.

ಎವಿಎ ಎಂಟರ್‌ಟೈನ್‌ಮೆಂಟ್ಸ್ ಮತ್ತು 24 ಫ್ರೇಮ್ಸ್ ಫ್ಯಾಕ್ಟರಿ ಬ್ಯಾನರ್‌ಗಳಲ್ಲಿ ನೂರಾರು ಕೋಟಿ ಬಜೆಟ್‌ನಲ್ಲಿ ದೊಡ್ಡ ಕ್ಯಾನ್ವಾಸ್‌ನೊಂದಿಗೆ ಮೂಡಿಬರುತ್ತಿರುವ ಈ ಸಿನಿಮಾದ ಶೂಟಿಂಗ್ ಬಹುತೇಕ ಮುಗಿದಿದ್ದು, ವಿಎಫ್‌ಎಕ್ಸ್ ಕೆಲಸಕ್ಕೆ ಇಡೀ ತಂಡ ಹೆಚ್ಚಿನ ಶ್ರಮ ಹಾಕುತ್ತಿದೆ.



# 'ನನ್ನ ಕೈಯಲ್ಲಿ ಏನೂ ಇಲ್ಲ'

## ಐಪಿಎಲ್ ವಿದಾಯದ ಬಗ್ಗೆ ಧೋನಿ ಮಾತು

2025 ರ ಐಪಿಎಲ್ ಹಲವು ರೀತಿಯಲ್ಲಿ ವಿಶೇಷವಾಗಿರಲಿದೆ. ಅದಕ್ಕೆ ಪ್ರಮುಖ ಕಾರಣ ಐಪಿಎಲ್ ಆರಂಭಕ್ಕೂ ಮುನ್ನ ನಡೆಯುವ ಮೆಗಾ ಹರಾಜು. ಈ ಹರಾಜಿನಲ್ಲಿ ಹಲವು ವರ್ಷಗಳಿಂದ ಒಂದೇ ತಂಡದಲ್ಲಿ ಆಡುತ್ತಿರುವ ಆಟಗಾರರು ಮುಂದಿನ ಆವೃತ್ತಿಯಿಂದ ಬೇರೆ



ಇದು ಮಾತ್ರವಲ್ಲದೆ ಮೆಗಾ ಹರಾಜಿಗೂ ಮುನ್ನ ಎಲ್ಲಾ ಫ್ರಾಂಚೈಸಿಗಳು ಕೇವಲ ನಾಲ್ಕು ಆಟಗಾರರನ್ನು ತಮ್ಮಲ್ಲೇ ಉಳಿಸಿಕೊಳ್ಳಬೇಕಾಗಿರುವುದರಿಂದ ಕೆಲವು ಆಟಗಾರರ ಐಪಿಎಲ್ ವೃತ್ತಿಜೀವನ ಅಲ್ಲಿಗೆ ಕೊನೆಯಾಗಬಹುದು. ಅಂತಹ ಆಟಗಾರರಲ್ಲಿ ಯಶಸ್ವಿ ನಾಯಕ ಎಂಎಸ್ ಧೋನಿ ಕೂಡ ಒಬ್ಬರು.

ವಾಸ್ತವವಾಗಿ 2023 ರ ಆವೃತ್ತಿಯೇ ಧೋನಿಯ ಕೊನೆಯ ಐಪಿಎಲ್ ಎನ್ನಲಾಗುತ್ತಿತ್ತು. ಆದರೆ ಧೋನಿ 2024 ರ ಐಪಿಎಲ್‌ನಲ್ಲಿ ಕಣಕ್ಕಿಳಿಯುವ ಮೂಲಕ ಅಭಿಮಾನಿಗಳನ್ನು ರಂಜಿಸಿದ್ದರು. ಇದೀಗ ಧೋನಿ ಮುಂದಿನ ಆವೃತ್ತಿಯನ್ನು ಆಡುತ್ತಾರೋ, ಇಲ್ಲವೋ ಎಂಬುದರ ಬಗ್ಗೆ ಫ್ರಾಂಚೈಸಿಯಾಗಲಿ ಅಥವಾ ಧೋನಿಯಾಗಲಿ ಇದುವರೆಗೆ ಏನನ್ನು ಹೇಳಿಲ್ಲ.

ಆದರೆ ಈ ಕುರಿಯಾದ ಪ್ರಶ್ನೆಗೆ ಧೋನಿ ಇದೇ ಮೊದಲ ಬಾರಿಗೆ ಉತ್ತರಿಸಿದ್ದಾರೆ. ಹೈದರಾಬಾದ್‌ನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮುಂದಿನ ಆವೃತ್ತಿಯ ಐಪಿಎಲ್ ಆಡುತ್ತೀರಾ ಎಂಬ ಪ್ರಶ್ನೆಯನ್ನು ಧೋನಿಗೆ ಕೇಳಲಾಗಿದೆ. ಇದಕ್ಕೆ ಉತ್ತರಿಸಿದ ಧೋನಿ, ಇದೆಲ್ಲವೂ ತನ್ನ ಕೈಯಲ್ಲಿಲ್ಲ. ಐಪಿಎಲ್ 2025 ರ ಧಾರಣ ನಿಯಮಗಳನ್ನು ನೋಡಿದ ನಂತರವೇ ನಿರ್ಧಾರ ತೆಗೆದುಕೊಳ್ಳಲಾಗುವುದು. ಹೀಗಾಗಿ ಪ್ರಸ್ತುತ ಈ ನಿರ್ಧಾರವು ತನ್ನ ಕೈಯಲ್ಲಿಲ್ಲ ಎಂದು ಧೋನಿ ಹೇಳಿದ್ದಾರೆ.

ಮುಂದುವರೆದು ಧೋನಿ, ಆಟಗಾರರನ್ನು ಉಳಿಸಿಕೊಳ್ಳುವ ನಿರ್ಧಾರಕ್ಕಾಗಿ ನಾವು ಕಾಯಬೇಕಾಗಿದೆ. ಚೆಂಡು ಸದ್ಯಕ್ಕೆ ನಮ್ಮ ಅಂಗಳದಲ್ಲಿಲ್ಲ. ನಿಯಮಗಳು ಮತ್ತು ನಿಬಂಧನೆಗಳನ್ನು ಮಾಡಿದ ನಂತರ ನಾನು ನಿರ್ಧಾರ ತೆಗೆದುಕೊಳ್ಳುತ್ತೇನೆ. ತಂಡದ ಹಿತಾಸಕ್ತಿ ಪರಿಗಣಿಸಿದ ನಂತರವೇ ನಿರ್ಧಾರ ತೆಗೆದುಕೊಳ್ಳಲಾಗುವುದು ಎಂದಿದ್ದಾರೆ.

ಪ್ರಸ್ತುತ ಎಂಎಸ್ ಧೋನಿ ಅವರಿಗೆ 43 ವರ್ಷ ವಯಸ್ಸಾಗಿದ್ದು, ಕಳೆದ ಸೀಸನ್‌ನಲ್ಲಿ ಅವರು ಅದ್ಭುತ ಪ್ರದರ್ಶನ ನೀಡಿದ್ದಾರೆ. ಈಗ ಅವರ ಫಿಟ್ನೆಸ್ ಮೊದಲಿನಂತೆಯೇ ಇಲ್ಲವಾದರೂ, ಕಳೆದ ಆವೃತ್ತಿಯಲ್ಲಿ ಧೋನಿ, ವಿಕೆಟ್ ಕೀಪಿಂಗ್ ಜವಬ್ದಾರಿಯನ್ನು ಅತ್ಯುತ್ತಮವಾಗಿ ನಿರ್ವಹಿಸಿದ್ದರು. ಹೀಗಾಗಿ ಧೋನಿ ಫಿಟ್ ಇಲ್ಲ ಎಂದು ಹೇಳುವುದು ಅಸಾಧ್ಯ.

ಪ್ರದರ್ಶನದ ದೃಷ್ಟಿಯಿಂದ, ಧೋನಿ ನಿವೃತ್ತಿಗೆ ಇದು ಸರಿಯಾದ ಸಮಯವಲ್ಲ. ಧೋನಿ ಕಳೆದ ಸೀಸನ್‌ನಲ್ಲಿ ಫಿನಿಶರ್ ಆಗಿ ತಂಡಕ್ಕೆ ಸಾಕಷ್ಟು ಕೊಡುಗೆ ನೀಡಿದ್ದರು. ಧೋನಿ ಆಡಿದ 8 ಇನ್ನಿಂಗ್ಸ್‌ಗಳಲ್ಲಿ 53 ಕ್ಕಿಂತ ಹೆಚ್ಚು ಸರಾಸರಿ ಹಾಗೂ 220 ಕ್ಕಿಂತ ಹೆಚ್ಚು ಸ್ಟ್ರೈಕ್ ರೇಟ್‌ನಲ್ಲಿ 161 ರನ್ ಗಳಿಸುವಲ್ಲಿ ಯಶಸ್ವಿಯಾಗಿದ್ದರು.

ಮೆಗಾ ಹರಾಜಿನಲ್ಲಿ ಬಿಸಿಸಿಐ ನಾಲ್ವರು ಆಟಗಾರರನ್ನು ಮಾತ್ರ ಉಳಿಸಿಕೊಳ್ಳುವ ನಿಯಮ ರೂಪಿಸಿದರೆ ಮುಂದಿನ ಸೀಸನ್‌ನಲ್ಲಿ ಧೋನಿ ಆಡುವುದು ಕಷ್ಟ ಎಂಬ ವರದಿ ಇದೆ. ವರದಿಯ ಪ್ರಕಾರ, ಬಿಸಿಸಿಐ ಮುಂದಿನ ಸೀಸನ್‌ಗೂ ಮೊದಲು ಐದರಿಂದ ಆರು ಆಟಗಾರರನ್ನು ಉಳಿಸಿಕೊಳ್ಳುವ ನಿಯಮವನ್ನು ಮಾಡಿದರೆ ಮಾತ್ರ, ಚೆನ್ನೈ ತಂಡವು ಧೋನಿಯನ್ನು ಉಳಿಸಿಕೊಳ್ಳುತ್ತದೆ ಎಂದು ಹೇಳಲಾಗುತ್ತಿದೆ.

ಆದರೆ ಕೇವಲ ನಾಲ್ವರು ಆಟಗಾರರನ್ನು ಮಾತ್ರ ಉಳಿಸಿಕೊಳ್ಳಬೇಕಾಗಿ ಬಂದರೆ ನಾಯಕ ರುತುರಾಜ್ ಗಾಯಕ್ವಾಡ್, ರವೀಂದ್ರ ಜಡೇಜಾ, ಮತಿಶ ಪತಿರಾನ ಮತ್ತು ಶಿವಂ ದುಬೆ ಅವರನ್ನು ಉಳಿಸಿಕೊಳ್ಳಬಹುದು ಎಂದು ಹೇಳಲಾಗುತ್ತಿದೆ. ಹೀಗಾಗಿ ಇದೀಗ ಎಲ್ಲರ ಕಣ್ಣು ಐಪಿಎಲ್ ಆಡಳಿತ ಮಂಡಳಿಯ ನಿರ್ಧಾರದ ಮೇಲೆ ನೆಟ್ಟಿದೆ.

# ರಾಹುಲ್ ಅಥವಾ ಪಂತ್; ಮೊದಲ ಏಕದಿನಕ್ಕೆ ಯಾರು ವಿಕೆಟ್ ಕೀಪರ್

ಶ್ರೀಲಂಕಾ ವಿರುದ್ಧ ಮೂರು ಪಂದ್ಯಗಳ ಟಿ20 ಸರಣಿಯನ್ನು 3–0 ಅಂತರದಿಂದ ಗೆದ್ದುಕೊಂಡಿರುವ ಟೀಂ ಇಂಡಿಯಾ ಇದೀಗ ಅಷ್ಟೇ ಸಂಖ್ಯೆಯ ಏಕದಿನ ಸರಣಿಗೆ ಸಜ್ಜಾಗಿದೆ. ಉಭಯ ತಂಡಗಳ ನಡುವಿನ ಮೊದಲ ಏಕದಿನ ಪಂದ್ಯ ಕೊಲಂಬೊದಲ್ಲಿ ನಾಳೆ ಅಂದರೆ ಆಗಸ್ಟ್ 2 ರಂದು ನಡೆಯಲ್ಲಿದೆ.



ಈ ಸರಣಿಯ ಇನ್ನೊಂದು ವಿಶೇಷವೆಂದರೆ.. ಟಿ20 ವಿಶ್ವಕಪ್ ಬಳಿಕ ಟಿ20 ಮಾದರಿಗೆ ವಿದಾಯ ಹೇಳಿದ್ದ ವಿರಾಟ್ ಕೊಹ್ಲಿ ಹಾಗೂ ರೋಹಿತ್ ಶರ್ಮಾ, ಏಕದಿನ ಸರಣಿಯಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಇದಲ್ಲದೆ ಬಹಳ ದಿನಗಳ ನಂತರ ಕೆಎಲ್ ರಾಹುಲ್ ಹಾಗೂ ಶ್ರೇಯಸ್ ಅಯ್ಯರ್ ಕೂಡ ಏಕದಿನ ತಂಡದಲ್ಲಿ ಸ್ಥಾನ ಪಡೆದಿದ್ದಾರೆ. ಮತ್ತೊಂದು ವಿಚಾರವೆಂದರೆ ವರ್ಷಗಳ ಬಳಿಕ ರಿಷಬ್ ಪಂತ್ ಏಕದಿನ ತಂಡದಲ್ಲಿ ಆಡಲಿದ್ದಾರೆ.

ವಾಸ್ತವವಾಗಿ 2022 ರ ಡಿಸೆಂಬರ್‌ನಲ್ಲಿ ಕಾರು ಅಪಘಾತಕ್ಕೀಡಾಗಿದ್ದ ಪಂತ್, ಅಂದಿನಿಂದ ಭಾರತ ಏಕದಿನ ತಂಡದಲ್ಲಿ ಕಾಣಿಸಿಕೊಂಡಿಲ್ಲ. ಟಿ20 ವಿಶ್ವಕಪ್ ಮೂಲಕ ಭಾರತ ಟಿ20 ತಂಡದಲ್ಲಿ ಆಡಿದ್ದ ಪಂತ್, ಇದೀಗ ಶ್ರೀಲಂಕಾ ವಿರುದ್ಧದ ಏಕದಿನ ಸರಣಿಗೆ ತಂಡದಲ್ಲಿ ಆಯ್ಕೆಯಾಗಿದ್ದಾರೆ. ಇತ್ತ ಕನ್ನಡಿಗ ಕೆಎಲ್ ರಾಹುಲ್ ಕೂಡ ಏಕದಿನ ತಂಡದಲ್ಲಿ ಸ್ಥಾನ ಪಡೆದಿದ್ದಾರೆ.

ಅಂದರೆ ಏಕದಿನ ಸರಣಿಗೆ ವಿಕೆಟ್ ಕೀಪರ್‌ಗಳಾಗಿ ಭಾರತ ತಂಡದಲ್ಲಿ ರಿಷಬ್ ಪಂತ್ ಹಾಗೂ ಕೆಎಲ್ ರಾಹುಲ್ ಆಯ್ಕೆಯಾಗಿದ್ದಾರೆ. ಹೀಗಾಗಿ ಈ ಇಬ್ಬರಲ್ಲಿ ನಾಯಕ ರೋಹಿತ್ ಯಾರನ್ನು ಪ್ಲೇಯಿಂಗ್ 11 ನಲ್ಲಿ ಆಯ್ಕೆ ಮಾಡಿಕೊಳ್ಳುತ್ತಾರೆ ಎಂಬುದು ಕುತೂಹಲಕಾರಿ ಸಂಗತಿಯಾಗಿದೆ.

ಮೇಲ್ನೋಟಕ್ಕೆ ರೋಹಿತ್ ಯಾವಾಗಲೂ ರಿಷಬ್ ಪಂತ್ ಅವರನ್ನು ಬೆಂಬಲಿಸುತ್ತಾರೆ ಮತ್ತು ಅವರಿಗೆ ಹೆಚ್ಚಿನ ಅವಕಾಶಗಳನ್ನು ನೀಡಿರುವುದನ್ನು ನಾವು ಕಂಡಿದ್ದೇವೆ. ರೋಹಿತ್ ನಾಯಕತ್ವದಲ್ಲಿ ಮ್ಯಾಂಚೆಸ್ಟರ್‌ನಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ಕೊನೆಯ ಏಕದಿನ ಸರಣಿಯಲ್ಲಿ ರಿಷಭ್ ಅತ್ಯುತ್ತಮ ಶತಕ ಗಳಿಸುವ ಮೂಲಕ ಟೀಂ ಇಂಡಿಯಾವನ್ನು ಗೆಲುವಿನತ್ತ ಮುನ್ನಡೆಸಿದ್ದರು.

ರಾಹುಲ್ ವಿಶ್ವಕಪ್‌ನ 10 ಇನ್ನಿಂಗ್ಸ್‌ಗಳಲ್ಲಿ 75 ಸರಾಸರಿಯಲ್ಲಿ 452 ರನ್ ಕಲೆಹಾಕಿದ್ದಲ್ಲದೆ, ವಿಕೆಟ್ ಕೀಪಿಂಗ್‌ನಲ್ಲಿ 17 ವಿಕೆಟ್ ಕೂಡ ಉರುಳಿಸಿದ್ದರು. ಇಂತಹ ಪರಿಸ್ಥಿತಿಯಲ್ಲಿ ಟೀಂ ಇಂಡಿಯಾ ವಿಶ್ವಕಪ್ ನಂತೆಯೇ ಬ್ಯಾಟಿಂಗ್ ಕ್ರಮಾಂಕದೊಂದಿಗೆ ಕಣಕ್ಕಿಳಿಯುವ ಮಾಡುವ ಸಾಧ್ಯತೆ ಹೆಚ್ಚಿದೆ. ಹಾಗಾಗಿ ಲಂಕಾ ವಿರುದ್ಧ ರಾಹುಲ್ ಕಣಕ್ಕಿಳಿಯುವುದು ಭಾಗಶಃ ಖಚಿತವಾಗಿದೆ.

### ಅನ್ನಭಾಗ್ಯ ಯೋಜನೆ

# ಕರ್ನಾಟಕಕ್ಕೆ ಅಕ್ಕಿ ಕೊಡಲು ಕೇಂದ್ರ ಸಿದ್ಧ

**ನವದೆಹಲಿ:** ಅನ್ನಭಾಗ್ಯ ಯೋಜನೆಯಡಿ ಕರ್ನಾಟಕ ಸರ್ಕಾರದ ಪಾಲಿನ ಉಚಿತ 5 ಕೆಜಿ ಅಕ್ಕಿ ನೀಡಲು ಕೇಂದ್ರದಿಂದ ಅಕ್ಕಿ ದೊರೆಯುತ್ತಿಲ್ಲ ಎಂದು ರಾಜ್ಯ ಕಾಂಗ್ರೆಸ್ ಸರ್ಕಾರ ಹಾಗೂ ಸಚಿವರು ಆರೋಪಿಸುತ್ತಲೇ ಬಂದಿದ್ದಾರೆ. ದುಡ್ಡು ಕೊಟ್ಟರೂ ಅಕ್ಕಿ ಕೊಡಲು ಕೇಂದ್ರ ಸರ್ಕಾರ ಸಿದ್ಧವಿಲ್ಲ. ಬಡವರ ಅಕ್ಕಿ ವಿಚಾರದಲ್ಲೂ ರಾಜಕೀಯ ಮಾಡುತ್ತಿದೆ ಎಂಬ ಆರೋಪ ನಿರಂತರ ಕೇಳಿಬಂದಿತ್ತು. ಆದರೆ, ಕೇಂದ್ರ ಸರ್ಕಾರ ಬೇರೆಯದೇ ಕಾರಣ ನೀಡಿ ತನ್ನ ನಡೆಯನ್ನು ಸಮರ್ಥಿಸಿಕೊಂಡಿತ್ತು. ಇದೀಗ ಮಹತ್ವದ ಬೆಳವಣಿಗೆಯಲ್ಲಿ, ರಾಜ್ಯಕ್ಕೆ ಅಕ್ಕಿ ನೀಡಲು ಕೇಂದ್ರ ಸಿದ್ಧವಾಗಿದೆ ಎಂದು ಆಹಾರ ಸಚಿವ ಪ್ರಲ್ಹಾದ್ ಜೋಶಿ ಘೋಷಿಸಿದ್ದಾರೆ.

ದೆಹಲಿಯಲ್ಲಿ ಮಾತನಾಡಿದ ಅವರು, ರಾಜ್ಯಕ್ಕೆ ಅಕ್ಕಿಕೊಡಲು ಕೇಂದ್ರ ಸಿದ್ಧವಿದೆ. ಮನವಿ ಬಂದರೆ ಹೆಚ್ಚುವರಿ ಅಕ್ಕಿ ಕೊಡಲಿದ್ದೇವೆ. ಕೆಜಿಗೆ 28ರೂ.ನಂತೆ ನಾವು ಅಕ್ಕಿ ಕೊಡಲು ಸಿದ್ಧರಿದ್ದೇವೆ. ಎಷ್ಟು ಬೇಕಾದರೂ ಅಕ್ಕಿಕೊಡಲಿದ್ದೇವೆ ಎಂದು ಹೇಳಿದ್ದಾರೆ. ಈ ಹಿಂದೆ ರಾಜ್ಯಕ್ಕೆ ಅಕ್ಕಿ ಕೊಡಲು ಕೇಂದ್ರ ಸುತರಾಂ ಒಪ್ಪಿರಲಿಲ್ಲ. ಇರುವ ಸ್ಟಾಕನ್ನೆಲ್ಲ ರಾಜ್ಯಕ್ಕೆ ಮಾರಾಟ ಮಾಡಿ ಖಾಲಿ ಮಾಡಿದರೆ ತುರ್ತು ಸಂದರ್ಭಗಳಲ್ಲಿ ವಿತರಣೆ ಮಾಡಲು ಕಷ್ಟ ಎಂಬುದು ಕೇಂದ್ರದ ವಾದವಾಗಿತ್ತು.

ಅಕ್ಕಿ ನೀಡುವಂತೆ ಕರ್ನಾಟಕ ಸರ್ಕಾರ ಹಲವು ಬಾರಿ ಕೇಂದ್ರಕ್ಕೆ ಮನವಿ ಮಾಡಿತ್ತು. ರಾಜ್ಯದಿಂದ ಸಚಿವ ಕೆಹೆಚ್ ಮುನಿಯಪ್ಪ ಖುದ್ದು ದೆಹಲಿಗೆ ಬೇಟಿ ಮಾಡಿ ಕೇಂದ್ರ ಸಚಿವರ ಜತೆ ಮಾತುಕತೆಯನ್ನೂ ನಡೆಸಿದ್ದರು. ಆದರೆ, ಪ್ರಯೋಜನವಾಗಿರಲಿಲ್ಲ.



ನಂತರ ರಾಜ್ಯ ಸರ್ಕಾರದ ಪಾಲಿನ ಅಕ್ಕಿಯ ಬದಲು ಅದರ ಮೊತ್ತವನ್ನು ಫಲಾನುಭವಿಗಳ ಖಾತೆಗೆ ನೇರ ನಗದು ವರ್ಗಾವಣೆ ಮೂಲಕ ನೀಡಲು ಆರಂಭಿಸಲಾಗಿತ್ತು. ಇದೀಗ ಕೇಂದ್ರದಿಂದ ಅಕ್ಕಿ ದೊರೆತರೆ ರಾಜ್ಯ ಸರ್ಕಾರವು ಫಲಾನುಭವಿಗಳಿಗೆ ಅಕ್ಕಿಯನ್ನೇ ವಿತರಿಸಬಹುದಾಗಿದೆ.

**ಪಾದಯಾತ್ರೆ ನಡೆಯಲಿದೆ: ಜೋಶಿ:** ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಹಮ್ಮಿಕೊಂಡಿರುವ ಮೈಸೂರು ಚಲೋ ಪಾದಯಾತ್ರೆ ಅಂದುಕೊಂಡಂತೆಯೇ ನಡೆಯಲಿದೆ ಎಂದು ಪ್ರಲ್ಹಾದ್ ಜೋಶಿ ತಿಳಿಸಿದರು. ಪಾದಯಾತ್ರೆಗೆ ಜೆಡಿಎಸ್ ಬೆಂಬಲವಿಲ್ಲದಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಹೆಚ್‌ಡಿ ಕುಮಾರಸ್ವಾಮಿ ಜತೆ ಮಾತುಕತೆ ಮಾಡಿ ಪಾದಯಾತ್ರೆ ನಡೆಸಲಿದ್ದೇವೆ. ಪಕ್ಷದ ನಾಯಕರಾದ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ ಜೊತೆಯೂ ಮಾತನಾಡುತ್ತವೆ ಎಂದು ತಿಳಿಸಿದ್ದಾರೆ.

ಜೆಡಿಎಸ್ ಅನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದ ಕಾರಣ ಪಾದಯಾತ್ರೆಗೆ ಬೆಂಬಲ ನೀಡುವುದಿಲ್ಲ. ಚುನಾವಣೆ ಸಂದರ್ಭ ಮೈತ್ರಿ ಬೇರೆ, ರಾಜಕಾರಣ ಬೇರೆ ಎಂದು ಕುಮಾರಸ್ವಾಮಿ ಬುಧವಾರ ಹೇಳಿದ್ದರು.

**ಕಾಂಗ್ರೆಸ್ ಸಚಿವರಿಗೆ ಜೋಶಿ ತಿರುಗೇಟು:** ಮುಖ್ಯಮಂತ್ರಿಗಳ ವಿರುದ್ಧದ ತನಿಖೆ ವಿಚಾರವಾಗಿ ಕಾಂಗ್ರೆಸ್ ನಾಯಕರು, ಸಚಿವರಿಗೆ ಜೋಶಿ ತಿರುಗೇಟು ನೀಡಿದ್ದಾರೆ. ರಾಜ್ಯಪಾಲರ ಬಗ್ಗೆ ಮಾತನಾಡಲು ಕಾಂಗ್ರೆಸ್ ನಾಯಕರಿಗೆ ಹಕ್ಕಿಲ್ಲ. ಅವರು ಸಂವಿಧಾನದ ರಕ್ಷಕರು. ಗಂಭೀರ ಸ್ವರೂಪದ ಆರೋಪ ಬಂದಾಗ ತನಿಖೆಗೆ ಅನುಮತಿ ಕೊಡ್ತಾರೆ. ಕಾಂಗ್ರೆಸ್ ನಾಯಕರು ಯಾಕೆ ಭಯದಲ್ಲಿದ್ದಾರೆ ಅವರೇನಾದ್ರು ನೇರವಾಗಿ ಜೈಲಿಗೆ ಹಾಕುತ್ತೇನೆ ಎಂದರೇ ಎಂದು ಅವರು ಪ್ರಶ್ನಿಸಿದರು.

ಅಕ್ರಮ ನಡೆದಿರುವ ಬಗ್ಗೆ ಸಿಎಂ ಒಪ್ಪಿಕೊಂಡಿದ್ದಾರೆ. ಹಿಂದೆ ನಾನು 100 ಪರ್ಸೆಂಟ್ ಸರ್ಕಾರದ ಎಂದಿದ್ದೆ. ಬಹಳ ಅಂದ್ರೆ 70–80 ಪರ್ಸೆಂಟ್ ಎಂದು ರಿಯಾಯಿತಿ ಕೊಡಬಹುದು. ಹಿಂದೆ ರಾಜ್ಯಪಾಲರನ್ನು ಕಾಂಗ್ರೆಸ್ ನಾಯಕರು ಹೊಗಳಿದ್ದರು. ಈಗ ಯಾಕೆ ತೆಗಳುತ್ತಿದ್ದಾರೆ ಬಿಜೆಪಿ ಭ್ರಷ್ಟಾಚಾರದ ಬಗ್ಗೆ ತನಿಖೆ ಮಾಡಲಿ, ಸರ್ಕಾರ ಅವರದ್ದೇ ಇದೆ. ನಮ್ಮನ್ನು ಹೆದರಿಸುವ ಪ್ರಯತ್ನ ಮಾಡುತ್ತಿದ್ದಾರೆ. ಹಗರಣ ಇದಿದ್ದರೆ ಕಾಂಗ್ರೆಸ್ ನಾಯಕರು ರಾಜೀನಾಮೆ ನೀಡುತ್ತಿದ್ದರೇ ನಮ್ಮ ರಾಜ್ಯ ಅಧ್ಯಕ್ಷರು ತನಿಖೆ ಮಾಡಿ ಎಂದು ಸವಾಲು ಹಾಕಿದ್ದಾರೆ ಎಂದು ಜೋಶಿ ಹೇಳಿದರು.

# ಎಸ್‌ಸಿ, ಎಸ್‌ಟಿ ಒಳ ಮೀಸಲಾತಿ ಕಾನೂನುಬದ್ಧ

**ನವದೆಹಲಿ:** ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳಿಗೆ ನೀಡಲಾಗಿರುವ ಮೀಸಲಾತಿ ಒಳಗಡೆಯೇ ಮೀಸಲಾತಿ ನೀಡಲು ಸುಪ್ರೀಂ ಕೋರ್ಟ್ ಒಪ್ಪಿಗೆ ನೀಡಿದೆ. ಒಳ ಮೀಸಲಾತಿ ಕಾನೂನು ಬದ್ಧ ಎಂದು ಹೇಳುವ ಮೂಲಕ ಐತಿಹಾಸಿಕ ತೀರ್ಪು ಪ್ರಕಟಿಸಿದೆ. ಯಾವ ಜಾತಿ, ಪಂಗಡಗಳಿಗೆ ಒಳ ಮೀಸಲಾತಿ ನೀಡಬೇಕೆಂಬ ಅಧಿಕಾರವನ್ನು ಕೋರ್ಟ್ ರಾಜ್ಯಗಳ ವಿವೇಚನೆಗೆ ನೀಡಿದೆ.



ಮುಖ್ಯ ನ್ಯಾಯಮೂರ್ತಿ ಚಂದ್ರಚೂಡ್ ನೇತೃತ್ವದ ನ್ಯಾ. ಬಿಆರ್ ಗವಾಯಿ, ವಿಕ್ರಮ್ ನಾಥ್, ಬೇಲಾ ಎಂ ತ್ರಿವೇದಿ, ಪಂಕಜ್ ಮಿಥಾಲ್, ಮನೋಜ್ ಮಿಶ್ರಾ ಮತ್ತು ಸತೀಶ್ ಚಂದ್ರ ಶರ್ಮಾ ಅವರನ್ನೊಳಗೊಂಡ ಸಂವಿಧಾನ ಪೀಠ ಈ ಮಹತ್ವದ ಆದೇಶ ಪ್ರಕಟಿಸಿದೆ.

ನ್ಯಾಯಮೂರ್ತಿ ಬೇಲಾ ತ್ರಿವೇದಿ ಭಿನ್ನ ತೀರ್ಪು ನೀಡಿ ಅಂತಹ ಉಪ–ವರ್ಗೀಕರಣವನ್ನು ಅನುಮತಿಸಲಾಗುವುದಿಲ್ಲ ಎಂದು ತೀರ್ಪು ಪ್ರಕಟಿಸಿದರು.

ಒಳ ಮೀಸಲಾತಿ ಸಂಬಂಧ ಪಂಜಾಬ್ ಪರಿಶಿಷ್ಟ ಜಾತಿ ಮತ್ತು ಹಿಂದುಳಿದ ವರ್ಗಗಳ (ಸೇವೆಗಳಲ್ಲಿ ಮೀಸಲಾತಿ) ಕಾಯ್ದೆಯ ಸಿಂಧುತ್ವ ಪ್ರಶ್ನಿಸಿ ಸಲ್ಲಿಕೆಯಾಗಿದ್ದ ಅರ್ಜಿ ವಿಚಾರಣೆ ನಡೆಸಿದ ಕೋರ್ಟ್ ಈ ಮಹತ್ವದ ಆದೇಶ ಪ್ರಕಟಿಸಿತು. ಪಂಜಾಬ್, ತಮಿಳುನಾಡು ಮತ್ತು ಇತರ ರಾಜ್ಯಗಳಲ್ಲಿ ಅಂತಹ ಉಪ–ವರ್ಗೀಕರಣವನ್ನು ಒದಗಿಸುವ ಕಾನೂನುಗಳ ಸಿಂಧುತ್ವವನ್ನು ನ್ಯಾಯಾಲಯ ಎತ್ತಿಹಿಡಿದಿದೆ.

ಪಂಜಾಬ್ ಸರ್ಕಾರ ರಚನೆ ಮಾಡಿದ್ದ ಕಾಯ್ದೆಯನ್ನು ಪಂಜಾಬ್ ಮತ್ತು ಹರ್ಯಾಣ ಹೈಕೋರ್ಟ್ ರದ್ದು ಮಾಡಿತ್ತು. ಈ ಆದೇಶವನ್ನು ಪ್ರಶ್ನಿಸಿ ಪಂಜಾಬ್ ಸರ್ಕಾರ ಸುಪ್ರೀಂನಲ್ಲಿ ಮೇಲ್ಮನವಿ ಸಲ್ಲಿಸಿತ್ತು.

**ಕೋರ್ಟ್ ಆದೇಶದಲ್ಲಿ ಏನಿದೆ :** ಎಸ್‌ಸಿ/ಎಸ್‌ಟಿ ಜನರು ಎದುರಿಸುತ್ತಿರುವ ವ್ಯವಸ್ಥಿತ ತಾರತಮ್ಯದಿಂದಾಗಿ ಸಮಾಜದಲ್ಲಿ ಮೇಲಕ್ಕೆ ಬರಲು ಸಾಧ್ಯವಾಗುತ್ತಿಲ್ಲ. ಸಂವಿಧಾನದ 14ನೇ ವಿಧಿ ಜಾತಿಯ ಉಪ–ವರ್ಗೀಕರಣವನ್ನು ಅನುಮತಿಸುತ್ತದೆ. ಮೀಸಲಾತಿ ಪಟ್ಟಿಗೆ ಸಮುದಾಯಗಳ ಸೇರ್ಪಡೆ ಅಥವಾ ತೆಗೆಯಲು ತುಷ್ಟೀಕರಣ ರಾಜಕೀಯ ಮಾಡಬಾರದು.

ಪರಿಶಿಷ್ಟ ಜಾತಿಗಳು ಏಕರೂಪದ ಗುಂಪಲ್ಲ. ಎಸ್‌ಸಿಗಳಲ್ಲಿ ಹೆಚ್ಚು ತಾರತಮ್ಯವನ್ನು ಅನುಭವಿಸಿದವರಿಗೆ 15% ಮೀಸಲಾತಿಯಲ್ಲಿ ಹೆಚ್ಚಿನ ಅವಕಾಶ ನೀಡಲು ಸರ್ಕಾರಗಳು ಅವರನ್ನು ಉಪವರ್ಗೀಕರಿಸಬಹುದು.

ಎಸ್‌ಸಿಗಳಲ್ಲಿ ಜಾತಿಗಳ ಉಪ–ವರ್ಗೀಕರಣವು ಅವರ ತಾರತಮ್ಯದ ಮಟ್ಟವನ್ನು ಆಧರಿಸಿರಬೇಕು. ಸರ್ಕಾರಿ ಉದ್ಯೋಗಗಳು ಮತ್ತು ಶಿಕ್ಷಣ ಸಂಸ್ಥೆಗಳಲ್ಲಿ ಅವರ ಪ್ರಾತಿನಿಧ್ಯದ ಕುರಿತು ಪ್ರಾಯೋಗಿಕ ಡೇಟಾವನ್ನು ಸಂಗ್ರಹಿಸುವ ಮೂಲಕ ರಾಜ್ಯಗಳು ಮಾಡಬಹುದು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com